ಸಂಪುಟ: 21, ಸಂಚಿಕೆ: 110, ಪುಟಗಳು: 8, ಮಂಗಳವಾರ, 30 ಜನವರಿ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

### ಪಂಚಾಂಗ

(ಮಂಗಳವಾರ 30, ಜನವರಿ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ,
- ಕೃಷ್ಣ ಪಕ್ಷ, ಪಂಚಮಿ
- ಆಶ್ಲೇಷ ನಕ್ಷತ್ರ / ಮಖ ನಕ್ಷತ್ರ''.
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

# 40 ಬಂಡಿಗೆ ಎತ್ತು ಮತ್ತು ಕುದುರೆ ಕಟ್ಟಿ ಸ್ಪರ್ಧೆ ನಡೆಸಿದ ರೈತರು!

**ಬೆಳಗಾವಿ:** ಅಲ್ಲಿ ಅಪಾರ ಜನಸ್ತೋಮ ನೆರೆದಿತ್ತು, ಎತ್ತಿನ ಬಂಡಿಗೆ ಒಂದು ಎತ್ತು, ಒಂದು ಕುದುರೆ ಹೆಗಲು ಕೊಟ್ಟು ಜಿದ್ದಿಗೆ ಬಿದ್ದಿದ್ದವು. ಗಡಿ ಭಾಗದ ಜನ ನಿನ್ನೆ ಭಾನುವಾರ ಖಾಲಿ ಎತ್ತಿನ ಬಂಡಿ ಓಟದ ಸ್ಪರ್ಧೆ ಕಂಡು ಫುಲ್ ಜೋಶ್ ನಲ್ಲಿದ್ದರು. ಅಷ್ಟಕ್ಕೂ ಕುದುರೆ ಎತ್ತುಗಳ ಓಟ ರಸ್ತೆ ಅಕ್ಕಪಕ್ಕದಲ್ಲಿ ನಿಂತ ಜನ, ಶಿಳ್ಳೆ ಚಪ್ಪಾಳೆ ಮೂಲಕ ಕುಣಿದು ಕುಪ್ಪಳಿಸುತ್ತಿರುವುದು, ಒಂದೇ ಬಂಡಿ ನೊಗಕ್ಕೆ ಹೆಗಲು ಕೊಟ್ಟು ಜಿದ್ದಿಗೆ ಬಿದ್ದು ಓಡುತ್ತಿರುವ ಎತ್ತು ಮತ್ತು ಕುದುರೆ. ಎರಡೆರಡು ರೇಸ್ ಗಳನ್ನ ನೋಡಿ ರೋಮಾಂಚನಗೊಂಡ ಜನ. ಅಷ್ಟಕ್ಕೂ ಈ ಎಲ್ಲ ದೃಶ್ಯ ಕಂಡು ಬಂದಿದ್ದು ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಬೆನಾಡಿ ಗ್ರಾಮದಲ್ಲಿ.

ಸಂಸದ ಅಣ್ಣಾ ಸಾಹೇಬ್ ಜೊಲ್ಲೆ ನೇತೃತ್ವದಲ್ಲಿ ಗಡಿ ಭಾಗದ ಜನರಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಜತೆಗೆ ಗ್ರಾಮೀಣ ಕ್ರೀಡೆ ಉತ್ತೇಜಿಸುವುದಕ್ಕೆ ಆಯೋಜನೆ ಮಾಡಿದ್ದರು. ಇಂದು ಬೆಳಗ್ಗೆ ಆರಂಭವಾದ ರೇಸ್ ನಲ್ಲಿ ಮೊದಲು ಎತ್ತಿನ ಬಂಡಿ ರೇಸ್ ಶುರು ಮಾಡಿದರು. ಸುಮಾರು ಐದು ಕಿಮೀ ವರೆಗೂ ಈ ಓಟ ಫಿಕ್ಸ್



ಮಾಡಿ ಅಖಾಡಕ್ಕಿಳಿಸಿದ್ರೂ, ಒಂದಲ್ಲಾ ಎರಡಲ್ಲಾ ಒಂದೇ ಬಾರಿ 40 ಎತ್ತಿನ ಬಂಡಿಗಳು ರೇಸ್ ಗಿಳಿದು ಓಟ ಶುರು ಮಾಡಿದವು. ಎತ್ತುಗಳ ಓಟ ಕಂಡು ನೆರೆದಿದ್ದ ಜನ ಶಿಳ್ಳೆ ಚಪ್ಪಾಳೆ ಹೊಡೆದು ಹುರುದುಂಬಿಸಿದರು.

ಇನ್ನು ಬರೀ ಎತ್ತುಗಳ ರೇಸ್ ಮಾತ್ರ ಇಲ್ಲಿ ಇರಲಿಲ್ಲ ಇದಕಿಂದ ಮೇಲಾಗಿ ಎತ್ತುಗಳ ಜತೆಗೆ ಕುದುರೆ ಕೂಡ ರೇಸ್ ಗಿಳಿದಿದ್ದವು. ಬಂಡಿಗೆ ಒಂದು ಕಡೆ ಎತ್ತು ಮತ್ತೊಂದು ಕಡೆ ಕುದುರೆ ಹೆಗಲು ಕೊಟ್ಟು ಓಟಕ್ಕಿಳಿದಿದ್ದವು. ಎತ್ತು ಮತ್ತು ಕುದುರೆ ಏಕಕಾಲದಲ್ಲಿ ಎತ್ತಿನ ಬಂಡಿಯನ್ನ ಎಳೆದುಕೊಂಡು ಓಡುವ ದೃಶ್ಯ ರಣರೋಚಕವಾಗಿತ್ತು. ನೋಡುಗರನ್ನ ತುದಿಗಾಲಿನಲ್ಲಿ ನಿಲ್ಲುವಂತೆ ಮಾಡಿ ಹುಚ್ಚೆದ್ದು ಕುಣಿಸಿತು.

ಈ ರೇಸ್ ಕೂಡ ಐದು ಕಿಮೀ ನಡೆದಿದ್ದು ಬಂಡಿಯ ಹಿಂಬದಿಯಲ್ಲಿ ಬೈಕ್ ಗಳನ್ನ ತುಂಬಿಕೊಂಡು ಹೋಗಿ ಹುರಿದುಂಬಿಸುವ ಕೆಲಸ ಮಾಡಿದರು. ಈ ಒಂದು ರೇಸ್ ಗೆ ದೂರದ ಮಹಾರಾಷ್ಟ್ರದಿಂದ ಸೇರಿದಂತೆ ಬೆಳಗಾವಿ, ಚಿಕ್ಕೋಡಿ, ರಾಯಬಾಗ, ಅಥಣಿ ಮತ್ತು ಬಾಗಲಕೋಟೆ ಜಿಲ್ಲೆಯಿಂದಲೂ ಎತ್ತಿನ ಬಂಡಿ ತೆಗೆದುಕೊಂಡು ಬಂದಿದ್ದರು. ಇನ್ನೂ ಗೆದ್ದವರಿಗೆ ಐದು ಲಕ್ಷ ನಗದು ನೀಡಿ ಚಿಕ್ಕೋಡಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ಗೌರವಿಸಿ ಪ್ರೋತ್ಸಾಹಿಸಿದರು

ಒಟ್ಟಿನಲ್ಲಿ ಗ್ರಾಮೀಣ ಕ್ರೀಡೆಗಳನ್ನ ಉತ್ತೇಜಿಸುವ ಸಲುವಾಗಿ ಎತ್ತಿನ ಬಂಡಿ ಸ್ಪರ್ಧೆಯನ್ನ ಆಯೋಜನೆ ಮಾಡಿ ಪ್ರೋತ್ಸಾಹಿಸುವ ಕೆಲಸ ಮಾಡಿದ್ದಾರೆ. ಗ್ರಾಮೀಣ ಭಾಗದಲ್ಲಿ ಇಂತಹ ರೇಸ್ ಸಲುವಾಗಿಯೇ ಎತ್ತುಗಳನ್ನ ಮತ್ತು ಕುದುರೆಗಳನ್ನ ತರಬೇತಿ ಕೂಡ ನೀಡಿರುತ್ತಾರೆ. ಇಂತಹ ಕ್ರೀಡೆಗಳನ್ನ ಆಯೋಜನೆ ಮಾಡುವುದರ ಮೂಲಕ ಗ್ರಾಮೀಣ ಪ್ರತಿಭೆಗಳನ್ನ ಗುರುತಿಸುವ ಕೆಲಸದ ಜತೆಗೆ ಎತ್ತು ಮತ್ತು ಕುದುರೆ ಸಾಮರ್ಥ್ಯ ಎನು ಅನ್ನೋದನ್ನ ಕೂಡ ತೋರಿಸಬಹುದಾಗಿದೆ.

## ಸಂಕ್ಷಿಪ್ತ ಸುದ್ದಿ

### ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಟಾಕಿ ತಯಾರಿಕ ಘಟಕಗಳಿಗೆ ನಿರ್ಬಂಧ



**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಮೇಣೂರಿನ ತೋಟದ ಮನೆಯಲ್ಲಿದ್ದ ಪಟಾಕಿ ಗೋಡಾನ್ ನಲ್ಲಿ ಸ್ಫೋಟ ಸಂಭವಿಸಿ ಮೂವರು ಸಾವನ್ನಪ್ಪಿದ್ದ ಪ್ರಕರಣದ ನಂತರ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ (ಪ್ರಭಾರ) ಡಾ.ಆನಂದ ಕೆ. ಅವರು ಜಿಲ್ಲೆಯಲ್ಲಿರುವ ಎಲ್ಲಾ ಪಟಾಕಿ ತಯಾರಿಕಾ ಘಟಕಗಳಿಗೆ ತಾತ್ಕಾಲಿಕ ನಿರ್ಬಂಧ ವಿಧಿಸಿ ಆದೇಶಿಸಿದ್ದಾರೆ. ಪುಟ 2

### ಶಾಸಕರಿಗಾಗಿ ಚರ್ಚಿಸಲು ಭವನ ಸ್ಥಾಪನೆಗೆ ಚಿಂತನೆ

**ಬೆಂಗಳೂರು:** ಶಾಸಕರು ಒಂದೆಡೆ ಕುಳಿತುಕೊಂಡು ಚರ್ಚೆ ಮಾಡಲು ಒಂದು ಕಟ್ಟಡ ಬೇಕಾಗಿದ್ದು, ಇದಕ್ಕಾಗಿ ಭವನ ನಿರ್ಮಾಣ ಮಾಡಲು ಚಿಂತನೆ ನಡೆಸಲಾಗಿದೆ ಎಂದು ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಹೇಳಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ಬಾಲಬ್ರೂಯಿ ಒಂದು ಇತಿಹಾಸ ಉಳ್ಳ ಪ್ರಸಿದ್ಧವಾದ ಕಟ್ಟಡವಾಗಿದ್ದು,

### ರಾಹುಲ್ ಗಾಂಧಿ ಆರೋಪಕ್ಕೆ ಅಂಕಿ-ಸಂಖ್ಯೆ ಸಮೇತ ತಿರುಗೇಟು ಕೊಟ್ಟ ಧರ್ಮೇಂದ್ರ ಪ್ರಧಾನ್

**ನವದೆಹಲಿ:** ರಾಹುಲ್ ಗಾಂಧಿಯವರ ರಾಜಕೀಯ ಸಂಪೂರ್ಣ ಸುಳ್ಳಿನ ಮೇಲೆ ನಿಂತಿದೆ. ಒಂದು ಸುಳ್ಳಿನ ಸತ್ಯ ಬಯಲಾದ ತಕ್ಷಣ ಮತ್ತೊಂದು ಸುಳ್ಳಿನ ಜೊತೆಗೆ ಎದ್ದು ನಿಲ್ಲುತ್ತಾರೆ. ಅವರು ನೀಡಿದ ಸುಳ್ಳು ಹೇಳಿಕೆಗಳ ಪಟ್ಟಿಗೆ ಕೊನೆಯಿಲ್ಲ. ಪುಟ 2

## ಹನುಮ ಧ್ವಜ ಹಾರುವವರೆಗೂ ಹೋರಾಟ ನಿಲ್ಲುವುದಿಲ್ಲ ಎಂದ ಅಶೋಕ್

# ಫೆ. 9ರಂದು ಮಂಡ್ಯ ಬಂದ್



**ಮಂಡ್ಯ:** ತಾಲೂಕಿನ ಕೆರಗೋಡು ಗ್ರಾಮದ ಧ್ವಜಸ್ತಂಭದಲ್ಲಿ ಹಾಕಿದ್ದ ಹನುಮ ಧ್ವಜವನ್ನು ತೆರವುಗೊಳಿಸಲಾಗಿತ್ತು. ಇದನ್ನು ಖಂಡಿಸಿ ಇಂದು(ಜ.29) ಬಿಜೆಪಿ ಹಾಗೂ ಜೆಡಿಎಸ್ ನೇತೃತ್ವದಲ್ಲಿ ಮಂಡ್ಯ ಜಿಲ್ಲಾಧಿಕಾರಿ ಕಛೇರಿವರೆಗೆ ಪಾದಯಾತ್ರೆ ನಡೆಸಲಾಗಿದೆ. ಇದರ ಮುಂದುವರೆದ ಭಾಗವಾಗಿ ಹನುಮ ಭಕ್ತರು ಫೆಬ್ರವರಿ 9ರಂದು ಮಂಡ್ಯ ಬಂದ್‌ಗೆ ಕರೆ ನೀಡಿದ್ದಾರೆ.

ಹನುಮನ ಧ್ವಜ ಹಾರುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ

ಈ ಕುರಿತು ಕೋಲಾರದಲ್ಲಿ ಮಾತನಾಡಿದ ವಿಪಕ್ಷ ನಾಯಕ ಆರ್ .ಅಶೋಕ್ 'ಹನುಮನ ಧ್ವಜ ಹಾರುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದಿದ್ದಾರೆ. 'ಧ್ವಜ ಹಾರಿಸುವುದಕ್ಕಾಗಿ ಗ್ರಾ.ಪಂ.ನಿಂದ ಅನುಮತಿ ಪಡೆಯಲಾಗಿದೆ. ಸರ್ಕಾರಿ ಜಾಗದಲ್ಲಿ ಧ್ವಜಸ್ತಂಭವಿಲ್ಲ. ಆದ್ದರಿಂದ ಆಂಜನೇಯ ದೇವಾಲಯದಲ್ಲಿ ಮುಂದೆ ಧ್ವಜಸ್ತಂಭ ಹಾಕಲಾಗಿದೆ. ಈ ಹಿಂದೆಯೂ ಹನುಮಂತನ ಧ್ವಜ ಹಾರಿಸಲಾಗಿದೆ.

**ಕಾಂಗ್ರೆಸ್ಸಿಗರು ರಾಷ್ಟ್ರ ಧ್ವಜ ಹಾರಿಸಿ ವಿವಾದ ಸೃಷ್ಟಿ ಮಾಡಿರುವುದು:** ಅನುಮತಿ ಕೊಟ್ರೆ ರಾಷ್ಟ್ರಧ್ವಜ, ಹನುಮ ಧ್ವಜ ಎರಡನ್ನೂ ಹಾರಿಸುತ್ತೇವೆ.ಈ ಕಾಂಗ್ರೆಸ್ಸಿಗರು ರಾಷ್ಟ್ರ ಧ್ವಜ ಹಾರಿಸಿ ವಿವಾದ ಸೃಷ್ಟಿ ಮಾಡಿದ್ದಾರೆ. ಇತ್ತ ರಾಜ್ಯದಲ್ಲಿ ಬರಗಾಲ ಬಂದು 7 ತಿಂಗಳಾದರೂ ರೈತರಿಗೆ ಪರಿಹಾರ ನೀಡಿಲ್ಲ. ರೈತರಿಗೆ ಪರಿಹಾರ ಬಿಡುಗಡೆ ಮಾಡಿ ಇಲ್ಲ, ಕುರ್ಚಿ ಖಾಲಿ ಮಾಡಿ. ಬೆಳಗಾವಿ ಅಧಿವೇಶನದಲ್ಲಿ ಇನ್ನೊಂದು ವಾರದಲ್ಲಿ ಬಿಡುಗಡೆ ಎಂದಿದ್ದರು. ಪುಟ 2

## ಹನುಮ ಧ್ವಜ ವಿವಾದ ಶುರುವಾಗಿದ್ದೇಗೆ?

**ಮಂಡ್ಯ:** ಮಂಡ್ಯ ತಾಲೂಕಿನ ಕೆರಗೋಡು ಗ್ರಾಮದ ಮಧ್ಯಭಾಗದಲ್ಲಿ ಸ್ಥಾಪಿಸಿರುವ 108 ಅಡಿ ಆಂಜನೇಯ ಅರ್ಜುನ ಧ್ವಜಸ್ತಂಭ ತೆರವುಗೊಳಿಸಿರುವ ವಿಷಯ ವಿವಾದ ಸ್ವರೂಪ ಪಡೆದುಕೊಂಡಿದೆ. ಮಾತ್ರವಲ್ಲದೆ ಶನಿವಾರ ಗ್ರಾಮಸ್ಥರು, ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು, ಹಿಂದು ಸಂಘಟನೆಗಳ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು. ಇನ್ನು ವ್ಯಾಪಾರಸ್ಥರು ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿಕೊಂಡಿದ್ದಾರೆ. ಇನ್ನು ಮುನ್ನೆಚ್ಚರಿಕಾ ಕ್ರಮವಾಗಿ ಗ್ರಾಮದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು, ಪರಿಸ್ಥಿತಿ ಬೂದಿಮುಚ್ಚಿದ ಕೆಂಡದಂತಿದೆ.

ಗೌರಿಶಂಕರ ಸೇವಾ ಟ್ರಸ್ಟ್ ವತಿಯಿಂದ ಗ್ರಾಮದ ಆಂಜನೇಯಸ್ವಾಮಿ ದೇವಾಲಯದ ಮುಂದೆ 40 ಅಡಿ ಎತ್ತರದ ಧ್ವಜಸ್ತಂಭ ನಿರ್ಮಾಣ ಮಾಡಲು ಮುಂದಾಗಿದ್ದರು. ಈ ವಿಚಾರ ತಿಳಿದ ಕೆಲವರು ನಾವೂ ಅದಕ್ಕೆ ಸಹಕಾರ ನೀಡುತ್ತೇವೆ 60 ಅಡಿ ಧ್ವಜಸ್ತಂಭ ನಿರ್ಮಿಸುವಂತೆ ಸಲಹೆ ನೀಡಿದ್ದರು. ಇದಲ್ಲದೆ ಗ್ರಾಮದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದ ಶಾಸಕ ರವಿಕುಮಾರ್ ಗಣಿಗ ಅವರು ಹೈಟೆಕ್ ಬಸ್ ನಿಲ್ದಾಣ ನಿರ್ಮಿಸಲಾಗುವುದು. ಆದರೆ ಧ್ವಜಸ್ತಂಭ ನಿರ್ಮಾಣ ಮಾಡುವುದರಿಂದ ಬಸ್ ನಿಲ್ದಾಣಕ್ಕೆ ತೊಂದರೆಯಾಗಬಹುದು ಎಂದು ಸಲಹೆ ನೀಡಿದ್ದರು ಎಂದು ಗ್ರಾಮಸ್ಥರು ತಿಳಿಸಿದ್ದಾರೆ.





ಇದಲ್ಲದೆ ಅಂದು ಶಾಸಕರ ಅಭಿಪ್ರಾಯಕ್ಕೆ ಮನ್ನಣೆ ನೀಡಿ ಯುವಕರು, ತಾವು ತೋರಿಸಿದ ಸ್ಥಳದಲ್ಲೇ ನಾವು ಧ್ವಜಸ್ತಂಭ ನಿರ್ಮಾಣ ಮಾಡುವುದಾಗಿ ಹೇಳಿ, ಸ್ಥಳ ತಿಳಿಸುವಂತೆ ಮನವಿ ಮಾಡಿದ್ದರು.

ಮೇಲ್ಭಾಗದ ರಂಗಮಂದಿರ ಆವರಣದಲ್ಲಿ ಧ್ವಜಸ್ತಂಭ ನಿರ್ಮಾಣ ಮಾಡುವಂತೆ ಸ್ವತಃ ಶಾಸಕರೇ ತಿಳಿಸಿದ್ದರು. ಅವರ ಸಲಹೆ ಮೇರೆಗೆ ಟ್ರಸ್ಟ್ ವತಿಯಿಂದ ನಿರ್ಮಿಸಲುದ್ದೇಶಿಸಿದ್ದ 60 ಅಡಿ ಧ್ವಜಸ್ತಂಭಕ್ಕೆ ಬದಲಾಗಿ ಸುತ್ತಮುತ್ತಲ ಗ್ರಾಮಸ್ಥರ ಸಹಕಾರದಿಂದ ಸುಮಾರು 3.50 ಲಕ್ಷ ರೂ ವೆಚ್ಚದಲ್ಲಿ 108 ಅಡಿ ಧ್ವಜಸ್ತಂಭ ನಿರ್ಮಾಣ ಮಾಡಲಾಗಿದೆ ಎಂದು ಪ್ರತಿಭಟನಾಕಾರರು ವಿವರಿಸಿದ್ದಾರೆ. ಇನ್ನು ಶಾಸಕರು ಸೂಚಿಸಿದ ರಂಗಮಂದಿರ ಜಾಗವು ಸರ್ಕಾರಕ್ಕೆ ಸೇರಿದ್ದಾಗಿದೆ.

ಇನ್ನು ಇತ್ತೀಚೆಗೆ ಕಾಡಾನೆ ಹಿಡಿಯುವ ಕಾರ್ಯಾಚಾರಣೆ ವೇಳೆ ದಸರಾ ಅಂಬಾರಿ ಹೊರುತ್ತಿದ್ದ ಅರ್ಜುನ ಸಾವಿಗೀಡಾಗಿತ್ತು. ಈ ಹಿನ್ನೆಲೆಯಲ್ಲಿ ಅದರ ನೆನಪಿಗಾಗಿ

## ಸತ್ತವರ ಹೆಸರಿನಲ್ಲಿ ನಕಲಿ ಖಾತೆ ಸೃಷ್ಟಿಸಿ ಹಣ ಹೊಡೆದಿದ್ದಾರಂತೆ!

# ಸಿಐಡಿ, ರಾಜ್ಯ ಸರ್ಕಾರ ಸೈಲೆಂಟ್

**ಧಾರವಾಡ:** ಧಾರವಾಡ ಕೆಐಎಡಿಬಿ ಕಚೇರಿಯಲ್ಲಿ ನಡೆದಿರೋ ನಕಲಿ ರೈತರ ಹೆಸರಿನ ನಕಲಿ ಭೂಸ್ವಾಧೀನ ಪ್ರಕರಣದ ಕೋಟ್ಯಾಂತರ ರೂಪಾಯಿ ಲೂಟಿಯ ಬ್ರಹ್ಮಾಂಡ ಭ್ರಷ್ಟಾಚಾರ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಾ ಹೊರಟಿದೆ.




ಸಿಐಡಿ ತನಿಖೆಯಲ್ಲಿ 20 ಕೋಟಿ ರೂಪಾಪಯಿಯ ಅಕ್ರಮದ್ದು ಮಾತ್ರವೇ ತನಿಖೆ ನಡೆದಿರುವಾಗ, ಅದಕ್ಕೂ ಮೀರಿ ಸತ್ತವರ ಹೆಸರಿನ ಮೇಲೆ ನಕಲಿ ಖಾತೆ ಸೃಷ್ಟಿಸಿ ಹಣ ಹೊಡೆದಿರೋ ಅಕ್ರಮ ಈಗ ಬಯಲಾಗಿದೆ. ಧಾರವಾಡ ಕೆಐಎಡಿಬಿಯಲ್ಲಿ ನಕಲಿ ರೈತರ ಖಾತೆಗಳನ್ನು ಸೃಷ್ಟಿಸಿ, ನಕಲಿ ಭೂಸ್ವಾಧೀನ ನಡೆಸಿ, ಅಧಿಕಾರಿಗಳು, ಖಾಸಗಿ ವ್ಯಕ್ತಿಗಳು ಹಾಗೂ ಬ್ಯಾಂಕ್ ಸಿಬ್ಬಂದಿ ಶಾಮೀಲಾಗಿ, ಕೋಟ್ಯಾಂತರ ರೂಪಾಯಿ ಲೂಟಿ ಹೊಡೆದಿದ್ದರು. ಪುಟ 2

## ಕರ್ನಾಟಕದಲ್ಲಿ ಹನುಮ ಧ್ವಜ ಅಭಿಯಾನ

# ರಸ್ತೆ, ಮನೆ ಮನೆಯಲ್ಲಿ ಬಾವುಟ ಹಾರಿಸುತ್ತೇವೆ

**ಮಂಗಳೂರು:** ಮಂಡ್ಯದ ಕೆರಗೋಡು ಗ್ರಾಮದಲ್ಲಿ ಹನುಮ ಧ್ವಜ ತೆರವು ವಿಚಾರಕ್ಕೆ ಸಂಬಂಧಿಸಿದಂತೆ ಊರಿನ ರಾಮಭಕ್ತರು ಒಟ್ಟಾಗಿ ಸೇರಿ ಹನುಮ ಧ್ವಜ ಹಾರಿಸಿದ್ದಾರೆ. ಆದರೆ ಮುಸ್ಲಿಂರ ಓಟಿಗಾಗಿ ರಾಜ್ಯ ಸರ್ಕಾರ ಧ್ವಜ ತೆಗೆದಿದೆ. ಈ ಘಟನೆಯನ್ನು ವಿಹೆಚ್ ಪಿ, ಬಜರಂಗದಳ ಖಂಡಿಸುತ್ತೆ. ಹನುಮ ಧ್ವಜ ಕೆಳಗಿಳಿಸಿದ ರೀತಿ ಮತ್ತೆ ಹನುಮ ಧ್ವಜ ಹಾರಿಸಬೇಕು. ಇಲ್ಲದಿದ್ದರೆ ಇಡೀ ರಾಮಭಕ್ತರಿಗೆ ಕರೆ ನೀಡುತ್ತೇವೆ. ರಾಜ್ಯದಲ್ಲಿ ಹನುಮ ಧ್ವಜ ಅಭಿಯಾನ ಮಾಡುತ್ತೇವೆ. ರಸ್ತೆ, ಮನೆ ಮನೆಯಲ್ಲಿ ಹನುಮ ಧ್ವಜ ಹಾರಿಸುತ್ತೇವೆ ಎಂದು ವಿಶ್ವ ಹಿಂದೂ ಪರಿಷತ್ ಪ್ರಾಂತ ಸಹ ಕಾರ್ಯದರ್ಶಿ ಶರಣ್ ಪಂಪ್‌ವೆಲ್ ಹೇಳಿದರು.



ಮಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಾವು ಈ ಮೂಲಕ ಹನುಮ ಭಕ್ತಿಯನ್ನು ಸರ್ಕಾರಕ್ಕೆ ತೋರಿಸುತ್ತೇವೆ. ಹಿಂದೂ ಸಮಾಜಕ್ಕೆ, ರಾಮ-ಹನುಮ ಭಕ್ತರ ಮನಸ್ಸಿಗೆ ನೋವಾಗಿದೆ. ರಾಷ್ಟ್ರ ಧ್ವಜ ಹಾರಿಸಲು ನಮ್ಮ ವಿರೋಧವಿಲ್ಲ. ಆದರೆ ಅದನ್ನು ಹಾರಿಸಲು ಅದರದ್ದೇ ಆದ ನೀತಿ ನಿಯಮಗಳಿವೆ. ರಾಷ್ಟ್ರ ಧ್ವಜಕ್ಕೂ ಅವಮಾನ ಮಾಡಿದ್ದಾರೆ. ಈ ರೀತಿ ಮಾಡಿದವರ ಪುಟ 2

## ಬಿಡಿಎ ನೂತನ ಅಧ್ಯಕ್ಷರಾಗಿ ಹ್ಯಾರಿಸ್ ಅಧಿಕಾರ ಸ್ವೀಕಾರ



**ಬೆಂಗಳೂರು:** ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ಶಾಂತಿನಗರ ಶಾಸಕ ಎನ್.ಎ ಹ್ಯಾರಿಸ್ ನೇಮಕಗೊಂಡಿದ್ದಾರೆ. ನಿಗಮ ಮಂಡಳಿ ಅಧ್ಯಕ್ಷರ ಮೊದಲ ಪಟ್ಟಿಯಲ್ಲಿ ಹ್ಯಾರೀಸ್ ಆಯ್ಕೆ ಆದರು. ಒಟ್ಟು 36 ಶಾಸಕರಿಗೆ ವಿವಿಧ ನಿಗಮ-ಮಂಡಳಿಗಳಲ್ಲಿ ಸ್ಥಾನ ಸಿಕ್ಕಿದ್ದು ಬಿಡಿಎ ಕೇಂದ್ರ ಕಚೇರಿಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲಿ ಶಾಸಕ ಎನ್.ಎ. ಹ್ಯಾರಿಸ್ ಬಿಡಿಎ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು. ಶಾಸಕ ಜಮೀರ್ ಅಹ್ಮದ್ ಕೂಡ ಕಚೇರಿಗೆ ಆಗಮಿಸಿ ಶುಭ ಕೋರಿದರು. ಪುಟ 2

## ಜಾತಿ ಭೇದ ಧಿಕ್ಕರಿಸಿ ಪಂಕ್ತಿ ಭೋಜನ ಸೇವೆ

# 5 ಜಿಲ್ಲೆಗಳ ಲಕ್ಷಾಂತರ ಭಕ್ತರ ಸೇವೆ



**ಚಾಮರಾಜನಗರ:** ಅದು 8 ಶತಮಾನಗಳ ಹಿಂದೆ ಸಮಾನತೆ ಸಾರಿದ ಮಹಾಪುರುಷರ ಐತಿಹಾಸಿಕ ಜಾತ್ರೆ. ಸಮಾಜದಲ್ಲಿ ಇದ್ದ ಮೇಲು ಕೀಳು, ಆಹಾರ ಪದ್ಧತಿಯ ತಾರಮ್ಯದ ವಿರುದ್ಧ ಸಿಡಿದೆದ್ದು ಪಂಕ್ತಿ ಭೋಜನದ ಮೂಲಕ ನಾವೆಲ್ಲರೂ ಮನುಷ್ಯರು ಎಂದು ಸಂತರು ಸಾರಿ ಹೇಳಿದ್ದರು. ಈ ಪಂಕ್ತಿ ಸೇವೆಯಲ್ಲಿ ಮಾಂಸಾಹಾರ, ಸಸ್ಯಾಹಾರದ ಭೋಜನ ತಯಾರಿಸಿ ಎಲ್ಲರೂ ಒಟ್ಟಿಗೆ ಊಟ ಮಾಡ್ತಿದ್ದರು. ಆದ್ರೆ, ಕೋರ್ಟ್ ಆದೇಶದನ್ವಯ ಚಿಕ್ಕಲ್ಲೂರಿನಲ್ಲಿ ಪ್ರಾಣಿ ವಧೆ ನಡೆಸಲು ಜಿಲ್ಲಾಡಳಿತ ನಿರ್ಬಂಧ ವಿಧಿಸಿದೆ. ಇದೆಲ್ಲದರ ನಡುವೆ ಇದೀಗ ಪಂಕ್ತಿ ಸೇವೆ ನಡೆದಿದೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಚಿಕ್ಕಲ್ಲೂರಿನ ಸಿದ್ದಾಪ್ಪಾಜಿ ಜಾತ್ರೆ ಪ್ರತಿ ವರ್ಷ ಮೊದಲನೇ ಹುಣ್ಣಿಮೆಯಂದು ಆರಂಭವಾಗುವ ಜಾತ್ರೆ. ಜಾನಪದ ಗ್ರಂಥಗಳ ದಾಖಲೆ ಪ್ರಕಾರ 8 ಶತಮಾನಗಳಿಂದ ಜಾತ್ರೆ ನಡೆಯುತ್ತಾ ಬಂದಿದೆ. ಹುಣ್ಣಿಮೆಯಂದು ಆರಂಭವಾಗುವ ಜಾತ್ರೆ, ಐದು ದಿನಗಳ ಕಾಲ ನಡೆಯುತ್ತದೆ. ಜಾತ್ರೆಗೆ ಚಾಮರಾಜನಗರ, ಮೈಸೂರು, ಮಂಡ್ಯ, ರಾಮನಗರ ಹಾಗು ಬೆಂಗಳೂರು ಜಿಲ್ಲೆಗಳಿಂದ ಲಕ್ಷಾಂತರ ಭಕ್ತರು ಬರುತ್ತಾರೆ.

ಬಂದ ಭಕ್ತರು ದೇವಾಲಯದ ಆವರಣ ಇಲ್ಲವೇ



ಸುತ್ತಮುತ್ತಲ ಖಾಸಗಿ ಜಾಗದಲ್ಲಿ ಬಿಡಾರ ಹೂಡಿ ವಾಸವಾಗಿರುತ್ತಾರೆ. ಬಿಡಾರ ಹೂಡಿದಾಗಿನಿಂದ ಅಲ್ಲಿ ಪವಾಡ ಪುರುಷ ಸಿದ್ದಾಪ್ಪಾಜಿಯ ಕಂಡಾಯ ಇಟ್ಟು ಪೂಜೆ ಸಲ್ಲಿಸುತ್ತಾರೆ. ಸುಗ್ಗಿಯ ನಂತರ ಬರುವ ಈ ಜಾತ್ರೆಗೆ ಈ ಭಾಗದ ಜನರು ಸಡಗರ ಸಂಭ್ರದಿಂದ ಪಾಲ್ಗೊಳ್ಳುತ್ತಾರೆ.

ಜಾತ್ರೆಯ ಆಕರ್ಷಣೀಯವಾಗಿದ್ದು, ಹೆಚ್ಚು ಪ್ರಸಿದ್ಧಿ ಪಡೆದಿದ್ದು ಅಂದ್ರೆ, ನಾಲ್ಕನೇ ದಿನ ನಡೆಯುವ ಪಂಕ್ತಿ ಸೇವೆ. ಹರಕೆ ಹೊತ್ತ ಭಕ್ತರು ಕುರಿ, ಕೋಳಿಗಳನ್ನ ಬಲಿ ಕೊಡುತ್ತಾರೆ. ಪಂಕ್ತಿ ಸೇವೆಗೆ ಪ್ರಾಣಿ ಬಲಿ ಕೊಡಲಾಗುತ್ತಿದೆ ಎಂದು ಪ್ರಾಣಿ ದಯಾ ಕಲ್ಯಾಣ ಸಮಿತಿ ಆರೋಪಿಸಿ ಪುಟ 2

# ನಿಮಗಿಂತ ಹೆಚ್ಚು ಪ್ರತಿಭಾವಂತರ ಬಳಿ ಸ್ನೇಹ ಬೆಳೆಸಿ, ಅಸೂಯೆ ಬಿಟ್ಟುಬಿಡಿ

**ನವದೆಹಲಿ:** ನಿಮಗಿಂತ ಹೆಚ್ಚು ಪ್ರತಿಭಾವಂತರ ಬಳಿ ಸ್ನೇಹ ಬೆಳೆಸಿ, ಅವರಿಂದ ಕಲಿಯಲು ಪ್ರಯತ್ನಿಸಿ ಆದರೆ ಅಸೂಯೆ ಬೆಳೆಸಿಕೊಳ್ಳಬೇಡಿ ಎಂದು ಪ್ರಧಾನಿ ನರೇಂದ್ರ ಮೋದಿ ಮಕ್ಕಳಿಗೆ ಸಲಹೆ ನೀಡಿದ್ದಾರೆ. ಪರೀಕ್ಷಾ ಪೇ ಚರ್ಚಾ 7ನೇ ಆವೃತ್ತಿಯಲ್ಲಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿರುವ ಮೋದಿ, ನೀವು ನಿಮ್ಮ ಮೇಲೆ ನಂಬಿಕೆ ಇಡಬೇಕು, ಎಂದೂ ಸ್ನೇಹಿತರ ಬಗ್ಗೆ ಅಸೂಯೆ ಪಡುತ್ತಿದ್ದರೆ ನಿಮ್ಮ ಜೀವನದಲ್ಲಿ ಸಫಲತೆ ಸಿಗಲು ಸಾಧ್ಯವಿಲ್ಲ ಎಂದರು.

ಸ್ಪರ್ಧೆ ಮತ್ತು ಸವಾಲುಗಳು ಜೀವನದಲ್ಲಿ ಸ್ಫೂರ್ತಿಯಾಗಿ ಕಾರ್ಯನಿರ್ವಹಿಸುತ್ತವೆ, ಆದರೆ ಸ್ಪರ್ಧೆಯು ಆರೋಗ್ಯಕರವಾಗಿರಬೇಕು ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಕೆಲವು ಪೋಷಕರು ತಮ್ಮ ಮಗುವಿನ 'ರಿಪೋರ್ಟ್ ಕಾರ್ಡ್' ಅನ್ನು ತಮ್ಮ 'ವಿಸಿಟಿಂಗ್ ಕಾರ್ಡ್' ಎಂದು ಪರಿಗಣಿಸುತ್ತಾರೆ, ಇದು ಸರಿಯಲ್ಲ



ಎಂದು ಪ್ರಧಾನಿ ಹೇಳಿದರು.

ಯಾವುದೇ ಮಗುವನ್ನು ಬೇರೆಯವರೊಂದಿಗೆ ಹೋಲಿಕೆ ಮಾಡಬೇಡಿ, ಅದು ಅವನ/ಆಕೆಯ ಭವಿಷ್ಯಕ್ಕೆ ಹಾನಿಕಾರಕವಾಗಿದೆ ಎಂದು ಪೋಷಕರಿಗೆ ಹೇಳಿದರು. ಶಿಕ್ಷಕರು ಮಕ್ಕಳೊಂದಿಗೆ ಬೆರೆಯಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ತರಗತಿಯಲ್ಲಿ ನೀವು ಆರಾಮದಾಯಕ ವಾತಾವರಣವನ್ನು ಸೃಷ್ಟಿಸಬೇಕು ಇದರಿಂದ ಮಕ್ಕಳು ನಿಮ್ಮ ಬಗ್ಗೆ ಆಸಕ್ತಿ ವಹಿಸುತ್ತಾರೆ ಎಂದು ಕಿವಿಮಾತು ಹೇಳಿದರು. ಪುಟ 2

# ಕೆ.ಎನ್.ರಾಜಣ್ಣ, ಶಾಮನೂರು ಶಿವಶಂಕರಪ್ಪಗೆ ವಾರ್ನಿಂಗ್



**ಬೆಂಗಳೂರು:** ಸಚಿವ ಕೆ.ಎನ್.ರಾಜಣ್ಣ ಹಾಗೂ ಶಾಸಕ ಶಾಮನೂರು ಶಿವಶಂಕರಪ್ಪಗೆ ಕಾಂಗ್ರೆಸ್ ಹೈಕಮಾಂಡ್ ಎಚ್ಚರಿಕೆ ನೀಡಿದೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಇಬ್ಬರಿಗೂ ಶಿಸ್ತು ಮೀರಿ ಮಾತನಾಡದಂತೆ ದೂರವಾಣಿ ಕರೆ ಮಾಡಿ ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ. ಬಿಜೆಪಿ ಸಂಸದ ರಾಘವೇಂದ್ರ ಗೆಲ್ಲಿಸುವಂತೆ ಶಾಮನೂರು ಶಿವಶಂಕರಪ್ಪ ಅವರು ಕರೆ ನೀಡಿದ್ದರು. ಸಚಿವ ಕೆ.ಎನ್.ರಾಜಣ್ಣ ಅವರು, ನಾವು ಕಾಂಗ್ರೆಸ್ ಹೈಕಮಾಂಡ್ ಗುಲಾಮರಲ್ಲ ಎಂದಿದ್ದರು. ಈ ಹಿನ್ನೆಲೆಯಲ್ಲಿ ಇಬ್ಬರಿಗೂ ಕರೆ ಮಾಡಿರುವ ಕೆ.ಸಿ ವೇಣುಗೋಪಾಲ್ ಅವರು ನೋಟಿಸ್ ನೀಡುವ ಎಚ್ಚರಿಕೆ ನೀಡಿದ್ದಾರೆ. ಲೋಕಸಭಾ ಚುನಾವಣೆ ಇದೆ ಎಂಬ ಕಾರಣಕ್ಕೆ ಸದ್ಯಕ್ಕೆ ನೋಟಿಸ್ ನೀಡುತ್ತಿಲ್ಲ. ಹೀಗೆ ವಿವಾದಾತ್ಮಕವಾಗಿ ಮಾತನಾಡುವುದು ಮುಂದುವರಿದರೆ ನೋಟಿಸ್ ನೀಡಬೇಕಾಗುತ್ತದೆ. ಅಲ್ಲದೆ ಶಿಸ್ತುಬದ್ಧ ಕ್ರಮ ಎದುರಿಸಬೇಕಾಗುತ್ತದೆ ಎಂದೂ ವಾರ್ನ್ ಮಾಡಿದ್ದಾರೆ ಎಂಬ ಮಾಹಿತಿ ಪಕ್ಷದ ಮೂಲಗಳಿಂದ ತಿಳಿದುಬಂದಿದೆ.

## ಲೋಕಸಭೆಗೆ ಒಳ್ಳೆಯ ಅಭ್ಯರ್ಥಿ ತನ್ನಿ ವಿಜಯೇಂದ್ರ ಕಾಲಿಗೆ ಬಿದ್ದ ಚೌಹಾಣ್

**ಬೀದರ್:** ಗಡಿ ಜಿಲ್ಲೆ ಬೀದರ್‌ನ ಬಿಜೆಪಿಯಲ್ಲಿ ಮೊತ್ತೊಮ್ಮೆ ಅಸಮಾಧಾನ ಸ್ಫೋಟವಾಗಿದ್ದು ಕೇಂದ್ರ ಸಚಿವ ಭಗವಂತ್ ಖೂಬಾ ವರ್ಸಸ್ ಮಾಜಿ ಸಚಿವ ಪ್ರಭು ಚೌಹಾಣ್ ಮುಸುಕಿನ ಗುದ್ದಾಟ ತಾರಕಕ್ಕೇರಿದೆ. ಈ ನಡುವೆ ಲೋಕಸಭೆಗೆ ಒಳ್ಳೆಯ ಅಭ್ಯರ್ಥಿ ತನ್ನಿ ಎಂದು ಮಾಜಿ ಸಚಿವ ಪ್ರಭು ಚೌಹಾಣ್ ಅವರು ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಕಾಲಿಗೆ ಬಿದ್ದ ಪ್ರಸಂಗ ನಡೆದಿದೆ ನಿನ್ನೆ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರರ ಅಭಿನಂದನಾ ಸಮಾರಂಭವಿತ್ತು. ಈ ವೇಳೆ ಚೌಹಾಣ್ ಅವರು ವೇದಿಕೆಯಲ್ಲೇ 2024 ರಲ್ಲಿ ಲೋಕಸಭೆಗೆ ಒಳ್ಳೆಯ ಅಭ್ಯರ್ಥಿ ತನ್ನಿ ಎಂದು ಭಾ?ಣ ಮಡುತ್ತಲೇ ಮನವಿ ಮಾಡಿಕೊಂಡರು. ಈ ಮೂಲಕ ಪ್ರಭು ಚೌಹಾಣ್ ಅವರು ಪರೋಕ್ಷವಾಗಿ ಕೇಂದ್ರ ಸಚಿವ ಭಗವಂತ ಖೂಬಾ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ. ಭಾ?ಣದ ವೇಳೆ 10 ವ?ರ್ಗಗಳಿಂದ ನನಗೆ ಅನ್ಯಾಯವಾಗಿದೆ. ಬೀದರ್ ಗೆ ಒಳ್ಳೆಯ ಅಭ್ಯರ್ಥಿ ನೀಡಿ, ಕಾರ್ಯಕರ್ತರನ್ನ ಜೈಲಿಗೆ ಕಳುಹಿಸುವವರು ಬೇಡ, ಕಾರ್ಯಕರ್ತರಿಂದಲೇ ನಾವಿದ್ದೇವೆ ಕಾರ್ಯಕರ್ತರನ್ನ ಗೌರವಿಸುವವರಿಗೆ ಟಿಕೆಟ್ ನೀಡಿ ಎಂದು ಮನವಿ ಮಾಡಿಕೊಂಡರು. ಈ ವೇಳೆ ಪ್ರಭು ಚೌಹಾಣ್ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ ಖೂಬಾ ಬೆಂಬಲಿಗರ ಹಾಗೂ ಪೊಲೀಸರ ನಡುವೆ ಕೆಲ ಹೊತ್ತು ಮಾತಿನ ಚಕಮಕಿ ನಡೆಯಿತು. ಈ ವೇಳೆ ಮಾತನಾಡಿದ ಖೂಬಾ, ನಿಮ್ಮ ಕುತಂತ್ರದ ಹೇಳಿಕೆ ಮತ್ತು ಯಾರೇ ಏನೇ ಹೇಳಿದ್ರು ಸತ್ಯವಾಗಲ್ಲ. ಸಮಯ ಬಂದಾಗ ಇಂಜೆಕ್ಷನ್ ಕೊಡುವ ಕೆಲಸ ನಮ್ಮ ವರಿಷ್ಠರು ಮಾಡುತ್ತಾರೆ ಎಂದು ಪ್ರಭು ಚೌಹಾಣ್‌ಗೆ ತಿರುಗೇಟು ನೀಡಿದರು.

# ಕೆರೆಗೋಡು ಹನುಮ ಧ್ವಜ ಪ್ರಕರಣ, ಪಿಡಿಒ ಅಮಾನತು



**ಮಂಡ್ಯ:** ಕೆರಗೋಡು ಹನುಮ ಧ್ವಜ ಪ್ರಕರಣದಲ್ಲಿ ಕೆರಗೋಡು ಗ್ರಾಮ ಪಂಚಾಯತಿಯ ಪಿಡಿಒ ತಲೆದಂಡವಾಗಿದೆ. ಪಿಡಿಒ ಜೀವನ್ ಬಿ.ಎಂ ಅವರನ್ನು ಐದು ಕಾರಣ ನೀಡಿ ಅಮಾನತು ಮಾಡಲಾಗಿದೆ. ಮಂಡ್ಯ ಜಿಲ್ಲಾ ಪಂಚಾಯತ್ ಸಿಇಓ ತನ್ವೀರ್ ಆಸಿಫ್ ಸೇಠ್ ಪಿಡಿಒ ಅವರನ್ನು ಅಮಾನತು ಪಡಿಸಿ ಆದೇಶ ಹೊರಡಿಸಿದ್ದಾರೆ. ಗ್ರಾಪಂ ಸ್ವತ್ತನ್ನು ಖಾಸಗಿಯವರಿಗೆ ನೀಡುವುದಕ್ಕೆ ಸರ್ಕಾರದ ಅನುಮತಿ ಕಡ್ಡಾಯ. ಈ ಪ್ರಕರಣದಲ್ಲಿ ನಿಯಮ ಉಲ್ಲಂಘಿಸಿ ಖಾಸಗಿಯವರಿಗೆ ನೀಡಲಾಗಿದೆ. ಕೆರಗೋಡು ಗ್ರಾಮದಲ್ಲಿ ನಡೆದ ಸಂಘರ್ಷಕ್ಕೆ ಪಿಡಿಒ ನೇರ ಕಾರಣವಾಗಿದ್ದಾರೆ. ಧ್ವಜ ಸ್ತಂಭ ನಿರ್ಮಾಣಕ್ಕೆ ಅನುಮತಿ ನೀಡಿ ಕರ್ತವ್ಯ ಲೋಪ ಎಸಗಿದ್ದಾರೆ ಎಂದು ಅಮಾನತು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಇಷ್ಟೇ ಅಲ್ಲದೇ ಧ್ವಜ ಸ್ತಂಭದಲ್ಲಿ ರಾಷ್ಟ್ರೀಯ ಧ್ವಜ ಹಾರಿಸಲು ಅನುಮತಿ ನೀಡಿ, ಷರತ್ತು ಉಲ್ಲಂಘಿಸಿದ್ದರೂ ಕ್ರಮಕ್ಕೆಗೊಳ್ಳದೆ ಪಿಡಿಒ ನಿರ್ಲಕ್ಷವಹಿಸಿದ್ದಾರೆ. ರಾಷ್ಟ್ರ ಧ್ವಜದ ಬದಲು ಹನುಮ ಧ್ವಜ ಹಾರಿಸಲು ಅವಕಾಶ ನೀಡಿರುವುದು ಹಾಗೂ ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂಬ ಕಾರಣ ನೀಡಿ ಪಿಡಿಒ ಅವರನ್ನು ಅಮಾನತು ಮಾಡಿ ಆದೇಶ ಹೊಡಿಸಲಾಗಿದೆ. ಕೆರಗೋಡು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮಸ್ಥರು ರಾಷ್ಟ್ರ ಧ್ವಜ ಹಾರಿಸಲು ಅನುಮತಿ ಪಡೆದು, ಹನುಮ ಧ್ವಜ ಹಾರಿಸಿದ್ದರು. ಬಳಿಕ ಪೊಲೀಸರು ಪ್ರವೇಶಿಸಿ ಹನುಮ ಧ್ವಜ ಇಳಿಸಿ ರಾಷ್ಟ್ರ ಧ್ವಜ ಹಾರಿಸಿದ್ದರು. ಹನುಮ ಧ್ವಜ ಇಳಿಸಿದ ವಿಚಾರಕ್ಕೆ ಬಿಜೆಪಿ ಹಾಗೂ ಹಿಂದೂ ಪರ ಸಂಘಟನೆಗಳು ಆಕ್ರೋಶ ಹೊರಹಾಕಿ ಪ್ರತಿಭಟನೆ ನಡೆಸಿದ್ದವು.

# ಶೆಟ್ಟರ್ ಡೀಸೆಂಟ್ ಜಂಟಲ್ ಮ್ಯಾನ್



**ಮಂಗಳೂರು:** ಮತ್ತೆ ಕಮಲ ಹಿಡಿದಿರುವ ಜಗದೀಶ್ ಶೆಟ್ಟರ್ ಅವರು ಸೌಮ್ಯ ಸ್ವಭಾವದ ವ್ಯಕ್ತಿಯಾಗಿದ್ದು, ಡೀಸೆಂಟ್ ಜಂಟಲ್ ಮ್ಯಾನ್. ಅವರನ್ನ ನಾವು ಉಳಿಸಿಕೊಳ್ಳಬೇಕಾಗಿತ್ತು ಎಂದು ವಿಧಾನ ಪರಿಷತ್ ಸದಸ್ಯ ಬಿ.ಕೆ ಹರಿಪ್ರಸಾದ್ ಹೇಳಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅದು ದೌರ್ಭಾಗ್ಯ ಜಗದೀಶ್ ಶೆಟ್ಟರ್ ಬಿಟ್ಟು ಹೋಗಿದ್ದಾರೆ ಅವರಿಗೆ ಒಳ್ಳೆಯದಾಗಲಿ. ಬೇರೆ ಯಾರು ಪಕ್ಷ ಬಿಟ್ಟು ಹೋಗುತ್ತಾರೆ ಅನ್ನೋ ಬಗ್ಗೆ ಮಾಹಿತಿ ಇಲ್ಲ. ಗುಪ್ತಚಾರ ಇಲಾಖೆ ನನ್ನ ಹತ್ತಿರ ಇಲ್ಲ. ಹಾಗಾಗಿ ಹೇಳಲು ಆಗಲ್ಲ ಎಂದರು. ಆರ್.ಅಶೋಕ್ ಪಾಪ ತಿರುಕನ ಕನಸು ಕಾಣುತ್ತಿದ್ದಾರೆ. ಅವರಿಗೆ ಆದಷ್ಟು ಬೇಗ ಮುಖ್ಯಮಂತ್ರಿ ಆಗುವ ಆಸೆ. ಅದಕ್ಕಾಗಿ ಬಹಳಷ್ಟು ಜನ ಸರತಿಯಲ್ಲಿ ನಿಂತಿದ್ದಾರೆ ಹಾಗಾಗಿ ಅವರ ಆಸೆ ಪೂರೈಸಲ್ಲ. ಅವರ ಆಸೆ ತಿರುಕನ ಕನಸಾಗೇ ಇರುತ್ತೆ. ಲೋಕಸಭಾ ಚುನಾವಣೆಗೆ ನನ್ನ ಹೆಸರು ಎಲ್ಲಿಯೂ ಪ್ರಸ್ತಾಪ ಇಲ್ಲ ಎಂದು ಹೇಳಿದರು. ಇದೇ ವೇಳೆ ಕೆರಗೋಡು ಘಟನೆ ಬಗ್ಗೆ ಪ್ರತಿಕ್ರಿಯಿಸಿದ ಬಿಕೆಹೆಚ್, ಕೆರಗೋಡು ಘಟನೆ ಬಿಜೆಪಿ ಗುಪ್ತ ಕಾರ್ಯಸೂಚಿ ಹಿಡನ್ ಅಜೆಂಡಾ. ನಾಗಪುರದ ಆರ್‌ಎಸ್‌ಎಸ್ ಕಚೇರಿಯಲ್ಲಿ 50 ವರ್ಷಗಳ ಕಾಲ ರಾಷ್ಟ್ರಧ್ವಜ ಹಾರಿಸಿಲ್ಲ. ಈಗ ಕೆರಗೋಡಲ್ಲಿ ರಾಷ್ಟ್ರ ಧ್ವಜ ಹಾರಿಸಲು ಪರ್ಮಿಷನ್ ತೆಗೆದುಕೊಂಡು ಭಗವಾಧ್ವಜ ಹಾರಿಸಿದ್ದಾರೆ. ಅಲ್ಲಿ ಕೋಮುಸೌಹರ್ದ ಮತ್ತು ಶಾಂತಿ ಕದಡಲು ಮಾಡಿದ ಪ್ರಯತ್ನ ಎಂದು ವಾಗ್ದಾಳಿ ನಡೆಸಿದರು.

ಸರ್ಕಾರ ಇದರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು. ರಾಷ್ಟ್ರಧ್ವಜ ರಕ್ಷಣೆ ಮಾಡುವುದು ಅಲ್ಪಸಂಖ್ಯಾತರ ಓಲೈಕೆನಾ. ಇವರು ಬಹುಸಂಖ್ಯಾತರನ್ನು ಓಲೈಕೆ ಮಾಡಲು ಈ ರೀತಿ ಮಾಡುತ್ತಿರುವುದು ತಪ್ಪು ಎಂದು ಬಿಜೆಪಿ ವಿರುದ್ಧ ಹರಿಪ್ರಸಾದ್ ಕಿಡಿಕಾರಿದರು.

# ಲೋಕಸಭೆಯಲ್ಲಿ ಹೆಚ್ಚಿನ ಸ್ಥಾನ ಗೆದ್ದರೆ ಕಾಂಗ್ರೆಸ್ ಸರ್ಕಾರ ತೆಗೆಯುವ ಗ್ಯಾರಂಟಿ



**ಕೋಲಾರ:** ಲೋಕಸಭಾ ಚುನಾವಣೆಯಲ್ಲಿ 28ಕ್ಕೆ 28 ಸ್ಥಾನ ಗೆದ್ದರೆ ನಾವು ಕಾಂಗ್ರೆಸ್ ಸರ್ಕಾರವನ್ನು ಒಂದೇ ತಿಂಗಳಲ್ಲಿ ತೆಗೆಯುವ ಗ್ಯಾರಂಟಿ ಕೊಡುತ್ತೇವೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಕೋಲಾರದಲ್ಲಿ ಬಿಜೆಪಿ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿದ್ದ ವೇಳೆ ಅವರು ಸುದ್ದಿಗಾರರೊಂದಿಗೆ ಮಾತನಾಡಿದ್ದಾರೆ. ಈ ವೇಳೆ ಕೋಲಾರ ಸೇರಿದಂತೆ ರಾಜ್ಯದ ಎಲ್ಲಾ ಕಡೆ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಬೇಕು. ಕೇಂದ್ರದ ಮೋದಿ ಕೈ ಬಲಪಡಿಸುವ ನಿಟ್ಟಿನಲ್ಲಿ ಮುಂದಿನ ಚುನಾವಣೆಯಲ್ಲಿ ಬಿಜೆಪಿಯನ್ನು ಜನ ಬೆಂಬಲಿಸಬೇಕು ಎಂದಿದ್ದಾರೆ.

ಜಾತಿ ಗಣತಿ ವರದಿ ಬಗ್ಗೆ ಸಿಎಂ ಮಾತಾಡುತ್ತಿದ್ದಾರೆ. ಹಿಂದುಳಿದ ವರ್ಗಗಳಿಗೆ ಸಿದ್ದರಾಮಯ್ಯ ಕಾಣಿಕೆ ಏನು? ಸಂವಿಧಾನ ಹಕ್ಕು ಕೊಟ್ಟಿದ್ದು ಪ್ರಧಾನಿ ಮೋದಿ, ಎಸ್ಸಿ ಎಸ್ಟಿಗೆ ಖೋಟಾ ಹಂಚಿಕೆ ಮಾಡಿದ್ದು ನಾವು. ಇದರಿಂದ ಅವರಿಗೆ 3500 ಹೆಚ್ಚುವರಿ ಸೀಟು ಲಭ್ಯವಾಗಿದೆ. ಸ್ವಾತಂತ್ರ್ಯ ಬಂದ ಮೇಲೆ ಬರಿ ಜಾತಿಗಳನ್ನು ಕಾಂಗ್ರೆಸ್‌ನವರು ಸೇರಿಸುತ್ತಾ, ಹೆಚ್ಚಿಗೆ ಮಾಡಿದ್ದಾರೆ ಎಂದಿದ್ದಾರೆ.

11,300 ಕೋಟಿ ರೂ. ದಲಿತರ ಹಣವನ್ನು ಕಾಂಗ್ರೆಸ್‌ನ ಗ್ಯಾರಂಟಿಗೆ ಕೊಟ್ಟಿದ್ದಾರೆ. ಅತ್ಯಂತ ಹಿಂದುಳಿದ ವರ್ಗದವರು ಇದ್ದಾರೆ ಅವರಿಗೆ ನ್ಯಾಯ ಕೊಡಲಿ. ಮೀಸಲಾತಿಯನ್ನು ಕೆಲವು ಜನರು ಮಾತ್ರ ಪಡೆಯುತ್ತಿದ್ದಾರೆ. ಅದಕ್ಕೆ ಸಿಎಂ ಸಿದ್ದರಾಮಯ್ಯ ಉತ್ತರ ನೀಡಲಿ. ಕಾಂತರಾಜ್ ವರದಿ ಬಗ್ಗೆ ಚುನಾವಣೆ ಗಿಮಿಕ್ ಮಾಡ್ತಿದ್ದಾರೆ ಅಷ್ಟರಲ್ಲಿ ಚುನಾವಣೆ ನೀತಿ ಸಂಹಿತೆ ಜಾರಿಗೆ ಬರಲಿದೆ ಎಂದಿದ್ದಾರೆ.



ಅರಕಲಗೂಡು ವಿಧಾನಸಭಾ ಕ್ಷೇತ್ರದ ಕಡವಿನಹೊಸಹಳ್ಳಿ ಗ್ರಾಮದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಯೋಜನೆ ಕಾಮಗಾರಿಯ ಭೂಮಿ ಪೂಜೆ ನೆರವೇರಿತು. ಶಾಸಕ ಎ.ಮಂಜುರವರು ಕಾರ್ಯಕ್ರಮ ಉದ್ಘಾಟಿಸಿದರು. ಕಡುವಿನಹೊಸಹಳ್ಳಿ ಗ್ರಾ.ಪಂ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ದೇವರ ಹೆಸರಲ್ಲಿ ರಾಜಕೀಯ ಸೂಕ್ತವಲ್ಲ



**ಬೆಂಗಳೂರು:** ದೇವರ ಹೆಸರಿನಲ್ಲಿ ರಾಜಕೀಯ ಮಾಡುವುದು ಸೂಕ್ತವಲ್ಲ ಎಂದು ಸಚಿವ ಕೆ.ಹೆಚ್ ಮುನಿಯಪ್ಪ ಅವರು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯದಲ್ಲಿ ಹನುಮ ಧ್ವಜ ವಿಚಾರವಾಗಿ ಬಿಜೆಪಿ ಪ್ರತಿಭಟನೆಗೆ ತಿರುಗೇಟು ನೀಡಿದ್ದಾರೆ. ಈ ವೇಳೆ, ದೇವರ ಹೆಸರಿನಲ್ಲಿ ರಾಜಕೀಯ ಮಾಡುವುದು ಸೂಕ್ತವಲ್ಲ. ಭಾರತ ದೇಶ ಜಾತ್ಯಾತೀತ ರ್‍ಷ್ಟ್ರವಾಗಿದೆ. ಈ ರಾಷ್ಟ್ರದಲ್ಲಿ ಎಲ್ಲಾ ವರ್ಗದ, ಎಲ್ಲಾ ಧರ್ಮಗಳ ಜನ ಇದ್ದಾರೆ. ವ್ಯವಸ್ಥೆಯಲ್ಲಿ ಸಂವಿಧಾನ ಬದ್ಧವಾಗಿ ನಾವೆಲ್ಲ ಅಣ್ಣ-ತಮ್ಮಂದಿರಂತೆ ಬಾಳಬೇಕು ಎಂದಿದ್ದಾರೆ. ನಾವು ಗ್ಯಾರೆಂಟಿಗಳನ್ನು ಕೊಟ್ಟು ಮತ ಕೇಳುತ್ತಿದ್ದೇವೆ. ಅವರು ನಮಗಿಂತ ಒಳ್ಳೆಯ ಕೆಲಸ ಮಾಡಿ ಮತ ಕೇಳಲಿ. ರಾಜಕೀಯ ಪಕ್ಷಗಳು ಸಿದ್ಧಾಂತದ ಮೇಲೆ ರಾಜಕಾರಣ ಮಾಡಬೇಕು. ಎಲ್ಲಾ ಪಕ್ಷಗಳಲ್ಲೂ ಎಲ್ಲಾ ಧರ್ಮದ ಜನರು ಇರುತ್ತಾರೆ. ಅವರಿಗೆ ಇಷ್ಟ ಬಂದ ದೇವರನ್ನು ಪೂಜೆ ಮಾಡುತ್ತಾರೆ. ರಾಮ ಮಂದಿರದ ವಿಚಾರ ಮುಂದಿಟ್ಟು ರಾಜಕಾರಣ ಮಾಡುವುದು ಸೂಕ್ತವಲ್ಲ ಎಂದಿದ್ದಾರೆ. ಸಿದ್ದರಾಮಯ್ಯನವರ ಹೆಸರೇ ರಾಮನ ಹೆಸರು, ಅದರಲ್ಲಿ ವಿರೋಧ ಹೇಗೆ ಆಗುತ್ತದೆ. ಹೇಳುವುದಕ್ಕೆ ಒಂದು ರೀತಿ ನೀತಿ ಇರಬೇಕು. ಅವರ ಹೆಸರಿನಲ್ಲೇ ರಾಮ ಇರುವಾಗ ವಿರೋಧ ಹೇಗೆ ಮಾಡುತ್ತಾರೆ? ಯಾವ ಧರ್ಮಕ್ಕೂ ವಿರೋಧ ಮಾಡುವುದು ಸಂವಿಧಾನ ಬದ್ಧವಾಗಿ ಇಲ್ಲ. ಆ ರೀತಿ ವಿರೋಧ ಮಾಡುವುದು ಕಾನೂನು ಬಾಹಿರ. ದೇವರ ಮೇಲೆ ಪ್ರೀತಿ ವಿಶ್ವಾಸ ಎಲ್ಲರಿಗೂ ಇದೆ. ಕೆಲವರು ಹಿಂದು, ಕೆಲವರು ಮುಸ್ಲಿಂ ಹಾಗೂ ಕೆಲವರು ಕ್ರೈಸ್ತರು ಅವರವರ ವೈಯಕ್ತಿಕ ಆಚಾರ ವಿಚಾರಗಳಲ್ಲಿ ರಾಜಕೀಯ ಬೆರೆಸಬಾರದು. ನಾವು ಹಿಂದುಗಳಿದ್ದೇವೆ ದೇವರನ್ನು ಪೂಜೆ ಮಾಡುತ್ತೇವೆ ಎಂದಿದ್ದಾರೆ. ನಾವು ಹಿಂದೂ, ಮುಸ್ಲಿಂ ಹಾಗೂ ಕ್ರಿಶ್ಚಿಯನ್ನರನ್ನು ವಿರೋಧ ಮಾಡುವುದಿಲ್ಲ. ಕಾರಣ ಇಷ್ಟೇ ಗಾಂಧೀಜಿಯವರ ನೇತೃತ್ವದಲ್ಲಿ ಎಲ್ಲರೂ ಒಗ್ಗೂಡಿ ಸ್ವಾತಂತ್ರ್ಯ ತಂದಿದ್ದಾರೆ. ಸೈದ್ಧಾಂತಿಕವಾಗಿ ಜಾತ್ಯತೀತ ರಾಷ್ಟ್ರ ನಮ್ಮದು, ಸಂವಿಧಾನವನ್ನು ಬದಲಾಯಿಸುತ್ತೇವೆ ಎನ್ನುವವರ ಜೊತೆಗೆ ಏನು ಮಾತನಾಡಲು ಆಗುತ್ತದೆ ಎಂದು ಅವರು ಪ್ರಶ್ನಿಸಿದ್ದಾರೆ.

# ಫೆ. 9ರಂದು ಮಂಡ್ಯ ಬಂದ್

ರೈತರಿಗೆ ಈವರೆಗೂ ಹಣ ಬಿಡುಗಡೆ ಮಾಡಿಲ್ಲ

ರಾಜ್ಯ ಸರ್ಕಾರ ತಾರತಮ್ಯ ಮಾಡುತ್ತಿದೆ. ಜ.24 ಕಾಲೋನಿಗೆ ಹಣ ಬೇಕು ಎಂದು ಕೇಳಿದ ಮೂರೇ ದಿನಕ್ಕೆ 1 ಸಾವಿರ ಕೋಟಿ ಹಣ ನೀಡಿದ್ದಾರೆ. ಮುಲ್ಲಾಗಳ ಸಭೆಗೆ ಹೋಗಿ 10 ಸಾವಿರ ಕೋಟಿ ಹಣ ಬಿಡುಗಡೆ ಬಗ್ಗೆ ಮಾತಾಡ್ತಾರೆ, ಇದುವರೆಗೂ ರೈತರಿಗೆ ಹಣ ಬಿಡುಗಡೆ ಮಾಡಿಲ್ಲ. ಆದರೆ, ಕೇಂದ್ರ ಸರ್ಕಾರವನ್ನು ಕಾಯದೆ ನಾವು ಹಣ ಬಿಡುಗಡೆ ಮಾಡಿದ್ವಿ, ರಾಜ್ಯ ಸರ್ಕಾರದ ಜನ ವಿರೋಧಿ ನೀತಿ ಕುರಿತು ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂದು ಕಿಡಿಕಾರಿದ್ದಾರೆ.

## ವಿವಾದ ಶುರುವಾಗಿದ್ದೇಗೆ?

ಶ್ರೀ ಆಂಜನೇಯ ಅರ್ಜುನ ಧ್ವಜಸ್ತಂಭ ಎಂದು ನಾಮಕರಣ ಮಾಡಲಾಗಿದೆ. ಇದಲ್ಲದೆ ರಾಷ್ಟ್ರೀಯ ಮತ್ತು ನಾಡ ಹಬ್ಬಗಳ ಸಂದರ್ಭದಲ್ಲಿ ಈ ಧ್ವಜಸ್ತಂಭದಲ್ಲಿ ರಾಷ್ಟ್ರಧ್ವಜ ಮತ್ತು ನಾಡ ಧ್ವಜವನ್ನು ಹಾರಿಸುತ್ತಾ ಬರಲಾಗಿದೆ. ಉಳಿದ ದಿನಗಳಲ್ಲಿ ರಾಷ್ಟ್ರ ಧ್ವಜವನ್ನು ನಿತ್ಯ ಹಾರಿಸಬಾರದೆಂಬ ಕಾರಣಕ್ಕೆ ಬೇರೆ ದಿನಗಳಲ್ಲಿ ಶ್ರೀ ಆಂಜನೇಯಸ್ವಾಮಿಯ ಕೇಸರಿ ಧ್ವಜವನ್ನು ಹಾರಿಸಲು ನಿರ್ಧರಿಸಲಾಗಿತ್ತು ಎಂದು ಟ್ರಸ್ಟ್ ಸದಸ್ಯರು ತಿಳಿಸಿದ್ದಾರೆ.

ಆದರೆ ಮುಖ್ಯವಾಗಿ ಗ್ರಾಮ ಪಂಚಾಯತಿ ಹೊರಡಿಸಿದ ಠರಾವಿನಲ್ಲಿ ರಾಷ್ಟ್ರಧ್ವಜ ಮತ್ತು ನಾಡಧ್ವಜ ಹಾರಿಸಲು ಮಾತ್ರ ಅನುಮತಿ ನೀಡಲಾಗಿದೆ. ಉಳಿದ ದಿನಗಳಲ್ಲಿ ಯಾವುದೇ ಧ್ವಜವನ್ನು ಹಾರಿಸಲು ಅನುಮತಿ ಇಲ್ಲ.

ಧ್ವಜಸ್ತಂಭನಿರ್ಮಾಣಕ್ಕೆಸ್ಥಳೀಯಗ್ರಾಮಪಂಚಾಯಿತಿಯಿಂದ ಅನುಮೋದನೆ ಪಡೆಯುವ ಉದ್ದೇಶದಿಂದ ಅರ್ಜಿ ಸಲ್ಲಿಸಲಾಗಿತ್ತು. ಅದರಂತೆ ಗ್ರಾಪಂನಲ್ಲಿ ಸಭೆ ಕರೆಯಲಾಗಿದ್ದು, ಇದರಲ್ಲಿ 22 ಸದಸ್ಯರ ಪೈಕಿ 20 ಜನರು ಹಾಜರಾಗಿದ್ದರು. ಧ್ವಜಸ್ತಂಭ ನಿರ್ಮಾಣ ವಿಚಾರಕ್ಕೆ ಸಂಬಂಧಿಸಿದಂತೆ 17 ಸದಸ್ಯರು ಧ್ವಜಸ್ತಂಭ ಸ್ಥಾಪಕರ ಪರವಾಗಿ, ಇಬ್ಬರು ತಟಸ್ಥರಾಗಿ ಮತ್ತು ಮತ್ತೋರ್ವ ಸದಸ್ಯ ವಿರೋಧ ವ್ಯಕ್ತಪಡಿಸಿದ್ದರು. ಒಟ್ಟಾರೆ ಬಹುಮತದ ಆಧಾರದ ಮೇರೆಗೆ ಧ್ವಜ ಸ್ತಂಭ ಸ್ಥಾಪನೆಗೆ ಅನುಮೋದನೆ ನೀಡಲಾಗಿತ್ತು.

ಅದರಂತೆ ಜ.20ರಂದು ಗ್ರಾಮದಲ್ಲಿ ಸರಳ ಸಮಾರಂಭದಲ್ಲಿ ಧ್ವಜಸ್ತಂಭ ಉದ್ಘಾಟಿಸಿ ಆಂಜನೇಯಸ್ವಾಮಿ ಧ್ವಜವನ್ನು ಹಾರಿಸಲಾಯಿತು. ಮಾತ್ರವಲ್ಲದೆ ಜ.26ರಂದು ಗಣರಾಜ್ಯೋತ್ಸವ ವೇಳೆ ರಾಷ್ಟ್ರ ಧ್ವಜವನ್ನು ಹಾರಿಸಿ, ಸಂಜೆ ಮತ್ತೆ ಆಂಜನೇಯಸ್ವಾಮಿ ಧ್ವಜ ಹಾರಿಸಲಾಯಿತು. ಆದರೆ ಮುಖ್ಯವಾಗಿ ಗ್ರಾಮ ಪಂಚಾಯತಿ ಹೊರಡಿಸಿದ ಠರಾವಿನಲ್ಲಿ ರಾಷ್ಟ್ರಧ್ವಜ ಮತ್ತು ನಾಡಧ್ವಜ ಹಾರಿಸಲು ಮಾತ್ರ ಅನುಮತಿ ನೀಡಲಾಗಿತ್ತು. ಉಳಿದ ದಿನಗಳಲ್ಲಿ ಯಾವುದೇ ಧ್ವಜವನ್ನು ಹಾರಿಸಲು ಅನುಮತಿ ಇಲ್ಲ. ಆದರೆ ಅಯೋಧ್ಯೆ ರಾಮ ಮಂದಿರ ಉದ್ಘಾಟನೆ ನಿಮಿತ್ತ ಎರಡು ದಿನ ಹನುಮ ಧ್ವಜ ಹಾರಿಸಲು ಗ್ರಾಮ ಪಂಚಾಯತಿಯವರು ಮೌಖಿಕವಾಗಿ ಅನುಮತಿ ನೀಡಿದ್ದರು. ಅದರಂತೆ ಗ್ರಾಮಸ್ಥರು ಹನುಮ ಧ್ವಜ ಹಾರಿಸಿದ್ದೇವೆ ಎಂದು ಗ್ರಾಮಸ್ಥರು ಹೇಳಿದ್ದಾರೆ. ಆದ್ರೆ, ಇದನ್ನು ಸಹಿಸದ ಕೆಲವರು ಪಿತೂರಿ ನಡೆಸಿ ತಾಲೂಕು ಪಂಚಾಯಿತಿ ಇಒ ವೀಣಾ ಅವರಿಗೆ ದೂರು ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.

ದೂರಿನನ್ವಯ ಶನಿವಾರ ತಾ.ಪಂ ಇಒ ಸ್ಥಳ ಪರಿಶೀಲನೆ ನಡೆಸಿ ಧ್ವಜಸ್ತಂಭವನ್ನು ತೆರವುಗೊಳಿಸುವಂತೆ ಸೂಚನೆ ನೀಡಿದ್ದಾರೆ. ಇದಕ್ಕೆ ಖಂಡಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿ ಗ್ರಾಮದ ಎಲ್ಲ ಅಂಗಡಿ ಮುಂಗಟ್ಟುಗಳನ್ನು ಸ್ವಯಂಪ್ರೇರಿತವಾಗಿ ಬಂದ್ ಮಾಡಿದ್ದರು. ಇದಲ್ಲದೆ ಹಿಂದೂ ಪರ ಸಂಘಟನೆಗಳ ಪದಾಧಿಕಾರಿ, ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಸಾಥ್ ನೀಡಿದ್ದರು. ಈ ನಡುವೆ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ತಾ.ಪಂ ಇಒ ಮತ್ತು ತಹಶೀಲ್ದಾರ್ ಡಾ.ಶಿವಕುಮಾರ್ ಬಿರಾದಾರ್ ನೇತೃತ್ವದಲ್ಲಿ ಸಭೆ ನಡೆಸಿ ಗ್ರಾಮಸ್ಥರು ಮತ್ತು ಗ್ರಾಮ ಪಂಚಾಯಿತಿ ಸದಸ್ಯರ ಸಲಹೆ ಮೇರೆಗೆ ಧ್ವಜಸ್ತಂಭ ತೆರವನ್ನು ಸ್ಥಗಿತಗೊಳಿಸುವ ನಿರ್ಧಾರ ಕೈಗೊಳ್ಳಲಾಯಿತು. ಪ್ರತಿಭಟನಾ ಸ್ಥಳಕ್ಕೆ ಧಾವಿಸಿದ ಅಧಿಕಾರಿಗಳು ಮೇಲಾಧಿಕಾರಿಗಳಿಗೆ ತಿಳಿಸಿ ಅವರ ಸೂಚನೆ ಮೇರೆಗೆ ನಿರ್ಧಾರ ಪ್ರಕಟಿಸುವುದಾಗಿ ಭರವಸೆ ನೀಡಿದ ಬಳಿಕ ಗ್ರಾಮಸ್ಥರು ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ವಾಪಸ್ ಪಡೆದ್ದರು.

**24 ಗಂಟೆಯೂ ರಾಷ್ಟ್ರಧ್ವಜ ಹಾರಿಸಲು ನಿರ್ಧಾರ:** ಮೇಲಾಧಿಕಾರಿಗಳ ಸೂಚನೆ ಮೇರೆಗೆ ಮತ್ತೆ ಗ್ರಾಮಕ್ಕೆ ಆಗಮಿಸಿದ ತಾ.ಪಂ ಇಒ ಮತ್ತು ತಹಶೀಲ್ದಾರ್ ಡಾ.ಶಿವಕುಮಾರ್ ಬಿರಾದಾರ್ ಕೇವಲ ಹನುಮ ಧ್ವಜ ತೆರವುಗೊಳಿಸಲು ಮುಂದಾದರು. ಆದರೆ ಇದಕ್ಕೆ ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದರು. ಆದರೂ ಕೂಡ ಗ್ರಾಮದಲ್ಲಿ 144 ಸೆಕ್ಷನ್ ಜಾರಿ ಮಾಡಿ, ಕೊನೆಗೂ ಹನುಮ ಧ್ವಜ ಕೆಳಗೆ ಇಳಿಸಿ, ರಾಷ್ಟ್ರಧ್ವಜ ಹಾರಿಸಲಾಯಿತು. ಇನ್ಮುಂದೆ ವಿವಾದಿತ ಧ್ವಜ ಸ್ತಂಭದಲ್ಲಿ 24 ಗಂಟೆಯೂ ರಾಷ್ಟ್ರಧ್ವಜ ಹಾರಿಸಲು ಜಿಲ್ಲಾಡಳಿತ ನಿರ್ಧರಿಸಿದೆ.

## ಅಧಿಕಾರ ಸ್ವೀಕಾರ

ನೂತನ ಅಧ್ಯಕ್ಷರಾಗಿ ಎನ್.ಎ. ಹ್ಯಾರಿಸ್ ನೇಮಕಗೊಂಡ ಸಂಬಂಧ ಡಿಕೆ ಶಿವಕುಮಾರ್ ಅವರು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿದ್ದು ಶುಭ ಕೋರಿದ್ದಾರೆ.

ಇನ್ನು ಈ ಬಗ್ಗೆ ಮಾತನಾಡಿದ ಹ್ಯಾರಿಸ್, ಜವಾಬ್ದಾರಿಯನ್ನ ನನಗೆ ವಹಿಸಿದ್ದಾರೆ. ಬೆಂಗಳೂರು ನಗರದ ಬಗ್ಗೆ ನನಗೆ ಗೊತ್ತಿದೆ. ಈಗಾಗಲೇ ನಾಲ್ಕು ಬಾರಿ ಶಾಸಕನಾಗಿ ಕೆಲಸ ಮಾಡಿದ್ದೇನೆ. ಟ್ರಾನ್ಸ್‌ಫರೆನ್ಸಿ ತರುವಲ್ಲಿ ಪ್ರಯತ್ನಿಸುತ್ತೇನೆ. ಬಿಡಿಎಯನ್ನ ಜನಸ್ನೇಹಿ ಮಾಡಲು ಯತ್ನಿಸುತ್ತೇನೆ. ಸಿಎಂ, ಡಿಸಿಎಂ, ಬಿಡಿಎ ಜನಸ್ನೇಹಿ ಮಾಡಿ ಎಂದಿದ್ದಾರೆ. ಹೊಸ ಲೇಔಟ್ ಬಗ್ಗೆಯೂ ಯೋಜನೆ ಇದೆ ಎಂದು ತಿಳಿಸಿದರು.

ಶಾಂತಿನಗರ ಅಭಿವೃದ್ಧಿಯಾಗಿಲ್ಲ ಈಗ ನಿಮ್ಮನ್ನ ಬಿಡಿಎ ಅಧ್ಯಕ್ಷರನ್ನಾಗಿ ಮಾಡಿರುವುದಕ್ಕೆ ವಿರೋಧ ವ್ಯಕ್ತವಾಗಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಹ್ಯಾರಿಸ್, ರಾಜಕೀಯವಾಗಿ ಮಾತನಾಡಿದ್ರೆ, ನಾನು ರಾಜಕೀಯ ಮಾತನಾಡ್ತೇನೆ. ಬೆಂಗಳೂರು ಎಲ್ಲವೂ ಬಿಡಿಎ ನಲ್ಲಿ ಬರಲ್ಲ. ಎಲ್ಲರ ಸಲಹೆಯನ್ನ ತೆಗೆದುಕೊಂಡು ಕೆಲಸ ಮಾಡ್ತೇನೆ. ಬಿಡಿಎಯನ್ನ ಇನ್ನಷ್ಟು ಅಭಿವೃದ್ಧಿ ಮಾಡ್ತೇವೆ. ಸಂಪನ್ಮೂಲಗಳ ಕ್ರೋಡಿಕರಣಕ್ಕೆ ಮುಂದಾಗ್ತೇವೆ ಎಂದರು.

ಮಂಡ್ಯ ವಿಚಾರ ಬಿಜೆಪಿ ಪ್ರತಿಭಟನೆ ಕುರಿತು ಪ್ರತಿಕ್ರಿಯೆ ನೀಡಿದ ಹ್ಯಾರಿಸ್, ವಿರೋಧ ಪಕ್ಷ ಅವರ ಕೆಲಸ ಮಾಡ್ತಿದ್ದಾರೆ. ಅವರಿಗೆ ಅದನ್ನ ಬಿಟ್ಟು ಬೇರೆ ಕೆಲಸ ಇಲ್ಲ. ವಿರೋಧ ಪಕ್ಷ ಸರ್ಕಾರಕ್ಕೆ ಸಲಹೆಯನ್ನ ಕೊಡಬೇಕು. ಜನರಿಗೆ ಒಳ್ಳೆಯದಾಗೋ ಹಾಗೆ ಕೆಲಸ ಸಲಹೆ ಕೊಡಬೇಕು. ಅದನ್ನ ಬಿಟ್ಟು ಈ ರೀತಿ ನಡೆದುಕೊಂಡ್ರೆ ಜನರಿಗೆ ಪ್ರಯೋಜನವಾಗಲ್ಲ ಎಂದು ತಿಳಿಸಿದರು.

## ಬಾವುಟ ಹಾರಿಸುತ್ತೇವೆ

ವಿರುದ್ಧ ದೇಶದ್ರೋಹದ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಇನ್ನು ಪ್ರಕರಣ ಸಂಬಂಧ ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಮಾತನಾಡಿ, ಈ ಕಾಂಗ್ರೆಸ್ ನವರಿಗೆ ಕೇಸರಿ ಕಂಡ್ರೆ ಆಗಲ್ಲ. ಹಿಂದೂ, ಹಿಂದುತ್ವ ಕಂಡ್ರೆ ಆಗಲ್ಲ. ಇಡೀ ದೇಶದಲ್ಲಿ ಶ್ರೀ ರಾಮನ ಅಲೆಯಲ್ಲ, ಸುನಾಮಿಯೇ ಎದ್ದಿದೆ. ಮನೆ ಮನೆ, ಹಳ್ಳಿ ಹಳ್ಳಿಗಳಲ್ಲಿ ಆ ವೈಭವ ನೋಡಲಾಗದೇ ಹೊಟ್ಟೆ ಉರಿತಾಯಿದೆ ಇವರಿಗೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೇಸರಿ ಯಾವುದೋ ವ್ಯಕ್ತಿ, ಧರ್ಮ ಪಕ್ಷದ್ದೋ ಅಲ್ಲ, ಸಾವಿರಾರು ವರ್ಷದಿಂದ ಬಂದ ಕೇಸರಿ ಪತಾಕೆ ನಿಮಗೇನು ತೊಂದರೆ ಕೊಡುತ್ತಿದೆ. ಮುಸ್ಲಿಂ ವ್ಯಕ್ತಿಗಳು ಅಡ್ಡಪಡಿಸಿದರೇ, ಅವರಿಗೆ ಹೇಳಿ. ಇದು ಪಾಕಿಸ್ತಾನ ಅಲ್ಲ, ಅಫ್ಘಾನಿಸ್ತಾನ ಅಲ್ಲ, ಭಾರತ ಎಂದು. ಹಿಂದೂಸ್ತಾನ್ ದಲ್ಲಿ ಕೇಸರಿ ಧ್ವಜವೇ ಹಾರಾಡುತ್ತೆ. ಇದನ್ನ ಅವರಿಗೆ ಹೇಳೋದು ಬಿಟ್ಟು, ಇವತ್ತು ಕೇಸರಿ ಧ್ವಜ ಇಳಿಸುವ ಕಾಂಗ್ರೆಸ್ ನವರು ಧರ್ಮ ದ್ರೋಹಿಗಳು ಎಂದರು.

ಎರಡು ದಿನಗಳ ಹಿಂದೆ ಮಂಡ್ಯ ಜಿಲ್ಲೆಯ ಕೆರಗೋಡನಲ್ಲಿ, ಕೇಸರಿ ಬಣ್ಣದ ಹನುಮನ ಚಿತ್ರವಿರುವ ಧ್ವಜವನ್ನ ತೆಗೆದು ಹಾಕಿದ್ದಾರೆ. ಯಾರೂ ಕಂಪ್ಲೇಟ್ ಕೊಡದೇ, ಯಾವುದೇ ವಿವಾದ ಇಲ್ಲದೇ ಈಗ ಅದನ್ನ ಸಡನ್ ಆಗಿ ತೆಗೆಯುವ ಕಾರಣ ಏನು 108 ಅಡಿಯ ಧ್ವಜದ ಕಂಬ ಇದೆ, ಇದನ್ನ ನೋಡಿದರೇ ಅಲ್ಲಿರುವ ನಾಗರಿಕರ, ಯುವಕರ ಉತ್ಸಾಹವನ್ನ ಮೆಚ್ಚಬೇಕು. ಶ್ರೀರಾಮನ ಮೇಲಿರುವ ಕಳಕಳಿ ಇಂದ ಜನವರಿ 22ರಂದು ಆ ಕಂಬವನ್ನ ಪ್ರತಿಷ್ಠಾಪನೆ ಮಾಡಿದ್ದಾರೆ. ಜನವರಿ 26 ರಂದು, ಹನುಮ ಧ್ವಜ ಇಳಿಸಿ ಆ ಕಂಬದ ಮೇಲೆ ರಾಷ್ಟ್ರಧ್ವಜ ಹಾರಿಸಿದ್ದಾರೆ. ಮಾರನೇಯ ದಿನ ಹನುಮ ಧ್ವಜ ಹಾಕಿದ್ದಾರೆ. ಅದೇ ಸ್ಥಳದಲ್ಲಿ ಮತ್ತೆ ಹನುಮಧ್ವಜ ಪ್ರತಿಷ್ಠಾಪನೆ ಆಗಬೇಕು ಎಂದು ಮುತಾಲಿಕ್ ತಿಳಿಸಿದರು.

## ಸರ್ಕಾರ ಸೈಲೆಂಟ್

ಈ ಪ್ರಕರಣದ ಬಗ್ಗೆ ಜನಜಾಗೃತಿ ಸಂಘ ಹೋರಾಟ ಮಾಡಿದ ಫಲವಾಗಿ ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ. ಸಿಐಡಿ ಅಧಿಕಾರಿಗಳು ಒಟ್ಟು 19 ಕೋಟಿ 55 ಲಕ್ಷ 90 ಸಾವಿರ ರೂಪಾಯಿ ನಕಲಿ ಖಾತೆಗಳಿಗೆ ಹಣ ಹಾಕಿ ಲೂಟಿ ಮಾಡಿರೋದನ್ನು ತನಿಖೆ ಮಾಡಿ, ಇಲಾಖೆಯ ವಿಶೇಷ ಭೂ ಸ್ವಾಧೀನ ಅಧಿಕಾರಿಯಾಗಿ ನಿವೃತ್ತರಾಗಿದ್ದ ವ್ಹಿ. ಡಿ. ಸಜ್ಜನ್ ಸೇರಿ ಅನೇಕ ಅಧಿಕಾರಿಗಳನ್ನೇ ಜೈಲಿಗಟ್ಟಿದ್ದಾರೆ.

ಈಗ ಇದೇ ಅಧಿಕಾರಿಗಳು ಸತ್ತವರ ಹೆಸರಿನ ಮೇಲೆಯೂ ನಕಲಿ ಖಾತೆಗಳನ್ನು ಸೃಷ್ಟಿಸಿ ಹಣ ಹೊಡೆದಿರೋದನ್ನು ಜನಜಾಗೃತಿ ಸಂಘ ಬಯಲು ಮಾಡಿದೆ. ಅದರಲ್ಲಿಯೂ ಹುಬ್ಬಳ್ಳಿಯಲ್ಲಿ ಕೆಲವರ ಜಮೀನು ವಿಮಾನ ನಿಲ್ದಾಣಕ್ಕೆ ಹೋಗಿತ್ತು. ಅದರಲ್ಲಿ

## ಮೊದಲ ಪುಟದಿಂದ...

2010ರಲ್ಲಿಯೇ ರೈತರಿಗೆ ಹಣ ಕೊಟ್ಟಿದ್ದರು. ಆದರೆ ಈಗ 2020ರಲ್ಲಿ ಇಲ್ಲಿನ ಕೆಲ ರೈತರ ಹೆಸರಿನ ಮೇಲೆ ನಕಲಿ ಖಾತೆ ಸೃಷ್ಟಿಸಿ ಕೋಟ್ಯಾಂತರ ರೂಪಾಯಿ ಡ್ರಾ, ಮಾಡಿಕೊಂಡಿದ್ದಾರೆ. ಅದೇ ರೈತರ ಕೆಲ ಸಂಬಂಧಿಗಳು ನಿಧನರಾಗಿದ್ದರು. ಅವರ ನಂತರ ಅವರು ಜೀವಂತ ಇದ್ದಾರೆ ಅಂತಾ ತೋರಿಸಿ ಹಣ ಹೊಡೆದಿದ್ದು ಬಯಲಿಗೆ ಬಂದಿದೆ.

ಇನ್ನು ಯಾವುದೇ ಅಧಿಕಾರಿಯ ನಿವೃತ್ತಿಯ ದಿನಾಂಕ ಸಮೀಪಕ್ಕೆ ಬಂದಾಗ, ಮಹತ್ವದ ದಾಖಲೆಗಳನ್ನು ಮೂವ್ ಮಾಡೋಕೆ ಬರೋದೆ ಇಲ್ಲ. ಆದರೆ ಇಲ್ಲಿ ಪ್ರಮುಖ ಆರೋಪಿಯಾಗಿರುವ ವಿ.ಡಿ. ಸಜ್ಜನ್ ನಿವೃತ್ತಿಯ ಕೊನೆಯ 6 ತಿಂಗಳ ಅವಧಿಯಲ್ಲಿ 506 ಕಡತಗಳಿಗೆ ಭೂ ಪರಿಹಾರ ಹಂಚಿಕೆ ಮಾಡಿ, 138 ಕೋಟಿ ರೂಪಾಯಿ ಆರ್.ಟಿ.ಜಿ.ಎಸ್. ಮಾಡಿದ್ದಾರೆ.

ಅದರಲ್ಲಿಯೂ ಈಗ 40 ಕೋಟಿ ರೂಪಾಯಿ ಅಕ್ರಮವಾಗಿ ಹಣ ವರ್ಗಾವಣೆ ಆಗಿದೆ ಅನ್ನೋದನ್ನು ಹೋರಾಟಗಾರರು ಪತ್ತೆ ಮಾಡಿದ್ದಾರೆ. ಆದರೆ ಇದನ್ನೆಲ್ಲ ಸರಿಯಾಗಿ ತನಿಖೆ ಮಾಡಬೇಕಿದ್ದ ಸಿಐಡಿ ಮಾತ್ರ ಕೆಲವರನ್ನು ಬಚಾವ್ ಮಾಡುವ ಕೆಲಸ ಮಾಡಿದೆ ಅನ್ನೋದು ಹೋರಾಟಗಾರರ ಆರೋಪ.

ಸಿಐಡಿಗಿಂತ ಮೊದಲು ಇದೇ ಜನಜಾಗೃತಿ ಸಂಘದ ಹೋರಾಟದ ಮೇರೆಗೆ ಸರ್ಕಾರ ಇಲಾಖೆಯ ಹಿರಿಯ ಅಧಿಕಾರಿಗಳಿಂದಲೂ ತನಿಖೆ ಕೈಗೊಂಡಿತ್ತು. ಅಲ್ಲಿಯೂ ಸಹ ಪ್ರಮುಖ ಕಡತಗಳ ಹಾಗೂ ನಕಲಿ ಬ್ಯಾಂಕ್ ಖಾತೆಗಳ ಸಮರ್ಪಕ ತನಿಖೆಯೂ ಆಗಿಲ್ಲವಂತೆ. ಹೀಗಾಗಿ ಈ ಇಡೀ ಪ್ರಕರಣವನ್ನು ಎಸ್ ಐ ಟಿ ಇಲ್ಲವೇ ಸಿಬಿಐಗೆ ಒಪ್ಪಿಸಬೇಕು. ಇಲ್ಲದೇ ಹೋದಲ್ಲಿ ನಾವು ಕಾನೂನು ಹೋರಾಟಕ್ಕೆ ಮುಂದಾಗುತ್ತೇವೆ ಅನ್ನೋ ಎಚ್ಚರಿಕೆ ನೀಡಿದ್ದಾರೆ.

ಇದೀಗ ಈ ಪ್ರಕರಣದಲ್ಲಿ ಸಿಐಡಿ ವರ್ತನೆ ಬೇಲಿಯೆ ಎದ್ದು ಹೊಲ ಮೇಯ್ದಂತೆ ಆಗಿದೆ. ಇಲ್ಲಿ ಸರ್ಕಾರದ ಹಣವನ್ನು ಸರ್ಕಾರಿ ಅಧಿಕಾರಿಗಳೇ ಭರ್ಜರಿ ಲೂಟಿ ಮಾಡಿದ್ದು, ಸಾರ್ವಜನಿಕ ಸಂಘಟನೆಗಳು ಹೋರಾಟ ಮಾಡಿದಾಗಲೇ ಬಹಿರಂಗಗೊಂಡಿದೆ.

ಇಷ್ಟೆಲ್ಲ ಆದ ಬಳಿಕವೂ ಸರ್ಕಾರ ಮಾತ್ರ ಇದನ್ನು ಗಂಭೀರವಾಗಿ ತೆಗೆದುಕೊಳ್ಳುತ್ತಿಲ್ಲ. ಇದನ್ನೆಲ್ಲ ನೋಡಿದರೆ, ಇದರಲ್ಲಿರೋರ ಕೈಗಳು ಮೇಲ್ಮಟ್ಟದವರೆಗೂ ಇದ್ದೆ ಇರುತ್ತೆ ಅನ್ನೋ ಸಂಶಯ ಮೂಡೋಕೆ ಶುರುವಾಗಿದೆ. ಇದೀಗ ಹೋರಾಟಗಾರರು ಕಾನೂನು ಹೋರಾಟ ಆರಂಭಿಸೋಕೆ ಮುಂಚೆಯೇ ಸರ್ಕಾರ ಎಚ್ಚೆತ್ತುಕೊಳ್ಳುತ್ತಾ? ಅನ್ನೋದನ್ನು ಕಾದು ನೋಡಬೇಕಿದೆ.

## ಅಸೂಯೆ ಬಿಟ್ಟುಬಿಡಿ

### ಮೋದಿ ಸಲಹೆಗಳು

**1. ಇತರರ ಬಗ್ಗೆ ಅಸೂಯೆ ಪಡಬೇಡಿ:** ನಿಮಗೆ ನೀವು ಸ್ಪರ್ಧಿಯಾಗಿ, ಇತರರ ಬಗ್ಗೆ ಅಸೂಯೆ ಇರಬಾರದು. ಸ್ನೇಹಿತರು ಪರಸ್ಪರ ಜ್ಞಾನವನ್ನು ಹಂಚಿಕೊಳ್ಳಬೇಕು. ವಿದ್ಯಾರ್ಥಿಗಳು ತಮ್ಮ ಸ್ನೇಹಿತರೊಂದಿಗೆ ಸ್ಪರ್ಧೆಯಲ್ಲಿ ತೊಡಗಬಾರದು. ಪಾಲಕರು ಕೂಡ ಮಕ್ಕಳಲ್ಲಿ ಸ್ಪರ್ಧೆಯ ಭಾವನೆ ಮೂಡಿಸಬಾರದು.

**2. ಬರವಣಿಗೆಯನ್ನು ಅಭ್ಯಾಸ ಮಾಡಿ:** ಪರೀಕ್ಷೆಯಲ್ಲಿ ದೊಡ್ಡ ಸವಾಲು ಬರಹ ಎಆದ್ದರಿಂದ, ಪರೀಕ್ಷೆಯ ಮೊದಲು ನೀವು ಓದಿದ್ದನ್ನು ಬರೆಯುವುದು ಮುಖ್ಯ. ಇದರ ನಂತರ, ಯಾವುದೇ ತಪ್ಪು ಸಂಭವಿಸಿದಲ್ಲಿ, ಅದನ್ನು ನೀವೇ ಸರಿಪಡಿಸಿ. ನೀವು ಹೆಚ್ಚು ಬರೆಯುತ್ತೀರಿ, ತೀಕ್ಷ್ಣತೆ ಹೆಚ್ಚಾಗುತ್ತದೆ. ಪರೀಕ್ಷಾ ಹಾಲ್‌ನಲ್ಲಿ ಅಕ್ಕಪಕ್ಕದವರು ಎಷ್ಟು ವೇಗವಾಗಿ ಬರೆಯುತ್ತಿದ್ದಾರೆ ಎಂದು ನೋಡಬೇಡಿ. ನಿಮ್ಮನ್ನು ನಂಬಿ ಎಂದರು.

**3. ಪರೀಕ್ಷೆಗೂ ಮುನ್ನ ನಕ್ಕು ತಮಾಷೆ ಮಾಡಿ:** ಪರೀಕ್ಷೆಗೂ ಮುನ್ನ 5-10 ನಿಮಿಷಗಳ ಕಾಲ ತಮಾಷೆ ಮಾಡುವಂತೆ ವಿದ್ಯಾರ್ಥಿಗಳಿಗೆ ಪ್ರಧಾನಿ ಮೋದಿ ಸಲಹೆ ನೀಡಿದರು. ಇದರಿಂದ ಒತ್ತಡ ಉಂಟಾಗುವುದಿಲ್ಲ. ಪರೀಕ್ಷೆಗೂ ಮುನ್ನ ಆರಾಮವಾಗಿ ಕುಳಿತು 5-10 ನಿಮಿಷ ನಗುತ್ತಾ ತಮಾಷೆ ಮಾಡಿ ಎಂದು ಪ್ರಧಾನಿ ಹೇಳಿದರು. ಇದರೊಂದಿಗೆ ನೀವು ನಿಮ್ಮಲ್ಲಿ ಕಳೆದುಹೋಗುತ್ತೀರಿ. ಇದು ನಿಮ್ಮನ್ನು ಪರೀಕ್ಷೆಯ ಒತ್ತಡದಿಂದ ಹೊರತರುತ್ತದೆ. ಪ್ರಶ್ನೆ ಪತ್ರಿಕೆ ಬಂದಾಗ, ನೀವು ಅದನ್ನು ಸುಲಭವಾಗಿ ಮಾಡಲು ಸಾಧ್ಯವಾಗುತ್ತದೆ. ಮೊದಲು ಸಂಪೂರ್ಣ ಪ್ರಶ್ನೆ ಪತ್ರಿಕೆಯನ್ನು ಓದಿ. ಇದರ ನಂತರ ನೀವು ಅದನ್ನು ಹೇಗೆ ಮಾಡಬೇಕೆಂದು ನಿರ್ಧರಿಸಿ.

**4. ಮಕ್ಕಳಿಗೆ ಹೊಸ ಪೆನ್ನು ಕೊಡಬೇಡಿ:** ಸಾಮಾನ್ಯವಾಗಿ ಪೋಷಕರು ತಮ್ಮ ಮಕ್ಕಳಿಗೆ ಪರೀಕ್ಷೆಯ ದಿನದಂದು ಹೊಸ ಪೆನ್ನುಗಳನ್ನು ತರುತ್ತಾರೆ ಎಂದು ಪ್ರಧಾನಿ ಹೇಳಿದರು. ಆದರೆ ಇದನ್ನು ಮಾಡಬೇಡಿ, ಮಕ್ಕಳು ಪ್ರತಿದಿನ ಬಳಸುವ ಪೆನ್ನನ್ನೇ ಕೊಡಿ. ಬಟ್ಟೆಗಾಗಿಯೂ ಮಗುವಿಗೆ ತೊಂದರೆ ಕೊಡಬೇಡಿ. ಅವನು ಏನು ಧರಿಸಿದ್ದಾನೋ ಅದೇ ಧರಿಸಲಿ. ಇದರಿಂದ ಅವರು ಪರೀಕ್ಷೆಯಲ್ಲಿ ಆರಾಮದಾಯಕವಾಗುತ್ತಾರೆ.

**5. ಮನೆಯಲ್ಲಿ ಒತ್ತಡ ಸೃಷ್ಟಿಸಬೇಡಿ:** ಪರೀಕ್ಷೆಗೂ ಮುನ್ನ ವಿದ್ಯಾರ್ಥಿಗಳ ಮೇಲೆ ಮನೆಯವರಿಂದ ಆಗುವ ಒತ್ತಡದ ಕುರಿತು ಮಾತನಾಡಿದ ಪ್ರಧಾನಿ ಮೋದಿ, ಪರೀಕ್ಷೆಗೆ ಸಂಬಂಧಿಸಿದಂತೆ ಪೋಷಕರು, ಒಡಹುಟ್ಟಿದವರು ಮತ್ತು ಶಿಕ್ಷಕರಿಂದ ಒತ್ತಡವಿದೆ ಎಂದು ಹೇಳಿದರು. ನಿಮ್ಮ ಪೋಷಕರು ನಿಲ್ಲಿಸಿದರೆ, ನಿಮ್ಮ ಹಿರಿಯ ಸಹೋದರರು ಅಥವಾ ಶಿಕ್ಷಕರು ನಿಮ್ಮನ್ನು ನಿಂದಿಸಲು ಪ್ರಾರಂಭಿಸುತ್ತಾರೆ. ಇದರಿಂದ ವಿದ್ಯಾರ್ಥಿಗಳ ಮೇಲೆ ಒತ್ತಡ ಹೆಚ್ಚುತ್ತಿದೆ. ವಿದ್ಯಾರ್ಥಿಗಳಿಂದ ಮಾತ್ರ ಈ ಸಮಸ್ಯೆಯನ್ನು ಪರಿಹರಿಸಲು ಸಾಧ್ಯವಿಲ್ಲ. ಇದಕ್ಕೆ ಕುಟುಂಬಗಳು ಮತ್ತು ಶಿಕ್ಷಕರ ನಡುವೆ ಚರ್ಚೆಯ ಅಗತ್ಯವಿದೆ.

## ಭಕ್ತರ ಸೇವೆ

ನ್ಯಾಯಾಲದ ಮೆಟ್ಟಿಲು ಹತ್ತಿತ್ತು. ನಂತ್ರ ಮಧ್ಯಂತರ ಆದೇಶ ಹೊರಡಿಸಿದ್ದ ಹೈಕೋರ್ಟ್ ಭಕ್ತರಿಗೆ ಪಂಕ್ತಿ ಸೇವೆಗೆ ಅಡಚಣೆ ಮಾಡದೇ ಕರ್ನಾಟಕ ಪ್ರಾಣಿ ಬಲಿ ಕಾಯ್ದೆ ಉಲ್ಲಂಘನೆ ಮಾಡದಂತೆ ಆದೇಶ ನೀಡಿತ್ತು.ಇದ್ರಿಂದ ಪ್ರಾಣಿ ವಧೆ ನಿಷೇಧ ಮಾಡಲಾಗಿದೆ.

ಚಿಕ್ಕಲ್ಲೂರಿನ ಸಿದ್ದಪ್ಪಾಜಿ ಜಾತ್ರೆಯ ವಿಶೇಷ ಅಂದ್ರೆ ಭಾಗವಹಿಸುವವರೆಲ್ಲ ಬಹುತೇಕ ರೈತರೇ. 12ನೇ ಶತಮಾನದಲ್ಲಿ ಜಾತಿ ಪದ್ದತಿ, ಪಂಕ್ತಿ ಸೇವೆ ತಾರತಮ್ಯಗಳ ವಿರುದ್ಧ ಹೋರಾಟ ಮಾಡಿದ ರಾಚಪ್ಪಜೀ ಅವರು ಉತ್ತರದಿಂದ ದಕ್ಷಿಣಾಭಿಮುಕವಾಗಿ ಬಂದರು. ಅವರ ಶಿಷ್ಯರೇ ನೀಲಗಾರ ಸಿದ್ದಪ್ಪಾಜಿ. ಜಾತಿ ಭೇದ ಧಿಕ್ಕರಿಸಿ ಎಲ್ಲರೂ ಸಹಪಂಕ್ತಿಯಲ್ಲಿ ಊಟ ಮಾಡಬೇಕು ಎಂಬ ಕಲ್ಪನೆಯೊಂದಿಗೆ ಚಿಕ್ಕಲ್ಲೂರಿನಲ್ಲಿ ನೆಲೆಸಿದರು.

ಅವರ ಐಕ್ಯವಾದ ನಂತರ ವರ್ಷದ ಮೊದಲ ಹುಣ್ಣಿಮೆ ದಿನದಿಂದ ಐದು ದಿನಗಳ ಕಾಲ ಜಾತ್ರೆ ನಡೆಯುತ್ತದೆ.ಆದ್ರೆ ಭಕ್ತರು ತರುವ ಕುರಿ,ಕೋಳಿಗಳನ್ನು ತೆಗೆದುಕೊಂಡು ಹೋಗದಂತೆ ಪೊಲೀಸರು ಹದ್ದಿನಕಣ್ಣಿಟ್ಟು ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆ ನಡೆಸುತ್ತಿದ್ದರು. ಆದ್ರು ಕೂಡ ಕದ್ದುಮುಚ್ಚಿ ಕುರಿ,ಕೋಳಿ ಕೊಯ್ದು ಮಾಂಸಾಹಾರ ತಯಾರಿಸಿ ಖಂಡಾಯಕ್ಕೆ ಪೂಜೆ ಸಲ್ಲಿಸಿದ್ದಾರೆ. ಜೊತೆಗೆ ಮದ್ಯ,ಮಾಂಸಾಹಾರ,ಭಂಗಿ ಸೊಪ್ಪಿನ ನೈವೇದ್ಯ ಕೂಡ ಇಡ್ತಾರೆ.

ಒಟ್ಟಾರೆ ಗೊಂದಲ ಜಿಜ್ಞಾಸೆ ನಡುವೆ ನಡುವೆಯೇ ಚಿಕ್ಕಲ್ಲೂರಿನಲ್ಲಿ ಪಂಕ್ತಿ ಸೇವೆ ನಡೆದಿದೆ.ಮುಂದಿನ ಬಾರಿ ಸರ್ಕಾರ ಪಂಕ್ತಿ ಸೇವೆಗೆ ಮಾಂಸಾಹಾರ ಭೋಜನಕ್ಕೆ ಅವಕಾಶ ಕೊಡಲಿ,ನಾವೂ ಪ್ರಾಣಿ ಬಲಿ ಕೊಡಲ್ಲ,ಹರಕೆ ತೀರಿಸುವ ಕೆಲಸ ಮಾಡ್ತೀವಿ,ಜನರ ಆಚಾರ ವಿಚಾರಕ್ಕೂ ಮಣೆ ಹಾಕುವಂತೆ ಮನವಿ ಮಾಡ್ತಿದ್ದಾರೆ.

## ನಿರ್ಬಂಧ

ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಸುಡುಮದ್ದು ತಯಾರಿಕಾ ಘಟಕಗಳನ್ನು ನಿರ್ಬಂಧಿಸಿ ಅಮಾನತ್ತಿನಲಿಡಲು ಆದೇಶಿಸಲಾಗಿದೆ. ಸುಪ್ರೀಂಕೋರ್ಟ್ ಆದೇಶ, ಸರ್ಕಾರದ ಮಾರ್ಗಸೂಚಿ ಪಾಲನೆಯ ಮರುಪರಿಶೀಲನೆಗಾಗಿ ನಿರ್ಬಂಧ ವಿಧಿಸಲಾಗಿದೆ. ಅಲ್ಲದೆ, ಪಟಾಕಿ ತಯಾರಿಕೆ, ಮಾರಾಟ ಘಟಕಗಳ ಮರುಪರಿಶೀಲನೆಗೆ ಜಿಲ್ಲಾ ಮಟ್ಟದ ತನಿಖಾ ಸಮಿತಿ ರಚನೆ ಮಾಡಲಾಗಿದೆ.

ಮಂಗಳೂರು ಮತ್ತು ಪುತ್ತೂರು ಎಸಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿದ್ದು, ಜಿಲ್ಲಾ ವ್ಯಾಪ್ತಿಯ ಎಲ್ಲಾ ಸುಡುಮದ್ದು ತಯಾರಿಕಾ ಘಟಕಗಳನ್ನು ತಕ್ಷಣ ಸೀಲ್ ಡೌನ್ ಮಾಡಲು ಆದೇಶಿಸಲಾಗಿದೆ. ಬಳಿಕ ಸ್ಫೋಟಕ ಅಧಿನಿಯಮ ಮತ್ತು ಸರ್ಕಾರದ ಮಾರ್ಗಸೂಚಿ ಪಾಲನೆ ಬಗ್ಗೆ ಪರಿಶೀಲನೆ ನಡೆಸಿ ಪೆಬ್ರವರಿ 5 ರ ಒಳಗಾಗಿ ಸಮಗ್ರ ವರದಿ ಸಲ್ಲಿಸುವಂತೆ ಆದೇಶದಲ್ಲಿ ತಿಳಿಸಲಾಗಿದೆ.

**ಏನಿದು ಪ್ರಕರಣ:** ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕಿನ ವೇಣೂರು ಬಳಿ ಜನವರಿ 28ರ ಸಂಜೆ 5.30 ಸುಮಾರಿಗೆ ಕುಕ್ಕೇಡಿ ಎಂಬಲ್ಲಿ ಪಟಾಕಿ ತಯಾರಿಕಾ ಘಟಕದಲ್ಲಿ ಭೀಕರ ಸ್ಫೋಟವಾಗಿತ್ತು. ಭಾರೀ ಶಬ್ಧದಿಂದ ಆದ ಸ್ಫೋಟದ ಸದ್ದು ಕೇಳಿ ಅಕ್ಕ ಪಕ್ಕದವರು ಸ್ಥಳಕ್ಕೆ ಬಂದಾಗ ಅಲ್ಲಿ ಇಡೀ ಗೋಡಾನ್ ಬ್ಲಾಸ್ಟ್ ಆಗಿ ಬೆಂಕಿ ಆವರಿಸಿತ್ತು. ಘಟನೆ ವೇಳೆ ಒಂಬತ್ತು ಮಂದಿ ಕೂಲಿ ಕಾರ್ಮಿಕರು ಸ್ಫೋಟಕ ತಯಾರಿಸುತ್ತಿದ್ದರು. ಈ ಪೈಕಿ ಕೇರಳದ ವರ್ಗೀಸ್ (68), ಹಾಸನದ ಚೇತನ್(25) ಕೇರಳದ ಸ್ವಾಮಿ(60) ಮೃತಪಟ್ಟಿದ್ದರು. ಉಳಿದಂತೆ ಹಾಸನದವರಾದ ದಿನೇಶ, ಕಿರಣ, ಅರಸೀಕೆರೆಯ ಕುಮಾರ, ಚಿಕ್ಕಮಾರಹಳ್ಳಿಯ ಕಲ್ಲೇಶ, ಕೇರಳದವರಾದ ಪ್ರೇಮ್, ಕೇಶವ ಗಾಯಗೊಂಡಿದ್ದಾರೆ.

ಕುಚ್ಚೋಡಿ ನಿವಾಸಿ ಬಶೀರ್ ಎಂಬುವರು 2011-12 ರಲ್ಲಿ ಸ್ಫೋಟಕ ತಯಾರಿಕೆಗೆ ಲೈಸೆನ್ಸ್ ಪಡೆದುಕೊಂಡಿದ್ದರು. ಕಳೆದ ಎರಡು ತಿಂಗಳ ಹಿಂದೆ 9 ಜನ ಕಾರ್ಮಿಕರು ಬಂದು ಕೆಲಸ ಮಾಡುತ್ತಿದ್ದರು. ಯಾರನ್ನೂ ಗೋದಾಮಿನ ಹತ್ತಿರ ಬಿಡದೆ, ರೋಡ್ ನಲ್ಲಿ ವಾಚ್ ಮಾಡುತ್ತಾ ಕೆಲಸ ಮಾಡುತ್ತಿದ್ದರು. ಅದರೆ ಇಲ್ಲಿ ಬಾಂಬ್ ತಯಾರು ಮಾಡುತ್ತಿದ್ದರು ಅಂತ ಸ್ಥಳೀಯರು ಅನುಮಾನ ವ್ಯಕ್ತಪಡಿಸಿದ್ದಾರೆ.

ಕಳೆದ ಎರಡು ತಿಂಗಳ ಹಿಂದೆ ಸರಿಯಾಗಿ ಕೆಲಸ ನಡೆಯುತ್ತಿತ್ತು. ಆದರೆ ಎರಡು ತಿಂಗಳಿಂದ ಬೇರೆ ಏನೋ ನಡೆಯುತ್ತಿದೆ. ಇಲ್ಲಿ ರವಿವಾರ ಯಾವುದೋ ಟ್ರಯಲ್ ಬ್ಲಾಸ್ಟ್ ನಡೆದಿದೆ. ಸುತ್ತಾಮುತ್ತಾ ಸಾಕಷ್ಟು ಮನೆಗಳಿಗೆ ಹಾನಿಯಾಗಿದೆ. ಮನೆಯಲ್ಲಿ ಮಕ್ಕಳು ಊಟ ಮಾಡುತ್ತಿಲ್ಲ. ಇನ್ನುಮುಂದೆ ಇಲ್ಲಿ ಪಟಾಕಿ ತಯಾರಿಕೆ ಮಾಡುವುದನ್ನು ನಿಲ್ಲಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಚಿಂತನೆ

ಇದಕ್ಕೆ ಯಾವುದೇ ಹನಿ ಮಾಡದೆ ವಿಧಾನಮಂಡಲ ಸಂಸ್ಥೆ ಸ್ಥಾಪಿಸಲಾಗುವುದು ಎಂದರು.

ಶಾಸಕರು ಎಲ್ಲೋ ಒಂದು ಕಡೆ ಕುಳಿತು ಚರ್ಚೆ ಮಾಡಲು ಆಗಲ್ಲ. ಶಾಸಕರು ಒಂದು ಕುಳಿತು ಚರ್ಚೆಮಾಡಲು ಸಂಸ್ಥೆಯ ಅಗತ್ಯವಿದೆ. ಪಾರ್ಲಿಮೆಂಟ್ ಸದಸ್ಯರಿಗೆ ಕಾನ್ ಸ್ಟಿಟ್ಯೂಷನ್ ಕ್ಲಬ್ ಅಂತಿದೆ. ದೆಹಲಿಯಲ್ಲಿ ಶಾಸಕರಿಗೆ ಕಾನ್ ಸ್ಟಿಟ್ಯೂಷನ್ ಕ್ಲಬ್ ಇದೆ. ಐಎಎಸ್ ಅಧಿಕಾರಿಗಳು, ಸರ್ಕಾರಿ ಅಧಿಕಾರಿಗಳಿಗೂ ಕ್ಲಬ್ ಇದೆ ಎಂದರು.

ಶಾಸಕರು ಚರ್ಚೆಮಾಡಲು ಜಾಗಬೇಕೆನ್ನುವುದು ಬಹುದಿನದ ಬೇಡಿಕೆಯಾಗಿದೆ. ಬಾಲಬ್ರೂಯಿ ಕಟ್ಟಡದ ಬಳಿ ನಿರ್ಮಾಣಕ್ಕೆ ಚಿಂತಿಸಲಾಗಿದೆ. ಒಂದು ಇತಿಹಾಸ ಉಳ್ಳ ಪ್ರಸಿದ್ಧವಾದ ಬಾಲಬ್ರೂಯಿ ಕಟ್ಟಡಕ್ಕೆ ಯಾವುದೇ ಹನಿಯಾಗದಂತೆ ನೋಡಿಕೊಂಡು ಭವನ ನಿರ್ಮಾಣಕ್ಕೆ ಚಿಂತಿಸಲಾಗಿದೆ. ಶಾಸಕರೇ ಮಾಡುವುದಾಗಿ ತೀರ್ಮಾನ ಮಾಡುತ್ತಿದ್ದೇವೆ ಎಂದರು.

ಸಾರ್ವಜನಿಕವಾಗಿ ಅಥವಾ ಹೋಟೆಲ್ ನಲ್ಲಿ ಕುಳಿತುಕೊಂಡು ಚರ್ಚೆ ಮಾಡಲು ಆಗಲ್ಲ. ಹೀಗಾಗಿ ಶಾಸಕರು ಚರ್ಚೆ ಮಾಡಲೆಂದೇ ಈ ಭವನ ನಿರ್ಮಾಣ ಮಾಡಲಾಗುತ್ತಿದ್ದು, ಸಾರ್ವಜನಿಕರಿಗೆ ಇಲ್ಲಿ ಪ್ರವೇಶ ಇರುವುದಿಲ್ಲ. ಹಣ ಎಷ್ಟು ಖರ್ಚು ಆಗುತ್ತೆ ಅಂತ ಗೊತ್ತಿಲ್ಲ. ಈ ಬಗ್ಗೆ ಚರ್ಚೆ ಮಾಡುತ್ತೇವೆ ಎಂದರು.

## ಧರ್ಮೇಂದ್ರ ಪ್ರಧಾನ್

ಇದೀಗ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಪಕ್ಷ ಉನ್ನತ ಶಿಕ್ಷಣದಲ್ಲಿ ಮೀಸಲು ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಹೊಸ ಸುಳ್ಳನ್ನು ಹೇಳುತ್ತಿದೆ. ಆದರೆ ಅವರ ಈ ಸುಳ್ಳು ಸತ್ಯದ ಪರೀಕ್ಷೆಯಲ್ಲೂ ಬಯಲಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿರುಗೇಟು ನೀಡಿದ್ದಾರೆ.

ಕೇಂದ್ರೀಯ ವಿಶ್ವವಿದ್ಯಾನಿಲಯಗಳಲ್ಲಿನ ಮೀಸಲು ಹುದ್ದೆಗಳ ನಿಯಮಿತ ಮೀಸಲಾತಿಗೆ ಅನುಗುಣವಾಗಿ ಮೋದಿ ಸರ್ಕಾರದಲ್ಲಿ ಗರಿಷ್ಠ ಸಂಖ್ಯೆಯ ನೇಮಕಾತಿಗಳನ್ನು ಮಾಡಲಾಗಿದೆ ಎಂಬುದು ಡೇಟಾದಿಂದ ಸ್ಪಷ್ಟವಾಗಿದೆ. 6080 ಹುದ್ದೆಗಳಲ್ಲಿ ನಡೆದ ಒಟ್ಟು ನೇಮಕಾತಿಗಳಲ್ಲಿ ಪರಿಶಿಷ್ಟ ಜಾತಿ (ಖಅ) 14.3%, ಪರಿಶಿಷ್ಟ ಪಂಗಡ (ಖಖ) 7% ಮತ್ತು ಔಃಅ 23.42%. ಇದಲ್ಲದೇ ಈ ನಿಯಮಗಳ ಅಡಿಯಲ್ಲಿ ಉಳಿದ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಮಾಹಿತಿ ನೀಡಿದರು.

ಈ ನೇಮಕಾತಿಗಳಲ್ಲಿ ಎಸ್ ಸಿಗಳು ಕೇವಲ ಶೇ.7.1, ಎಸ್ ಟಿಗಳು ಶೇ.1.6 ಮತ್ತು ಒಬಿಸಿಗಳು ಶೇ.4.5 ಎಂದು ರಾಹುಲ್ ಗಾಂಧಿಯವರು ಮಾಡುತ್ತಿರುವ ಪ್ರಚಾರ ಸಂಪೂರ್ಣ ಸುಳ್ಳು. ಸುಳ್ಳನ್ನು ಹಬ್ಬಿಸಿ ಸಮಾಜವನ್ನು ವಿಭಜಿಸುವ ಮತ್ತು ಅಸ್ಥಿರತೆ ಸೃಷ್ಟಿಸುವ ಹಳೇ ಚಾಳಿ ಕಾಂಗ್ರೆಸ್‌ಗೆ ಇದೆ. ಕಾಂಗ್ರೆಸ್‌ಎಸ್ ಸಿ-ಎಸ್‌ಟಿ-ಒಬಿಸಿ ವಿರೋಧಿ. ಅಧಿಕಾರದಲ್ಲಿದ್ದಾಗ, ಕಾಂಗ್ರೆಸ್ ಯಾವಾಗಲೂ ಸಮಾಜದ ಹಿತಾಸಕ್ತಿಗಳನ್ನು ಬಹಿರಂಗವಾಗಿ ವಿರೋಧಿಸುತ್ತದೆ ಎಂದು ವಾಗ್ದಾಳಿ ನಡೆಸಿದರು

ಈಗ ಮೋದಿ ಸರಕಾರ ಸಮಾಜದ ಸಹಭಾಗಿತ್ವವನ್ನು ಖಾತ್ರಿಪಡಿಸುತ್ತಿರುವಾಗ, ಕಾಂಗ್ರೆಸ್ ಮತ್ತು ಅದರ ನಾಯಕರ ಎಸ್‌ಸಿ-ಎಸ್‌ಟಿ-ಒಬಿಸಿ ವಿರೋಧಿ ಮುಖ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ರಾಹುಲ್ ಗಾಂಧಿ ಅವರು ನೀಡಿರುವ ಅಂಕಿಅಂಶಗಳಿಗೆ ಸಾಕ್ಷ್ಯವನ್ನು ಒದಗಿಸಬೇಕು. ಅಥವಾ ಅವರ ಸುಳ್ಳುಗಳಿಗೆ ಸಾರ್ವಜನಿಕವಾಗಿ ಕ್ಷಮೆಯಾಚಿಸುವಂತೆ ಬಹಿರಂಗ ಸವಾಲು ಹಾಕಿದರು. ಕೇಂದ್ರೀಯ ವಿಶ್ವವಿದ್ಯಾನಿಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಎಸ್‌ಸಿ, ಎಸ್‌ಟಿ, ಒಬಿಸಿಗಳಿಗೆ ಸರಿಯಾದ ಆಧಾರದ ಮೇಲೆ ನೇಮಕಾತಿ ನಡೆಯುತ್ತಿಲ್ಲ ಎಂದು ರಾಹುಲ್ ಗಾಂಧಿ ಎನ್ ಡಿಎ ಸರ್ಕಾರದ ವಿರುದ್ಧ ಆರೋಪಿಸಿದ್ದರು. ಇದಕ್ಕೆ ಇದೀಗ ಖುದ್ದು ಕೇಂದ್ರ ಶಿಕ್ಷಣ ಸಚಿವ ಅಂಕಿ-ಅಂಶಗಳ ಮೂಲಕ ರಾಹುಲ್ ಗಾಂಧಿಗೆ ತಿರುಗೇಟು ನೀಡಿದ್ದಾರೆ.

# ಸಂಕಷ್ಟದ ಸಮಯದಲ್ಲಿ ಸರ್ಕಾರ ರೈತರ ನೆರವಿಗೆ ಧಾವಿಸಲಿ



**ಪಿರಿಯಾಪಟ್ಟಣ:** ಬರದ ಹಿನ್ನೆಲೆಯಲ್ಲಿ ರೈತ ಸಮುದಾಯ ಸಂಕಷ್ಟದ್ದು, ಇಂಥ ರೈತರ ಬದುಕನ್ನು ಹಸನುಗೊಳಿಸುವ ಹಾಗೂ ಸಂಕಷ್ಟದಲ್ಲಿರುವ ರೈತರನ್ನು ಮೇಲಕ್ಕೆತ್ತುವ ಕೆಲಸವನ್ನು ಸರ್ಕಾರಗಳು ತುರ್ತಾಗಿ ಮಾಡಬೇಕಿದೆ ಎಂದು ಭಾರತೀಯ ಕಿಸಾನ್ ಸಂಘದ ಪ್ರಾಂತೀಯ ಸಂಘಟನಾ ಕಾರ್ಯದರ್ಶಿ ನಾರಾಯಣಸ್ವಾಮಿ ತಿಳಿಸಿದರು

ತಾಲೂಕಿನ ಬೆಕ್ಯಾ ಗ್ರಾಮದಲ್ಲಿ ಭಾರತೀಯ ಕಿಸಾನ್ ಸಂಘದ ವತಿಯಿಂದ ಆಯೋಜಿಸಿದ್ದ ಕಿಸಾನ್ ಸಂಘದ ಗ್ರಾಮ ಘಟಕವನ್ನು ಉದ್ಘಾಟಿಸಿ ಮಾತನಾಡಿದರು. ದೇಶದ ಬೆನ್ನೆಲುಬು ಕೃಷಿ, ಕೃಷಿಯ ಬೆನ್ನೆಲುಬು ರೈತ. ರೈತ ಕಷ್ಟಪಟ್ಟು ಬೆಳೆಸಿದ ಬೆಳೆಗಳಿಗೆ ಯೋಗ್ಯ ಬೆಲೆ ದೊರೆಯದೇ ಹೋದಾಗ ರೈತನ ಬೆನ್ನೆಲುಬು ಮುರಿಯುತ್ತದೆ. ಮಣ್ಣು ಮತ್ತು ರೈತ ಆರೋಗ್ಯವಾಗಿದ್ದರೆ ಮಾತ್ರ ಸಮಾಜ ಹಾಗೂ ದೇಶದ ಆರೋಗ್ಯ ಸ್ಥಿರವಾಗಿರುತ್ತದೆ. ಆದರೆ ಇಂದು ಕೃಷಿ ಚಟುವಟಿಕೆಗಳಲ್ಲಿ ರಾಸಾಯನಿಕಗಲ ಬಳಕೆ ಹೆಚ್ಚಾಗಿರುವುದರಿಂದ ಮಣ್ಣಿನ ಫಲವತ್ತತೆ ದಿನೇದಿನ ಕ್ಷೀಣಿಸುತ್ತಿದೆ. ನಗರ, ಮಹಾನಗರಗಳಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದ ಕ್ಯಾನ್ಸರ್‌ನಂಥ ಕಾಯಿಲೆ ಇಂದು ಗ್ರಾಮೀಣ ಭಾಗಗಳಿಗೂ ವಿಸ್ತರಿಸುತ್ತಿರುವುದು ಆತಂಕದ ವಿಷಯ ಹಾಗಾಗಿ ರೈತರು ಬೆಳೆದ ಬೆಳೆಗೆ ತಕ್ಕ ಬೆಲೆ ನಿಗದಿಪಡಿಸಬೇಕು, ಬೆಳೆದ ಬೆಳೆಗಳನ್ನು ಕೋಲ್ಡ್ ಸ್ಟೋರೇಜ್ ಮತ್ತು ಉಗ್ರಾಣಗಳಲ್ಲಿ ಶೇಖರಿಸಿ ಬೆಲೆ ಬಂದ ನಂತರ ಮಾರುವಂತಹ ಯೋಜನೆ ತರಬೇಕು, ರೈತರನ್ನು ಮಧ್ಯವರ್ತಿಗಳಿಂದ ತಪ್ಪಿಸಬೇಕು, ಮಾರುಕಟ್ಟೆಯ ವೆಚ್ಚವನ್ನು ತಗ್ಗಿಸಿ ರೈತರ ಆದಾಯವನ್ನು ಹೆಚ್ಚಿಸಬೇಕು, ಕೃಷಿಯಲ್ಲಿ ಸಂಶೋಧನೆ ಮತ್ತು ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ರೈತರಿಗೆ ಸರ್ಕಾರದಿಂದ ಬೆಂಬಲ ನೀಡಬೇಕು ಎಂದರು.

ಕಷ್ಟಪಡುತ್ತಿರುವ ರೈತರಿಗೆ ಬ್ಯಾಂಕುಗಳಿಂದ ಅತೀ ಕಡಿಮೆ ಬಡ್ಡಿದರದಲ್ಲಿ ಅಥವಾ ಶೂನ್ಯ ಬಡ್ಡಿದರದಲ್ಲಿ ಸಾಲ ಸೌಲಭ್ಯ ದೊರೆಯಬೇಕು, ರೈತರು ಬೆಳೆದ ಹಾಗೂ ರೈತರೇ ನೇರವಾಗಿ ಉತ್ಪನ್ನಗಳನ್ನು ಮಾರುಕಟ್ಟೆಗೆ ತಂದಾಗ ಚೌಕಾಸಿ ಮಾಡಿ ಕೊಂಡುಕೊಳ್ಳುವ ಮನಸ್ಥಿತಿ ಜನರಲ್ಲಿ ಬದಲಾಗಬೇಕು, ಈ ಎಲ್ಲಾ ಅಂಶಗಳನ್ನು ಮನದಲ್ಲಿಟ್ಟುಕೊಂಡು ಸರ್ಕಾರಗಳು ರೈತನಿಗೆ ಬೆಂಬಲ ನೀಡಿ ರೈತರನ್ನು ಮೇಲೇತ್ತುವ ಕಾರ್ಯ ಮಾಡಬೇಕಿದೆ ಎಂದರು.

ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಂಡೆತ್ತೂರು ರವಿ ಮಾತನಾಡಿ ನಮ್ಮ ರೈತರು ಮಳೆಯೊಂದಿಗೆ ಚಲ್ಲಾಟವಾಡುವುದು ಅನಿವಾರ್ಯವಾಗಿದ್ದು, ಮಳೆ ಬಂದರೆ ಮಾತ್ರ ಬೆಳೆ ಇಲ್ಲದಿದ್ದರೆ ಆತನ ಬದುಕೇ ದುಸ್ತರವಾಗುತ್ತಿದೆ ಆದ್ದರಿಂದ ಸರ್ಕಾರ ರೈತರಿಗೆ ಉತ್ತಮ ಗುಣಮಟ್ಟದ, ಅಗತ್ಯಕ್ಕನುಗುಣವಾಗಿ ವಿದ್ಯುತ್ ಪೂರೈಕೆ ಮಾಡಬೇಕಿದೆ ಆಗ ಮಾತ್ರ ಆತ ಸಮೃದ್ಧವಾದ ಬೆಳೆ ಬೆಳೆಯಲು ಸಾಧ್ಯ, ಇಲ್ಲದಿದ್ದರೆ ಬರದಂತಹ ಪ್ರಾಕೃತಿಕ ವಿಕೋಪಗಳಿಗೆ ಆತ ಬಲಿಯಾಗಬೇಕಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಘಟಕದ ಅಧ್ಯಕ್ಷ ಚಂದ್ರೇಗೌಡ ಮಾತನಾಡಿ ರಾಷ್ಟ್ರದ ಪ್ರತೀ ನಾಯಕನಿಗೆ ಸಿಗುವ ಗೌರವ ಮತ್ತು ಪ್ರಾತಿನಿಧ್ಯ ರೈತನಿಗೂ ದೊರೆಯುವಂತಹ ವಾತಾವರಣ ಸೃಷ್ಟಿಯಾಗಬೇಕು, ರೈತನೇ ದೇಶದ ಬೆನ್ನೆಲುಬು ಎಂಬುದು ಬರೀ ಭಾಷಣದಲ್ಲಿರದೆ ಪ್ರತೀ ಮನಮನಗಳ ಭಾವದಲ್ಲಿ, ಪ್ರತೀ ನಾಲಿಗೆಯ ತುದಿಯಲ್ಲಿರಲಿ ಎಂದರು. ಗ್ರಾಮ ಘಟಕದ ಅಧ್ಯಕ್ಷ ಬಿ.ಟಿ. ನಾಗರಾಜು ಮಾತನಾಡಿ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಬೇಕಾದ ಸವಲತ್ತುಗಳನ್ನು ಕೊಡುವುದು ಸರ್ಕಾರದ ಕರ್ತವ್ಯ ಆದರೆ ಸರ್ಕಾರ ಆ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಕೆಲಸ ಮಾಡುತ್ತಿದೆ ಕಾರ್ಖಾನೆಗಳಲ್ಲಿ ಉತ್ಪಾದಿಸಿದ ವಸ್ತುಗಳಿಗೆ ಒಂದು ಬೆಲೆ ನಿಗದಿ ಮಾಡಿರುತ್ತಾರೆ ಆದರೆ ರೈತರು ಬೆಳೆದ ಬೆಳೆಗೆ ಯಾವುದೆ ಬೆಲೆ ನಿಗದಿ ಆಗಿರುವುದಿಲ್ಲ. ರೈತರ ಬದುಕು ಬದಲಾಗಬೇಕಾದರೆ ಅವರು ಬೆಳೆದ ಬೆಳೆಗೆ ಸೂಕ್ತ ಬೆಲೆ ಸಿಗಬೇಕು ಇದರ ಬಗ್ಗೆ ಸರ್ಕಾರ ಗಮನ ಹರಿಸಬೇಕು ಎಂದರು.

ಭಾರತೀಯ ಕಿಸಾನ್ ಸಂಘದ ತಾಲೂಕು ಕಾರ್ಯದರ್ಶಿ ಗಣೇಶ್, ಸಂಗರಶೆಟ್ಟಹಳ್ಳಿ ಲೋಕೇಶ್, ಪುರುಷೋತ್ತಮ್, ಕಾರ್ಯದರ್ಶಿ ಮಂಜುನಾಥ್, ಪದಾಧಿಕಾರಿಗಳಾದ ಉಮೇಶ್, ಗೋವಿಂದೇಗೌಡ, ಮಾಗಳಿ ಶಿವಪ್ಪ,ರಘು,ರಾಜು, ಮಹದೇವ್ ,ಸೋಮ ಶೇಖರ್, ಪ್ರಸನ್ನ, ಲೋಕೇಶ್ ಉಪಸ್ಥಿತರಿದ್ದರು.

# ರೈತರನ್ನು ಸ್ವಾವಲಂಬಿಯಾಗಿ ಮಾಡುವುದೇ ಸರ್ಕಾರದ ಗುರಿ



**ಪಿರಿಯಾಪಟ್ಟಣ:** ರೈತರಿಗೆ ಯಂತ್ರಗಳನ್ನು ಸಹಾಯ ಧನದಡಿಯಲ್ಲಿ ನೀಡಿ ಅವರನ್ನು ಸ್ವಾಲಂಬಿಗಳಾಗಿಸುತ್ತಿರುವುದು ಸರ್ಕಾರದ ಮುಖ್ಯ ಉದ್ದೇಶ ಎಂದು ಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಖಾತೆ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದರು.

ತಾಲೂಕಿನ ಕೊಪ್ಪ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ಏರ್ಪಡಿಸಲಾಗಿದ್ದ ರೈತರಿಗೆ ವಿವಿಧ ಸವಲತ್ತುಗಳ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ರಾಜ್ಯ ಸರ್ಕಾರ ರೈತರ ಬದುಕು ಹಸನು ಮಾಡಲು ಸಾಕಷ್ಟು ಕಾರ್ಯಕ್ರಮಗಳನ್ನು ಆಯೋಜಿಸಿದ್ದು. ನೀರಾವರಿ ಯೋಜನೆಗಳ ಮೂಲಕ ರೈತರ ಜಮೀನುಗಳಿಗೆ ಕೆರೆಕಟ್ಟೆಗಳಿಗೆ ನೀರು ಒದಗಿಸುವುದಲ್ಲದೆ ವ್ಯವಸಾಯದಲ್ಲಿ ಕೃಷಿ ಕಾರ್ಮಿಕರ ಅವಲಂಬನೆ ತಪ್ಪಿಸುವ ಸಲುವಾಗಿ ರೈತರಿಗೆ ಸಹಾಯಧನದಡಿಯಲ್ಲಿ ಕೃಷಿ ಯಂತ್ರಗಳನ್ನ ನೀಡಲಾಗುತ್ತಿದೆ. ಇದರ ಸದುಪಯೋಗವನ್ನು ಪ್ರತಿಯೊಬ್ಬ ರೈತರು ಪಡೆದುಕೊಳ್ಳಬೇಕು ಇದು ಒಂದು ಉತ್ತಮ ಕಾರ್ಯವಾಗಿದ್ದು ಕೃಷಿ ಇಲಾಖೆಯ ವತಿಯಿಂದ ನೀಡಲಾಗುವ ಸವಲತ್ತುಗಳನ್ನು ಬಳಸಿಕೊಂಡು ರೈತರು ಸ್ವಾವಲಂಬಿಗಳಾಗುವ ಮತ್ತು ಕೃಷಿಯಲ್ಲಿ ಉತ್ತಮ ಸಾಧನೆ ಮಾಡುವತ್ತ ಗಮನ ಕೇಂದ್ರೀಕರಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಚಂದ್ರಶೇಖರ್ ಮುಖ್ಯಮಂತ್ರಿಗಳು ಮತ್ತು ಸಚಿವರಿಗೆ ಮಾಹಿತಿ ನೀಡಿ ಮಾತನಾಡಿ ಉತ್ಪಾದನಾ ವೆಚ್ಚ ಕಡಿಮೆ ಮಾಡುವುದು, ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವು ಮಾಡುವ ಉದ್ದೇಶದಿಂದ ಈ ಯೋಜನೆ ಜಾರಿಯಾಗಿದ್ದು, ರೈತರು ಇದರೊಂದಿಗೆ ಉತ್ಪಾದಕತೆ ಹೆಚ್ಚಿಸುವುದು ಮತ್ತು ಕೃಷಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವುದು ಕೃಷಿ ಯಾಂತ್ರೀಕರಣ ಯೋಜನೆಯ ಮುಖ್ಯ ಉದ್ದೇಶಗಳಾಗಿದೆ . ಕೃಷಿ ಇಲಾಖೆಯಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲಿನವರೆಗೂ ವಿವಿಧ ಕೃಷಿ ಯಂತ್ರೋಪಕರಣಗಳನ್ನು ಸಹಾಯಧನದಡಿ ಒದಗಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

## ರೈತರಿಂದ ಮಾಹಿತಿ

**ಈ ಸಂದರ್ಭದಲ್ಲಿ ರೈತರಿಗೆ ಸವಲತ್ತುಗಳನ್ನು ವಿತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೃಷಿ ಯಂತ್ರಗಳ ಬಳಕೆ ಮತ್ತು ಅವುಗಳ ಉಪಯೋಗದ ಬಗ್ಗೆ ರೈತರಿಂದ ಮಾಹಿತಿ ಪಡೆದುಕೊಂಡರು. ಈ ಸಂದರ್ಭದಲ್ಲಿ ಸುಮಾರು 200 ರೈತ ಫಲಾನುಭವಿಗಳಿಗೆ ತುಂತುರು ನೀರಾವರಿ ಘಟಕಗಳು, ಪವರ್ ಟಿಲ್ಲರ್, ರೋಟರಿ ಟಿಲ್ಲರ್ , ಮೇವು ಕತ್ತರಿಸುವ ಯಂತ್ರ, ರೋಟೋವೇಟರ್ , ಟಾರ್ಪಾಲಿನ್ ಗಳನ್ನು ವಿತರಿಸಲಾಯಿತು. ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ. ವೆಂಕಟೇಶ್, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಚ್ .ಸಿ.ಮಹದೇವಪ್ಪ, ಶಾಸಕರಾದ ಮಂತರ್ ಗೌಡ, ಹರೀಶ್ ಗೌಡ, ಡಿ.ರವಿಶಂಕರ್, ಆಶ್ರಯ ಸಮಿತಿಯ ಅಧ್ಯಕ್ಷ ನಿತಿನ್ ವೆಂಕಟೇಶ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾಕ್ಟರ್ ಬಿ. ಜೆ ವಿಜಯ್ ಕುಮಾರ್, ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಾನ್ ಬಾಬು ಡಿ.ಟಿ ಸ್ವಾಮಿ, ಕಾಂಗ್ರೆಸ್ ಮುಖಂಡರಾದ ಬಿ.ಜೆ ಬಸವರಾಜು, ತಾಲೂಕು ಕೃಷಿ ಸಹಾಯಕ ನಿರ್ದೇಶಕಕ ಪ್ರಸಾದ್, ತಹಸೀಲ್ದಾರ್ ಕುಂಞ ಅಹಮ್ಮದ್ ಹಾಜರಿದ್ದರು.**

### 119ನೇ ರಾಷ್ಟ್ರಕವಿ ಕುವೆಂಪು ಜನ್ಮ-ದಿನೋತ್ಸವ

# ಚಿತ್ರ ಕಲಾ ವಿಜೇತರಿಗೆ ಪ್ರಶಸ್ತಿ



**ಮೈಸೂರು:** 119ನೇ ರಾಷ್ಟ್ರಕವಿ ಕುವೆಂಪು ಜನ್ಮ-ದಿನೋತ್ಸವ ಮತ್ತು ಚಿತ್ರ ಕಲಾ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆರ್ಟ್-ಆಲ್ಟರ್ನೇಟಿವ್ ಎಂಬ ಪ್ರತಿಷ್ಠಿತ ಚಿತ್ರ-ಕಲಾ ಸಂಸ್ಥೆ (ವಿ.ವಿ.ಮೊಹಲ್ಲಾ) ಯಲ್ಲಿ ಅತ್ಯಂತ ವಿಶಿಷ್ಟತೆಯಿಂದ ಯಶಸ್ವಿಯಾಗಿ ನಡೆಯಿತು.

ಈ ಸಮಾರಂಭವನ್ನು ರಾಷ್ಟ್ರಕವಿ ಕುವೆಂಪು ರವರ ಸುಪುತ್ರಿ, ಸಾಹಿತಿಗಳು ಮತ್ತು ಲೇಖಕರು ಡಾ.ತಾರಿಣಿ ಚಿದಾನಂದ್ ಉದ್ಘಾಟಿಸಿದ್ದು, ಮುಖ್ಯ ಅತಿಥಿಗಳಾಗಿ, ಕುವೆಂಪು ವಿಶ್ವ ವಿದ್ಯಾನಿಲಯ ವಿಶ್ರಾಂತ ಕುಲಪತಿ ಡಾ. ಕೆ ಚಿದಾನಂದ ಗೌಡ ಹಾಗು ಮೈಸೂರು ಗ್ರಾಹಕರ ಪರಿಷತ್‌ನ ಸಂಸ್ಥಾಪಕ ಸಂಚಾಲಕರು ಡಾ. ಭಾಮೀ ವಿ. ಶೆಣೈ, ಮತ್ತು ಹಿರಿಯ ವಿಜ್ಞಾನಿ ಡಾ.ಜಿ.ಪಾಂಡುರಂಗ ಮೂರ್ತಿ ಕುವೆಂಪು ಕುರಿತು ವಿಶಿಷ್ಟ ಪ್ರವಚನ ನೀಡಲು ವಿಶೇಷ ಅತಿಥಿಗಳಾಗಿ ಸಮಾರಂಭದಲ್ಲಿದ್ದರು.

ಕಾರ್ಯಕ್ರಮವನ್ನು ಉಧ್ಘಾಟಿಸಿದ ಕುವೆಂಪುರವರ ಸುಪುತ್ರಿ ಡಾ.ತಾರಿಣಿ ಚಿದಾನಂದ್, ಕವಿ ಮತುತ್ತು ಕಲೆಯ ನಡುವಿನ ಭಾಂದವ್ಯ ಅಪರಿಮಿತವಾದದ್ದು; ಪರಿಸರವನ್ನು ನಂಬಿ ಬೆಳೆದರೆ ಮಾತ್ರವೇ ಮಾನವನ ಪಾರಂಪರಿಕ ನೆಲೆ ಸಾದ್ಯ ಎಂಬ ಕುವೆಂಪುರವರ ಸಾರ್ವಕಾಲಿಕ ಅಭಿಮತವನ್ನು ಎಂದು ನಿರ್ದಿಷ್ಟ ಉದಾಹರಣೆಯೊಂದಿಗೆ ವಿವರಿಸಿದರು.

ಜೊತೆಗೆ, ಬಾಲ್ಯದಲ್ಲಿ ತಾವು ತಂದೆಯ ವಿಚಾರ-ಧಾರೆಗಳಿಂದ ಪ್ರೇರೇಪಿತವಾದ ಸನ್ನಿವೇಷಗಳನ್ನು ಅತ್ಯಂತ ಪ್ರಖರವಾಗಿ ಹೇಳುತ್ತಾ.. ಮುಂದಿನ ಜನಾಂಗ ಸಾಹಿತ್ಯದ ಅಭಿರುಚಿಯನ್ನು ಬೆಳೆಸಿಕೊಳ್ಳುವ ಮೂಲಕ ಬದುಕಿನಲ್ಲಿ ವ್ಯಕ್ತಿತ್ವದ ಪರಿವರ್ತನೆ ಹೊಂದಬಹುದು ಹಾಗು ಅದು ಜೀವನದ ಪರಿಪೂರ್ಣತೆಗೆ ಸಾದ್ಯವಾಗುತ್ತದೆ ಕೂಡ ಎಂದು ಕರೆಕೊಟ್ಟರು.

ಸಮಾರಂಭದಲ್ಲಿ ಹಿರಿಯ ವಿಜ್ಞಾನಿ ಡಾ.ಜಿ.ಪಾಂಡುರಂಗ ಮೂರ್ತಿಯವರು ಕುವೆಂಪು ಜೀವನ ಚರಿತ್ರೆ: ಸಂಕ್ಷಿಪ್ತ ನೋಟದ ಕುರಿತು ಪ್ರವಚನ ನೀಡಿ ರಾಷ್ಟ್ರಕವಿ ಕುವೆಂಪು ವೈಚಾರಿಕತೆಯ ಬೀಜ ಬಿತ್ತಿ ವಿಶ್ವಮಾನವ ಸಂದೇಶ ಸಾರಿದ್ದಾರೆ ಎಂದು ಹೇಳಿದರು.

ಕುವೆಂಪು ಅವರು ಬರೆಯದ ಸಾಹಿತ್ಯದ ಪ್ರಾಕಾರವಿಲ್ಲ, ಕನ್ನಡ ಸಾಹಿತ್ಯಕ್ಕೆ ಮೊದಲ ಜ್ಞಾನಪೀಠ ಪ್ರಶಸ್ತಿ ತಂದುಕೊಡುವ ಮೂಲಕ ಕನ್ನಡವನ್ನು ಸಾಹಿತ್ಯ ಲೋಕದಲ್ಲಿ ಶ್ರೀಮಂತಗೊಳಿಸಿದರು.

ನಂತರದಲ್ಲಿ ವಿಶ್ರಾಂತ ಕುಲಪತಿಗಳಾದ ಡಾ. ಕೆ. ಚಿದಾನಂದ ಗೌಡರು ಮಾತನಾಡುತ್ತಾ ..ಕುವೆಂಪು ರವರ ವಿಶ್ವಮಾನವ ಸಂದೇಶ ಸಾರ್ವಕಾಲಿಕ ಮತ್ತು ಪ್ರಾಪಂಚಿಕವಾದದ್ದು; ಜೀವನದಲ್ಲಿ ಯಾವುದೇ ಸಾಧನೆ ಮಾಡಿದರೂ ಅದನ್ನು ಮಾನವ ಕಲ್ಯಾಣಕ್ಕೆ ವಿನಿಯೋಗಿಸುವ ಪ್ರಾಮಾಣಿಕತೆಯೇ ಮಾನವ-ವಿಶ್ವಮಾನವನಾಗುವ ಪ್ರಾಕಾರ ಎಂದು ವ್ಯಾಖ್ಯಾನ ನೀಡಿದರು.

ತದನಂತರ, ಮೈಸೂರು ಗ್ರಾಹಕರ ಪರಿಷತ್‌ನ ಸಂಸ್ಥಾಪಕ ಸಂಚಾಲಕರಾದ ಡಾ. ಭಾಮೀ ವಿ. ಶೆಣೈ ರವರು ತಮ್ಮಭಾಷಣದಲ್ಲಿ ಮಕ್ಕಳಿಗೆ ಮೊಬೈಲ್ ಕೊಡುವುದನ್ನು ನಿರ್ಬಂದಿಸಿ, ಅದರಲ್ಲೂ ವಿದ್ಯಾರ್ಥಿಗಳು ಮೊಬೈಲ್‌ಗೆ ದಾಸರಾಗಿ ಅದರಿಂದ ಸದುಪಯೋಗ ಪಡೆಯುವುದಕ್ಕಿಂತ, ಅಡ್ಡದಾರಿ ಹಿಡಿಯುವುದೇ ಹೆಚ್ಚಾಗಿದೆ, ಜೊತೆಗೆ ಅವರ ಆರೋಗ್ಯದ ಮೇಲೆ ಗಂಬೀರ ಪರಿಣಾಮ ಬೀರಿ ಮಾನಸೀಕ ಸ್ಥಿಮಿತ ಕಳೆದುಕೊಳ್ಳುವ ಸಾದ್ಯತೆಯಿರುತ್ತದೆ ಮುಂದೆ ಇದು ಸಮಾಜದ ಒಟ್ಟು ಪ್ರಗತಿಯ ಮೇಲೆ ಋಣಾತ್ಮಕ ಪರಿಣಾಮ ಉಂಟಾಗುತ್ತದೆ ಎಂದು ಎಚ್ಚರಿಸಿದರು. ಅಲ್ಲದೇ, ಕುವೆಂಪು ರವರ ಆದರ್ಶ ಮುಂದಿನ ಜನಾಂಗಕ್ಕೆ ಪರಿಚಯಿಸುವ ನಿಟ್ಟಿನಲ್ಲಿ ಈ ಸಮಾರಂಭದಲ್ಲಿ ಡಾ.ಜಿ.ಪಾಂಡುರಂಗ ಮೂರ್ತಿಯವರು ಕುವೆಂಪು ಜೀವನಗಾಥೆ ಕುರಿತು ಚಿತ್ರ-ಪ್ರದರ್ಶನದ ಮೂಲಕ ನೀಡಿದ ವಿಶೇಷ ಪ್ರವಚನ ಅತ್ಯಂತ ಪರಿಣಾಮಕಾರಿಯಾಗಿದೆ ಎಂದು ಬಣ್ಣಿಸಿದರು.

ವಿಶ್ವಮಾನವ ಕುವೆಂಪು ಲಯನ್ಸ್ ಮೈಸೂರು ಸಂಸ್ಥೆಯ ಕರ?ಯದರ್ಶಿಗಳಾದ ಡಿ.ವಿ.ದಯಾನಂದ ಸಾಗರ್ ರವರು ಸಮಾರಂಭದ ಅದ್ಯಕ್ಷತೆ ವಹಿಸಿದ್ದು, ತಮ್ಮ ಭಾಷಣದಲ್ಲಿ, ಕುವೆಂಪು ರವರ ಬದುಕು ಮತ್ತು ಅವರ ಕೊಡುಗೆಗಳು ಮುಂದಿನ ಜನಾಂಗಕ್ಕೆ ತಲುಪಿಸುವ ನಿಟ್ಟಿನಲ್ಲಿ ನಾವು ನಿರಂತರ ಸಾಗಬೇಕಾಗಿದೆ ಹಾಗು ಇದು ನಮ್ಮ ಕರ್ತವ್ಯ ಕೂಡ ಎಂದು ಹೇಳಿ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು.

ಸಮಾರಂಭವನ್ನು ಸಹ-ಆಯೋಜನೆ ಮಾಡಿದ್ದ ಆರ್ಟ್-ಆಲ್ರ?ನೇಟಿವ್ ಎಂಬ ಚಿತ್ರ-ಕಲಾ ಸಂಸ್ಥೆಯ ಕಲಾವಿದರು ಮತ್ತು ಮುಖ್ಯ ತರಬೇತುದಾರರಾದ ಅಜ್ಮೆ ಮೊಹಮ್ಮದ್ ಖಾನ್ ತಮ್ಮ ಸಂಸ್ಥೆಯು ಕಳೆದ 15 ವರ್ಷದಿಂದ ಚಿತ್ರ-ಕಲೆಯ ಹಲವು ಮಜಲುಗಳಲ್ಲಿ ಸೇವೆ ಸಲ್ಲಿಸುತ್ತಿದ್ದು, ಹಲವಾರು ವಿದ್ಯಾರ್ಥಿಗಳು ರಾಷ್ಟ್ರೀಯ ಮತ್ತ ಅಂತರಾಷ್ಟ್ರೀಯ ವೇದಿಕೆಗಳಲ್ಲಿ ಬಾಗವಹಿಸಿ ಕೀರ್ತಿ ತಂದಿರುತ್ತಾರೆ. ರಾಷ್ಟ್ರಕವಿ ಕುವೆಂಪು ರವರ ವಿಶ್ವಮಾನವ ಸಂದೇಶವೇ ನಮಗೆಲ್ಲರಿಗೂ ಮಾದರಿ ಎಂದು ಹೇಳಿ ಕಾರ್ಯಕ್ರಮದ ವಂದನಾರ್ಪಣೆಯನ್ನು ನಡೆಸಿದರು. ಕು.ರಕ್ಷಾ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಸದರಿ ಕಾರ್ಯಕ್ರಮದಲ್ಲಿ, ಚಿತ್ರ ಕಲಾ ಸ್ಪರ್ದೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ಥಿ ಪತ್ರ ಹಾಗು ಸ್ಮರಣಿಕೆಗಳನ್ನು ನೀಡಿ ಉತ್ತೇಜಿಸಲಾಯಿತು ಹಾಗು ಎನ್.ಸಿ.ಸಿ-2023 ರ ರಾಷ್ಟ್ರೀಯ ಯುವ ಸೇನಾಧಳದ ರಕ್ಷಾ ಮಂತ್ರಿ ಪದಕ ವಿಜೇತೆ ಕು.ಎಂ. ಕಲ್ಪನಾ ಕುಟ್ಟಪ್ಪ ಸಾಧಕಿಗೆ ಮುಖ್ಯ ಅತಿಥಿಗಳು ಸ್ಮರಣಿಕೆ ನೀಡಿ ಗೌರವಿಸಿದರು.

# ಕನಕ ನೌಕರರ ಸಂಘದಿಂದ ಕ್ಯಾಲೆಂಡರ್ ಬಿಡುಗಡೆ

**ಪಿರಿಯಾಪಟ್ಟಣ :** ಸಂಘಟನೆಗಳು ಸೇವಾ ಮನೋಭಾವನೆಯನ್ನು ಮೈಗೂಡಿಸಿಕೊಂಡಾಗ ಮಾತ್ರ ಸಾರ್ಥಕತೆ ಕಾಣಲು ಸಾಧ್ಯವೆಂದು ತಾಲೂಕು ಕುರುಬರ ಸಂಘದ ಅಧ್ಯಕ್ಷ ಹೆಚ್.ಡಿ. ಗಣೇಶ್ ತಿಳಿಸಿದರು

ಪಟ್ಟಣದ ಕನಕ ಭವನದಲ್ಲಿ ನಡೆದ ಕನಕ ನೌಕರರ ಸಂಘದ ವತಿಯಿಂದ 2024ನೇ ವರ್ಷದ ಕ್ಯಾಲೆಂಡರ್ ಬಿಡುಗಡೆ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು ಸಮಾಜದ ಒಳಿತಿಗಾಗಿ ಸಂಘಟನೆಗಳು ಕೆಲಸವನ್ನು ಮಾಡಿ ಸಾರ್ಥಕತೆಯನ್ನು ಮೆರೆಯಬೇಕು ನೌಕರರು ತಮ್ಮ ಸವಲತ್ತುಗಳನ್ನು ಪಡೆದುಕೊಳ್ಳುವುದರ ಜೊತೆಗೆ ಆರ್ಥಿಕವಾಗಿ ಶೈಕ್ಷಣಿಕವಾಗಿ ಹಿಂದುಳಿದ ಸಮುದಾಯದ ಮಕ್ಕಳಿಗೆ ವಿದ್ಯಾರ್ಥಿಗಳಿಗೆ ಸಹಾಯ ಮಾಡಿ ಸಾರ್ಥಕತೆ ಮೆರೆಯಬೇಕು ಎಂದು ಸಲಹೆ ನೀಡಿದರು

ಕನಕ ನೌಕರರ ಸಂಘದ ಅಧ್ಯಕ್ಷ ಮಾತನಾಡಿ ತಾಲೂಕಿನಲ್ಲಿ ಸಮಾಜಮುಖಿ ಕೆಲಸಗಳನ್ನು ಮಾಡಲು ಕನಕ ನೌಕರರ ಸಂಘವನ್ನು ಸ್ಥಾಪಿಸಲಾಗಿದೆ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಕೆಲಸವನ್ನು ನಮ್ಮ ಸಂಘ ಮಾಡುತ್ತಿದೆ ನೌಕರರ ಸಂಕಷ್ಟದ ಸಮಯದಲ್ಲೇ ಅವರ ಜೊತೆ ಬೆನ್ನೆಲುಬಾಗಿ ನಿಲ್ಲುವ ಪ್ರಾಮಾಣಿಕ ಕೆಲಸವನ್ನು ಸಂಘ ಮಾಡುತ್ತಿದೆ ಹಾಗೂ ತಾಲೂಕಿನ ನೌಕರರ ಹಿತವನ್ನು ಕಾಪಾಡುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸರ್ಕಾರಿ ಕೆಲಸದಿಂದ ನಿವೃತ್ತ ನೌಕರರನ್ನು ಸನ್ಮಾನಿಸಲಾಯಿತು

ತಾಲೂಕು ಕುರುಬರ ಸಂಘದ ಉಪಾಧ್ಯಕ್ಷ ರಾಜೇಗೌಡ,ಗೌರವಾಧ್ಯಕ್ಷ ಶಿವಶಂಕರ್, ಕನ್ನಡ ಪ್ರಾಧ್ಯಾಪಕ ನಂಜುಂಡಸ್ವಾಮಿ, ದೀಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಡಾ.ಲೋಹಿತ್, ಕನಕ ಅಭಿವೃದ್ಧಿ ಸಹಕಾರ ಸಂಘದ ಅಧ್ಯಕ್ಷ ಡಿ.ಎ. ನಾಗೇಂದ್ರ, ತಾಲೂಕು ಕುರುಬರ ಸಂಘದ ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್, ಕಾರ್ಯದರ್ಶಿ ಮಧುರೇಶ್, ಉಪಾಧ್ಯಕ್ಷ ಅಣ್ಣೇಗೌಡ, ಜಯಲಕ್ಷ್ಮಿ, ಕಾನೂನು ಸಲಹೆಗಾರ ಬಿ.ಜೆ ಮಾದೇಗೌಡ, ಖಜಾಂಚಿ ಹೇಮಂತ್ ಕುಮಾರ್, ಸೇರಿದಂತೆ ಇತರರು ಇದ್ದರು.



# ಬದುಕಿನಲ್ಲಿ ಶಿಕ್ಷಕರ ಹಾಗೂ ವೈದ್ಯರ ಪಾತ್ರ ದೊಡ್ಡದು

**ಮೈಸೂರು:** ಶಿಕ್ಷಕರು ಜೀವನ ಕಟ್ಟಿಕೊಟ್ಟರೇ ಆ ಜೀವನವನ್ನು ಆರೋಗ್ಯಕರವಾಗಿಡಲು ನಿರಂತರವಾಗಿ ಶ್ರಮಿಸುತ್ತಾರೆ. ಹಾಗಾಗಿ ಇಬ್ಬರ ಪಾತ್ರ ಬಹಳ ದೊಡ್ಡದು ಎಂದು ಶಿಕ್ಷಣ ತಜ್ಞರಾದ ಉಷಾ ರಘುಪತಿ ಅವರು ತಿಳಿಸಿದರು. ಇಂದು EcosySTEM ಟೀಚರ್ ಆಫ್ ದಿ ಇಯರ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು. ಶಿಕ್ಷಕರೊಂದಿಗೆ ಮಕ್ಕಳು 10 ವರ್ಷ ತಮ್ಮ ಜೀವನವನ್ನು ಶಾಲೆಯಲ್ಲಿ ಕಲಿಯುತ್ತಾರೆ. 21 ನೇ ಶತಮಾನದ ಕೌಶಲ್ಯದ ಕುರಿತು ಇಥಿಂಥಿಖಖಿಇಒ ಅತ್ಯುತ್ತಮವಾಗಿ ಶಿಕ್ಷಕರಿಗೆ ಬೇಕಾದ ಕೌಶಲ್ಯವನ್ನು ನೀಡಿ ಆ ಮೂಲಕ ವಿದ್ಯಾರ್ಥಿಗಳನ್ನು ತಯಾರು ಮಾಡುತ್ತಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಈ ವರ್ಷದ ಯುವ ಚಿಂತನಾ ಫೌಂಡೇಶನ್ ಹಾಗೂ ಕ್ವೆಸ್ಟ್ ಅಲೈಯನ್ಸ್ ಸಹಯೋಗದೊಂದಿಗೆ ಮೈಸೂರು ಜಿಲ್ಲೆಯ ಎಂಟು ಖಖಿಇಒ ಶಿಕ್ಷಕರಿಗೆ 2023-2024 ರ ಇಥಿಂಥಿಖಖಿಇಒ ಟೀಚರ್ ಆಫ್ ದಿ ಇಯರ್ ಪ್ರಶಸ್ತಿಯನ್ನು ಇಂದು ಮೈಸೂರಿನ ರೋಟರಿ ಭವನದಲ್ಲಿ ನೀಡಲಾಯಿತು. ತೀರ್ಪುಗಾರರು ನಾಮನಿರ್ದೇಶನ ಮಾಡಿದ ಮತ್ತು ಶಾಲಾ ತರಬೇತುದಾರರಿಂದ ನಾಮನಿರ್ದೇಶನಗೊಂಡ ಮೂರು ವಿಶೇಷ ಖಖಿಇಒ ಶಿಕ್ಷಕರು, ಖಖಿಇಒ ಚಾಂಪಿಯನ್ ಗಳಾಗಿ ಶ್ರೇಷ್ಠತೆಯನ್ನು ಪ್ರದರ್ಶಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಡಾ.ಜೆ.ವಿ ನಂದನ ಕುಮಾರ್, ಹೆಚ್ಚುವರಿ ನಿರ್ದೇಶಕರು (ನಿವೃತ್ತ )ಗಣಿ ಇಲಾಖೆ, ಉಔಐ, ಹಾಗೂ ಮುಖ್ಯ ಅತಿಥಿಗಳಾಗಿ ಶಿಕ್ಷಣ ತಜ್ಞರಾದ ಬೆಳ್ಳ ಶೆಟ್ಟಿ ಹಾಗೂ ಕ್ವೆಸ್ಟ್ ಅಲ್ಲನ್ಸ್ ನ ಅನಿತಾ ಮೀರಿ ಹಾಗೂ ಯುವ ಚಿಂತನ ಫೌಂಡೇಶನ್ ನ ಸುಷ್ಮಾ ಗೌಡ ಈ ಸಂದರ್ಭದಲ್ಲಿ ಹಾಜರಿದ್ದರು. ಪ್ರಶಸ್ತಿ ಪ್ರದಾನ ನಂತರ ಪ್ರಶಸ್ತಿ ವಿಜೇತರೊಂದಿಗೆ ಸಂವಾದ ನಡೆಯಿತು ಹಾಗೂ ಮಕ್ಕಳು ಶಾಲೆಯಲ್ಲಿ ಮಾಡಿದ್ದ ವಿಜ್ಞಾನದ ಮಾಡೆಲ್ ಗಳನ್ನು ಪ್ರದರ್ಶಿಸಿದರು.



# ರಾಜ್ಯದ 4 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಘೋಷಣೆ

**ಬೆಂಗಳೂರು:** ಭಾರತ ಚುನಾವಣಾ ಆಯೋಗ ರಾಜ್ಯಸಭೆಯ 56 ಸ್ಥಾನಗಳಿಗೆ ಇಂದು ಚುನಾವಣೆಯನ್ನು ಘೋಷಿಸಿದ್ದು, ಅದರಲ್ಲಿ ಕರ್ನಾಟಕ ರಾಜ್ಯದ ನಾಲ್ಕು ಸ್ಥಾನಗಳು ಸಹ ಒಳಗೊಂಡಿವೆ. ರಾಜ್ಯಸಭೆಯ ಈ ನಾಲ್ಕು ಸ್ಥಾನಗಳಿಗೆ ನಡೆಯುವ ಚುನಾವಣೆಯಲ್ಲಿ ರಾಜ್ಯ ವಿಧಾನಸಭೆಯ 224 ಶಾಸಕರು ಮತದಾರರಾಗಿದ್ದು, ಫೆಬ್ರವರಿ 27 ರಂದು ವಿಧಾನಸೌಧದಲ್ಲಿ ಬೆಳಿಗ್ಗೆ 9:00 ರಿಂದ ಸಂಜೆ 4:00 ಗಂಟೆಯವರೆಗೆ ಮತದಾನ ನಡೆಯಲಿದ್ದು, ಅಂದು ಸಂಜೆ 5:00 ಗಂಟೆಗೆ ಅಲ್ಲಿಯೇ ಮತ ಎಣಿಕೆ ಕಾರ್ಯ ಆರಂಭವಾಗಲಿದೆ. ಪ್ರಸ್ತುತ ರಾಜ್ಯದಿಂದ ರಾಜ್ಯಸಭೆಯ ಪ್ರತಿನಿಧಿಗಳಾಗಿರುವ ರಾಜೀವ್ ಚಂದ್ರಶೇಖರ್, ಜಿ.ಸಿ ಚಂದ್ರಶೇಖರ್, ಡಾ.ಎಲ್.ಹನುಮಂತಯ್ಯ ಹಾಗೂ ಸೈಯದ್ ನಾಸಿರ್ ಹುಸೇನ್ ಅವರ ಅಧಿಕಾರ ಅವಧಿ ದಿನಾಂಕ: 02-04-2024 ಕ್ಕೆ ಕೊನೆಗೊಳ್ಳಲಿದ್ದು, ಇವರುಗಳಿಂದ ತೆರವಾಗಲಿರುವ 4 ಸ್ಥಾನಗಳಿಗೆ ಈ ಚುನಾವಣೆ ನಡೆಯಲಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಭಾರತ ಚುನಾವಣಾ ಆಯೋಗ ಘೋಷಿಸಿರುವ ರಾಜ್ಯಸಭೆಯ ಸ್ಥಾನಗಳ ಚುನಾವಣಾ ವೇಳಾಪಟ್ಟಿ ಅಧಿಸೂಚನೆಯ ದಿನಾಂಕ 08 ಫೆಬ್ರವರಿ 2024 (ಗುರುವಾರ), ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ 15 ಫೆಬ್ರವರಿ 2024 (ಗುರುವಾರ), ನಾಮಪತ್ರಗಳ ಪರಿಶೀಲನೆ ದಿನಾಂಕ 16 ಫೆಬ್ರವರಿ2024 (ಶುಕ್ರವಾರ), ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನಾಂಕ 20 ಫೆಬ್ರವರಿ 2024 (ಮಂಗಳವಾರ), ಮತದಾನದ ದಿನಾಂಕ 27 ಫೆಬ್ರವರಿ 2024 (ಮಂಗಳವಾರ), ಸಮಯ ಬೆಳಿಗ್ಗೆ 9:00 ರಿಂದ ಸಂಜೆ 4:00 ಗಂಟೆ, ಮತ ಎಣಿಕೆ ದಿನಾಂಕ 27 ಫೆಬ್ರವರಿ 2024 (ಮಂಗಳವಾರ) ಸಮಯ ಸಂಜೆ 5:00 ಗಂಟೆಯಿಂದ ಪ್ರಾರಂಭವಾಗಲಿದೆ. ದಿನಾಂಕ 29 ಫೆಬ್ರವರಿ 2024 (ಗುರುವಾರ) ಚುನಾವಣಾ ಪ್ರಕ್ರಿಯೆ ಕೊನೆಗೊಳ್ಳಲಿದೆ.

# ತರಬೇತಿ ಸಮಾರೋಪ

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವು ಐಎಎಸ್ ಮತ್ತು ಕೆಎಎಸ್ ಪರೀಕ್ಷೆಗಳಿಗೆ 50 ದಿನಗಳ ತರಬೇತಿ ಆಯೋಜಿಸಿದ್ದು, 2014ನೇ ಬ್ಯಾಚ್‌ನ ಐಎಎಸ್ ಅಧಿಕಾರಿ, ಚಾಮರಾಜನಗರ ಜಿಲ್ಲಾಧಿಕಾರಿ ಶ್ರೀಮತಿ ಶಿಲ್ಪಾನಾಗ್ ಅವರು ಫೆಬ್ರವರಿ 1 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಏರ್ಪಡಿಸಿರುವ ಸಮಾರೋಪ ಸಮಾರಂಭದಲ್ಲಿ ಐಎಎಸ್ / ಕೆಎಎಸ್ ಶಿಬಿರಾರ್ಥಿಗಳಿಗೆ ಶುಭ ಹಾರೈಸಿ ಸಂವಾದ ನಡೆಸಲಿದ್ದಾರೆ. 2011 ನೇ ಸಾಲಿನ ಐಎಫ್ ಎಸ್ ಅಧಿಕಾರಿ ಮೈಸೂರಿನ ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಡಿ. ಮಹೇಶ್ ಕುಮಾರ್ ಅವರು ಮುಕ್ತ ಭಂಡಾರ ಅಧ್ಯಯನ ಪುಸ್ತಕವನ್ನು ಬಿಡುಗಡೆ ಮಾಡಿ ಶಿಬಿರಾರ್ಥಿಗಳಿಗೆ ಶುಭ ಕೋರಲಿದ್ದಾರೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ?ರ. ಶರಣಪ್ಪ ವಿ. ಹಲಸೆ ಅಧ್ಯಕ್ಷತೆ ವಹಿಸಲಿದ್ದಾರೆ. ಕುಲಸಚಿವ ಪ್ರೊರ. ಕೆ. ಎಲ್. ಎನ್ ಮೂರ್ತಿ ಉಪಸ್ಥಿತರಿರುವರು. ಕುಲಪತಿಗಳ ಮಾರ್ಗದರ್ಶನದಲ್ಲಿ ಡಿಸೆಂಬರ್ 08 ರಂದು ಪ್ರಾರಂಭವಾದ ಈ ತರಬೇತಿಗೆ ರಾಜ್ಯದ ವಿವಿಧ ಜಿಲ್ಲೆಗಳಿಂದ 529 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡು ತರಬೇತಿ ಪಡೆಯುತ್ತಿದ್ದಾರೆ ಎಂದು ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರದ ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಂಡಕಳ್ಳಿ ವಿಮಾನ ನಿಲ್ದಾಣದ ಬಳಿ ಕಾರು ಡಿಕ್ಕಿ: ಭಾರಿ ಗಾತ್ರದ ಹುಲಿ ಸಾವು



**ಮೈಸೂರು:** ಕಾರು ಢಿಕ್ಕಿ ಹೊಡೆದ ಪರಿಣಾಮ ಭಾರಿ ಗಾತ್ರದ ಹುಲಿ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದ ಬಳಿ ನಡೆದಿದೆ. ಗಂಡು ಹುಲಿ ಸಾವನ್ನಪ್ಪಿದ್ದು ಅರಣ್ಯಾಧಿಕಾರಿಗಳು ಹುಲಿಯ ಮೃತದೇಹವನ್ನ ವಶಕ್ಕೆ ಪಡೆದಿದ್ದಾರೆ. ನಿನ್ನೆ ತಡರಾತ್ರಿ ಸುಮಾರು 12 ಗಂಟೆ ವೇಳೆಗೆ ಘಟನೆ ನಡೆದಿದೆ.ಇಟಿಯೋಸ್ ಕಾರ್ ಹುಲಿಗೆ ಢಿಕ್ಕಿ ಹೊಡೆದಿದೆ. ಕಾರಿನ ಮುಂಭಾಗಕ್ಕೂ ಹಾನಿಯಾಗಿದೆ. ಘಟನೆ ನಡೆದ ಸ್ಥಳಕ್ಕೆ ಅರಣ್ಯಾಧಿಕಾರಿಗಳಾದ ಮಾಲತಿಪ್ರಿಯ,ಲಕ್ಷ್ಮಿನಾರಾಯಣ್,ಸುರೇಂದ್ರ ಹಾಗೂ ಇತರರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ನಂಜನಗೂಡು ಹಾಗೂ ಸುತ್ತ ಮುತ್ತ ಹುಲಿ ಕಾಣಿಸಿಕೊಂಡು ಭೀತಿ ಸೃಷ್ಟಿಸಿತ್ತು.ಇದೇ ಹುಲಿ ಅಪಘಾತದಲ್ಲಿ ಸಿಲುಕಿ ಮೃತಪಟ್ಟಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಸದರಿ ಹುಲಿ ಸುಮಾರು 1.5 ವರ್ಷದ ಗಂಡು ಹುಲಿಯಾಗಿರುತ್ತದೆ, ಈ ಸಂಬಂಧ ಕಾರನ್ನು ವಶಕ್ಕೆ ಪಡೆದು, ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ. ಸದ್ಯ ಹುಲಿಯ ಮರಣೋತ್ತರ ಪರೀಕ್ಷೆ ನಡೆಸಿ ಅಂತ್ಯಕ್ರಿಯೆ ನೆರವೇರಿಸಲು ಅರಣ್ಯಾಧಿಕಾರಿಗಳು ನಿರ್ಧರಿಸಿದ್ದಾರೆ.

ಅಪಘಾತವಾದ ಕಾರನ್ನ ಅರಣ್ಯಾಧಿಕಾರಿಗಳು ವಶಕ್ಕೆ ಪಡೆದು ಪ್ರಯಾಣಿಕರನ್ನ ವಿಚಾರಣೆ ನಡೆಸುತ್ತಿದ್ದಾರೆ. ಸದ್ಯ ಹುಲಿಯ ಮರಣೋತ್ತರ ಪರೀಕ್ಷೆ ನಡೆಸಿ ಅಂತ್ಯಕ್ರಿಯೆ ನೆರವೇರಿಸಲು ಅರಣ್ಯಾಧಿಕಾರಿಗಳು ನಿರ್ಧರಿಸಿದ್ದಾರೆ. ಅಪಘಾತವಾದ ಕಾರನ್ನ ಅರಣ್ಯಾಧಿಕಾರಿಗಳು ವಶಕ್ಕೆ ಪಡೆದು ಪ್ರಯಾಣಿಕರನ್ನ ವಿಚಾರಣೆ ನಡೆಸುತ್ತಿದ್ದಾರೆ.

# ಸಂವಿಧಾನದ ಆಶಯ ಪಾಲಿಸಿ



**ಮೈಸೂರು:** ಸಂವಿಧಾನ ನಮಗೆ ಸಮಾನತೆ ಸ್ವಾತಂತ್ರ್ಯ ಸೋದರತೆ ಎಲ್ಲವನ್ನು ಕೊಟ್ಟಿದೆ, ಆದರೆ ಅದು ಪಾಲನೆಯಾಗಬೇಕು. ಆಗ ಮಾತ್ರ ದೇಶದಲ್ಲಿ ಶಾಂತಿ ನೆಲೆಸಿ ಸುಭೀಕ್ಷವಾಗಿರುತ್ತದೆ ಎಂದು ಅಂಬೇಡ್ಕರ್ ಸಂಶೋಧನಾ ಸಂಸ್ಥೆಯ ಸಲಹೆಗಾರರಾದ ಬಸವರಾಜ್ ದೇವನೂರು ತಿಳಿಸಿದರು.

ನಗರದ ಗಾಂಧಿನಗರದಲ್ಲಿರುವ ಹರಳಯ್ಯ ರಂಗಮಂದಿರದಲ್ಲಿ ರಂಗಾತರಂಗ ತಂಡ ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮಕ್ಕಳಿಗೆ ಏರ್ಪಡಿಸಿದ್ದು ಮಕ್ಕಳ ರಂಗ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದು ಮಂಡ್ಯದ ಕೆರಗೋಡಿನಲ್ಲಿ ನಡೆಯುತ್ತಿರುವ ಘಟನೆ ಬೇಸರ ತರಿಸಿದೆ. ಯಾವುದೋ ಧ್ವಜವನ್ನು ಸೃಷ್ಟಿಮಾಡಿ ಆ ಮೂಲಕ ಜನರ ನೆಮ್ಮದಿಯನ್ನು ಹಾಳು ಮಾಡುತ್ತಿರುವ ಇವರಿಗೆ ದೇಶದ ಧ್ವಜದ ಬಗ್ಗೆ ಚಿಂತೆಯಿಲ್ಲ ಎಂದು ವಿಷಾದ ವ್ಯಕ್ತ ಪಡಿಸಿದರು.

ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರತೆಗೆಯಲು ಏರ್ಪಡಿಸಿರುವ ರಂಗಶಿಬಿರ ಅರ್ಥ ಪೂರ್ಣವಾಗಿದೆ. ಪ್ರತಿಯೊಂದು ಮಗುವಿನಲ್ಲಿಯೂ ಪ್ರತಿಭೆ ಇರುತ್ತದೆ. ಅದನ್ನು ಹೊರತೆಗೆಯುವ ಕೆಲಸವಾಗಬೇಕು. ಪಿ. ಲಂಕೇಶ್ ಅವರು ಬರೆದಿರುವ ಈ ನಾಟಕ ರಾಜ್ಯಾದ್ಯಂತ ಪ್ರದರ್ಶನಗೊಳ್ಳಬೇಕು ಎಂದರು. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಲಹೆಗಾರರಾದ ಡಾ. ಎಸ್. ತುಕಾರಾಂ ಮಾತನಾಡಿ ಸಮಾಜ ಕಲ್ಯಾಣ ಇಲಾಖೆ ಶಿಕ್ಷಣ ಮತ್ತು ಅರಿವಿಗೆ ಹೆಚ್ಚಾಗಿ ಕೆಲಸ ಮಾಡುತ್ತಿದ್ದು, ನಾವೆಲ್ಲರೂ ಭಾರತೀಯರು ಭಾರತ ಮಾತೆಯ ಮಕ್ಕಳು ಎಂದು ತಿಳಿಯಬೇಕು. ಪ್ರತಿಯೊಬ್ಬರನ್ನು ಮುಟ್ಟುವುದರಲ್ಲಿ ಪ್ರೀತಿಯಿದೆ. ಜಾತಿಯನ್ನು ಮರೆತು ಮುಟ್ಟಬೇಕು. ಎಲ್ಲರನ್ನು ಮುಟ್ಟುವ ಮೂಲಕ ನಾವೆಲ್ಲ ಒಂದೇ ತಾಯಿಯ ಮಕ್ಕಳು ಎಂಬ ಭಾವನೆ ಬರಬೇಕು. ಈ ನಾಟಕ ಭಾರತದ ಎಲ್ಲಾ ಜನತೆಯನ್ನು ತಲುಪಬೇಕು ಎಂದರು. ಸಮಾರಂಭದಲ್ಲಿ ಆದಿಜಾಂಬವ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಣ್ಣ ಕಾರ್ಯದರ್ಶಿ ಕೃಷ್ಣ, ಅನಂತಸ್ವಾಮಿ ಮುಖ್ಯಶಿಕ್ಷಕ, ಪ್ರದೀಪ್ ಕುಮಾರ್, ರವಿಕುಮಾರ್ ಹಾಜರಿದ್ದರು. ಕೀರ್ತಿರಾಜ್ ತಂಡದಿಂದ ಮುಟ್ಟಿಸಿಕೊಂಡವರು ನಾಟಕ ಪ್ರದರ್ಶನ ನಡೆಯಿತು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

# ಫೆ.1ರಂದು ಸಂವಿಧಾನ ಜಾಗೃತಿ ಜಾಥಾ ಆಗಮನ

**ಪಿರಿಯಾಪಟ್ಟಣ:** ಫೆ.1 ರಂದು ಸಂವಿಧಾನ ಜಾಗೃತಿ ಜಾಥಾವು ಪಿರಿಯಾಪಟ್ಟಣದ ಕಿತ್ತೂರು ಗ್ರಾಮಕ್ಕೆ ಆಗಮಸಲಿದ್ದು ಸಾರ್ವಜನಿಕರು ಆತ್ಮೀಯವಾಗಿ ಬರ ಮಾಡಿಕೊಳ್ಳಲು ಸಹಕರಿಸಬೇಕು ಎಂದು ತಹಸೀಲ್ದಾರ್ ಕುಂಹಿ ಮಹಮ್ಮದ್ ತಿಳಿಸಿದರು.

ತಾಲ್ಲೂಕು ಆಡಳಿತ ಕಚೇರಿಯಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಸಂವಿಧಾನ ಜಾಗೃತಿ ಜಾಥಾವು ಗಣರಾಜ್ಯೋತ್ಸವ ದಿನದಂದು ಮೈಸೂರಿನಲ್ಲಿ ಉದ್ಘಾಟನೆಯಗಲಿದ್ದು ಕೆ. ಆರ್ ನಗರದಿಂದ ತಾಲ್ಲೂಕಿನ ಕಿತ್ತೂರು ಗ್ರಾಮಕ್ಕೆ ಫೆ.1ಕ್ಕೆ ತಾಲ್ಲೂಕಿಗೆ ಆಗಮಿಸಲಿದ್ದು ಈ ಜಾಥಾವನ್ನು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರಾದ ಕೆ.ವೆಂಕಟೇಶ್ ರವರು ಉದ್ಘಾಟಿಸುವರು.ಈ ಜಾಥಾವು ಫೆ.1ರಿಂದ ಫೆ.7ರವರೆಗೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಪ್ರತಿದಿನ ತೆರಳುತ್ತದೆ ಇದರೊಂದಿಗೆ ಸಂವಿಧಾನದ ಆಶಯಗಳ ಬಗ್ಗೆ ಕ್ಲಸ್ಟರ್ ಮಟ್ಟದಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಡಿಸಲಾಗಿದೆ ವಿಷಯ ತಜ್ಞರಿಂದ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು ಮತ್ತು ವಿದ್ಯಾರ್ಥಿಗಳಿಂದ ಪಥ ಸಂಚಲನ,ಸಾಂಸ್ಕೃತಿಕ ಕಾರ್ಯಕ್ರಮ ಸೇರಿದಂತೆ ಇನ್ನಿತರೆ ಜಾಗೃತಿ ಕಾರ್ಯಕ್ರಮಗಳು ಏರ್ಪಡಿಸಲಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಚಂದ್ರಶೇಖರ ಮಾತನಾಡಿ ಸಂವಿಧಾನ ಜಾಗೃತಿ ಜಾಥಾವನ್ನು ಯಶಸ್ವಿಯಾಗಿಸಲು ಪ್ರತಿ ಗ್ರಾಮ ಪಂಚಾಯಿತಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಸ್ಥಳೀಯ ಅಧಿಕಾರಿಗಳು ಮತ್ತು ವಿವಿಧ ಸಮುದಾಯದ ಮುಖಂಡರನ್ನೊಳಗೊಂಡ ಸಮಿತಿ ರಚಿಸಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುವುದು. ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದರು.

ಸಭೆಯಲ್ಲಿ ವಿವಿಧ ಸಮುದಾಯದ ಮುಖಂಡರಾದ ಪಿ. ಮಹದೇವ್, ಕೋಗಿಲವಾಡಿ ರಾಮಚಂದ್ರ, ಆರ್. ಎಸ್. ದೊಡ್ಡಣ್ಣ, ರವಿ ಕುಮಾರ, ರವಿ ಚಪ್ಪರದಳ್ಳಿ,ಮಂಜು ಐಯಿತನಲ್ಲಿ,ಶಿವರಾಜ್, ಪುಟ್ಟಯ್ಯ,ಜಾನಕಮ್ಮ, ಶಿವರಾಜ್, ಶೇಖರ್ , ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ್,ಸಿ ಡಿ ಪಿ ಓ ಮಮತಾ, ಶಿರಸ್ತೇದಾರ್ ಶಕೀಲಾ ಭಾನು,ಎ ಇ ಇ ಮಲ್ಲಿಕಾರ್ಜುನ, ವಿನೋದ್ ಸೇರಿದಂತೆ ಮತ್ತಿತರರು ಹಾಜರಿದ್ದರು.

## ಯುವ ಸಂದನ ಕಾರ್ಯಕ್ರಮದಡಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜನ ಆರೋಗ್ಯ ಕೇಂದ್ರ, ಎಪಿಡೇಮಿಯಾಲಜಿ ವಿಭಾಗ, ನಿಮ್ಹಾನ್ಸ್ ಬೆಂಗಳೂರು ಹಾಗೂ ಯುವ ಸಬಲೀಕರನ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಅನುಷ್ಟಾನಗೊಂಡಿರುವ ''ಯುವ ಸ್ಪಂದನ'' ಕಾರ್ಯಕ್ರಮದಡಿಯಲ್ಲಿ ಕಾರ್ಯನಿರ್ವಹಿಸಲು ಹೊಸದಾಗಿ ಯುವ ಪರಿವರ್ತಕರು ಹಾಗೂ ಯುವ ಸಮಾಲೋಚಕರನ್ನು ಆಯ್ಕೆ ಮಾಡಿಕೊಂಡು ಅವರನ್ನು ಕಾರ್ಯಕ್ರಮದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಚಿಕ್ಕಬಳ್ಳಾಪುರ ಜಿಲ್ಲೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಜಿಲ್ಲೆಯ ಅರ್ಹ ಅಭ್ಯರ್ಥಿಗಳು ದಿನಾಂಕ: 01.02.2024. ರ ಒಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು. ಪ್ರತಿ ಜಿಲ್ಲೆಗೆ ಯುವ ಪರಿವರ್ತಕರ ಸಂಖ್ಯೆ: ಕನಿಷ್ಟ 05, ಪ್ರತಿ ಜಿಲ್ಲೆಗೆ ಯುವ ಸಮಾಲೋಚಕರ ಸಂಖ್ಯೆ: ಕನಿಷ್ಟ 01, ಶೈಕ್ಷಣಿಕ ಅರ್ಹತೆ:- ಪದವಿ ಹಾಗೂ ಮೇಲ್ಪಟ್ಟು (Psychology/ Social Work ಪದವಿ ತೇರ್ಗಡೆ ಹೊಂದಿದವರಿಗೆ ಆದ್ಯತೆ ನೀಡಲಾಗುವುದು), ಕನಿಷ್ಟ ವಯಸ್ಸು 21 ರಿಂದ 35 ವರ್ಷಗಳು. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಖುದ್ದು ಭೇಟಿ ನೀಡಿ ಅಥವಾ ದೂರವಾಣಿ ಸಂಖ್ಯೆ: 08156-270054 ಗೆ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಗೀತಾ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬರ ಪರಿಸಿತಿ ಕುರಿತು ಕಂಟ್ರೋಲ್ ರೂಮ್ ಸ್ಥಾಪನೆ

**ಚಿಕ್ಕಬಳ್ಳಾಪುರ:** ತಾಲ್ಲೂಕಿನಲ್ಲಿ 2023-24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಫ್ರೂಟ್ಸ್ ಐ.ಡಿ ಮತ್ತು ಬರ ಪರಿಸ್ಥಿತಿಯಿಂದ ಸಾರ್ವಜನಿಕರಿಗೆ ಆಗುವ ತೊಂದರೆಗಳನ್ನು ತಪ್ಪಿಸುವ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಚಿಕ್ಕಬಳ್ಳಾಪುರ ತಾಲ್ಲೂಕು ಕೇಂದ್ರದಲ್ಲಿ ಸಹಾಯವಾಣಿ (ಕಂಟ್ರೋಲ್ ರೂಮ್) ತೆರೆದು 24X7 ಗಳ ಕಾಲ ದೂರವಾಣಿ ಸಂ:8088177701 ರಂತೆ ಸಹಾಯವಾಣಿ ತೆರೆಯಲಾಗಿದೆ. ಸಾರ್ವಜನಿಕರು ದೂರವಾಣಿ ಮೂಲಕ ಬರ ಪರಿಸ್ಥಿತಿಯಿಂದ ಉಂಟಾದ ತೊಂದರೆಗಳ ಕುರಿತು ಸಹಾಯವಾಣಿ ಮೂಲಕ ಮಾಹಿತಿಯನ್ನು ಪಡೆದುಕೊಳ್ಳಬಹುದೆಂದು ಚಿಕ್ಕಬಳ್ಳಾಪುರ ತಾಲ್ಲೂಕು ತಹಶೀಲ್ದಾರ್ ಎಂ.ಅನಿಲ್ ತಿಳಿಸಿದ್ದಾರೆ.

## ಸ್ಪರ್ಶ್ ಕುಷ್ಠ ಅರಿವು ಆಂದೋಲನ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕುಷ್ಠರೋಗ ನಿರ್ಮೂಲನ ಕ್ರರ್ಯಕ್ರಮದಡಿ ಸ್ಪರ್ಶ್ ಕುಷ್ಠ ಅರಿವು ಆಂದೋಲನ-2024 ಜಿಲ್ಲೆಯಾದ್ಯಂತ ಜನವರಿ 30 ರಿಂದ ಫೆಬ್ರವರಿ 13 ರವರೆಗೆ ಹಮ್ಮಿಕೊಳ್ಳಲಾಗಿದೆ. ವ್ಯಕ್ತಿಯ ದೇಹದ ಮೇಲೆ ಯಾವುದೇ ಭಾಗದಲ್ಲಿ ತಿಳಿ ಬಿಳಿ ಅಥವಾ ತಾಮ್ರ ವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆ/ಮಚ್ಚೆಗಳು ಕಂಡುಬಂದಲ್ಲಿ ಆರೋಗ್ಯ ಸಹಾಯಕ/ಸಹಾಯಕಿಯರು/ಆಶಾ ಕಾರ್ಯಕರ್ತೆಯರನ್ನು ಸಂಪರ್ಕಿಸಿ ಹಾಗೂ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರದಲ್ಲಿ ಪರೀಕ್ಷಿಸಿಕೊಳ್ಳಿ. ಭಯ ಬೇಡ ಕುಷ್ಠರೋಗ ಸಂಪೂರ್ಣ ಗುಣಮುಖ ಹೊಂದುವ ಖಾಯಿಲೆ. ಕುಷ್ಠರೋಗವನ್ನು ಶೀಘ್ರ ಪತ್ತೆ ಹಚ್ಚಿ ನಿಗಧಿತ ಸಂಪೂರ್ಣ ಚಿಕಿತ್ಸೆಯನ್ನು ಪಡೆದು ನಿಯಮಿತ ವ್ಯಾಯಾಮ ಮಾಡಿದಲ್ಲಿ ಕುಷ್ಠರೋಗದಿಂದ ಸಂಪೂರ್ಣ ಗುಣಮುಖ ಹೊಂದಬಹುದು. ಬಹುವಿಧ ಔಷಧಿ ಚಿಕಿತ್ಸೆ ಎಲ್ಲಾ ಸರ್ಕಾರಿ ಮತ್ತು ಬಿ.ಬಿ.ಎಂ.ಪಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಲಭ್ಯವಿದೆ. ಕುಷ್ಠರೋಗಕ್ಕೆ ಅಂಟಿಕೊಂಡಿರುವ ಕಳಂಕ ಹಾಗೂ ತಾರತಮ್ಯವನ್ನು ಹೋಗಲಾಡಿಸಿ, ಕುಷ್ಠರೋಗಿಗಳಿಗೆ ಸಮಾಜದ ಮುಖ್ಯ ವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ನೀಡೋಣ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಡಿಎಸ್ ಮುಖಂಡ ಜಲಾಲ್ ಸಾಬ್ ನಿಧನ



**ಹುಳಿಯಾರು:** ಹುಳಿಯಾರು ಹೋಬಳಿಯ ವೈ.ಎಸ್.ಪಾಳ್ಯದ ಜೆಡಿಎಸ್ ಮುಖಂಡ ಸೈಯದ್ ಜಲಾಲ್ (78) ಸಾಬ್ ಅವರು ವಯೋಸಹಜ ಸೋಮವಾರ ಬೆಳಗ್ಗೆ ನಿಧನರಾಗಿದ್ದಾರೆ. ಮೃತರು ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷರಾಗಿ, ರಾಜ್ಯ ರೇಷ್ಮೆ ಮಂಡಳಿ ನಿರ್ದೇಶಕರಾಗಿ, ಹುಳಿಯಾರು ವಿಎಸ್ಎಸ್ಎನ್ ಅಧ್ಯಕ್ಷರಾಗಿ, ವೈ.ಎಸ್.ಪಾಳ್ಯ ಜಾಮಿಯಾ ಮಸೀದಿ ಕಾರ್ಯದರ್ಶಿಯಾಗಿ, ಪೌಡಶಾಲೆ, ಪಿಯುಸಿ ಮತ್ತು ಪದವಿ ಕಾಲೇಜಿನ ಅಭಿವೃದ್ಧಿ ಸಮಿತಿ ಸದಸ್ಯರಾಗಿ ಸೇವೆಸಲ್ಲಿಸಿದ್ದಾರೆ. ಮೃತರಿಗೆ ನಾಲ್ವರು ಪುತ್ರರು, ನಾಲ್ವರು ಪುತ್ರಿಯರು ಇದ್ದಾರೆ. ವೈ.ಎಸ್.ಪಾಳ್ಯದ ಖಬರಸ್ತಾನದಲ್ಲಿ ಸೋಮವಾರ ಸಂಜೆ ಅಂತ್ಯಕ್ರಿಯೆ ನೆರವೇರಿತು.

## ಫೆ.12ರಂದು 16ಉ ವಿಧಾನಸಭೆಯ 3ನೇ ಅಧಿವೇಶನ

**ಬೆಂಗಳೂರು:** ಹದಿನಾರನೇ ವಿಧಾನಸಭೆಯ ಮೂರನೇ ಅಧಿವೇಶನವು ಫೆಬ್ರವರಿ 12 ರಂದು ಬೆಳಿಗ್ಗೆ 11 ಗಂಟೆಗೆ ಬೆಂಗಳೂರಿನ ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಸಮಾವೇಶಗೊಳ್ಳಲಿದೆ. ಅಂದು ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಉಭಯ ಸದನಗಳ ಸದಸ್ಯರುಗಳನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ ಎಂದು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿ ಎಂ. ಕೆ. ವಿಶಾಲಾಕ್ಷಿ ತಿಳಿಸಿದ್ದಾರೆ.

# ವಾಲ್ಮೀಕಿ ಕಳ್ಳ, ದರೋಡೆಕೋರನೆಂದರೆ ಕೇಸ್ ಹಾಕ್ತೀವಿ

**ಹುಳಿಯಾರು:** ರಾಮಾಯಣ ಎಂಬ ಮಹಾನ್ ಮಹಾಕಾವ್ಯ ರಚಿಸುವ ಮೊದಲು ವಾಲ್ಮೀಕಿ ಕಳ್ಳ, ದರೋಡೆಕೋರನೆಂಬುದು ಸುಳ್ಳು ಸೃಷ್ಠಿ ಹೀಗೆ ಸಾರ್ವಜನಿಕ ಸಭೆಯಲ್ಲಿ ಮೂದಲಿಸಿ ತೇಜೋವಧೆ ಮಾಡಿದರೆ ಪ್ರಕರಣ ದಾಖಲಿಸಬೇಕಾದೀತು ಎಂದು ಡಿಸಿಸಿ ಬ್ಯಾಂಕ್ ನಿರ್ದೇಶಕ ಸಿಂಗದಹಳ್ಳಿ ರಾಜಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಹುಳಿಯಾರಿನ ರಾಮಗೋಪಾಲ್ ಸರ್ಕಲ್ ಅನ್ನು ಮಹರ್ಷಿ ವಾಲ್ಮೀಕಿ ಸರ್ಕಲ್ ಎಂದು ಸೋಮವಾರ ನಾಮಕರಣ ಮಾಡಿ ಅವರು ಮಾತನಾಡಿದರು.

2009 ರಲ್ಲಿ ಪಂಜಾಬ್‌ನ ಸ್ಟಾರ್ ಪ್ಲಸ್ ಟಿವಿಯಲ್ಲಿ ಸಪ್ನ ಬಾಬುಲ್ ಕಾ ಬಿದಾಯಿ ಎಂಬ ಧಾರವಾಹಿಯಲ್ಲಿ ವಾಲ್ಮೀಕಿ ಋಷಿ ಪೂರ್ವದಲ್ಲಿ ದರೋಡೆಕೋರನಾಗಿದ್ದ ಎಂಬ ಸಂಭಾಷಣೆ ಪ್ರಸಾರವಾಗುತ್ತದೆ. ಅದರ ವಿರುದ್ದ ನವ್ವಿಕಾಸ್ ಎಂಬುವವರು ಕೇಸು ದಾಖಲಿಸುತ್ತಾರೆ. ಬಳಿಕ ಕೋರ್ಟ್ ಯುನಿವರ್ಸಿಟಿಗೆ ಸಂಶೋಧನೆ ನಡಸಲು ಸೂಚಿಸುತ್ತದೆ. ಆಳವಾದ ಅಧ್ಯಯನದ ನಂತರ ವಾಲ್ಮೀಕಿ ಡಕಾಯಿತನಾಗಿದ್ದ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ ಎಂಬುದು ಸಾಬೀತಾಗಿ ಕೋರ್ಟ್ ಸಹ ತನ್ನ ತೀರ್ಪಿನಲ್ಲಿ ದರೋಡೆಕೋರನಾಗಿರಲಿಲ್ಲ ಎಂಬ ತೀರ್ಪು ನೀಡಿದೆ. ಹಾಗಾಗಿ ಸಾರ್ವಜನಿಕವಾಗಿ ವಾಲ್ಮಿಕಿ ಬಗ್ಗೆ ಕಪೋಕಲ್ಪಿತ ಸುಳ್ಳು ಕಟ್ಟು ಕತೆಗಳನ್ನು ಹೇಳಿದರೆ ಕೇಸು ದಾಖಲಿಸಬೇಕಾಗುತ್ತದೆ ಎಂದರು. ನಾಯಕ ಸಮುದಾಯಲ್ಲಿ ಭಕ್ತಿಗೆ ಹೆಸರಾದ ಬೇಡರ ಕಣ್ಣಪ್ಪ, ನಂಬಿದವರಿಗೆ ರಕ್ಷಣೆ ನೀಡಿದ ಮದಕರಿ ನಾಯಕ, ಬ್ರಿಟಿಷ ವಿರುದ್ಧ ಮೊದಲ ಸ್ವಾತಂತ್ರ್ಯ ಸಂಗ್ರಾಮ ಸಾರಿದ ಅಲಗಲಿ ಬೇಡರು, ಗಂಡನ ಊಟಕೆ ಭಂಗವಾಗಬಾರದೆಂದು ತಾನೇ ಹೋರಾಡಿದ ಒನಗೆ ಓಬವ್ವ, ಕುರುಬರು, ಕುಂಬಾರರು, ಬೆಸ್ತರು, ಉಪ್ಪಾರರು, ಮುಸ್ಲೀಮರು ಹೀಗೆ ತಳಸಮುದಾಯಗಳಿಗೆ ಮೀಸಲಾತಿ ನೀಡಿದ ಎಲ್.ಜಿ.ಹಾವನೂರು, 77 ಪಾಳೆಪಟ್ಟೆಗಳನ್ನು ಕಟ್ಟಿ ಅನೇಕ ಕೆರೆ, ಬಾವಿ, ದೇವಸ್ಥಾನ ಕಟ್ಟಿದ ಸಮಾಜ ನಾಯಕ ಸಮಾಜದವರಾಗಿದ್ದು ನಾವೆಲ್ಲರೂ ಹೆಮ್ಮೆ ಪಡಬೇಕಾಗಿದೆ ಎಂದರು.



ಹುಳಿಯಾರು ಪಟ್ಟಣದಲ್ಲಿ ಕನಕ, ವಾಲ್ಮೀಕಿ, ಟಿಪ್ಪು, ಭಗೀರಥ, ಸೇವಾಲಾಲ್, ಅಂಬೇಡ್ಕರ್ ಹೀಗೆ ಅನೇಕ ಮನವತವಾದಿಗಳ ವೃತ್ತ ಮಾಡಿರುವುದು ಸ್ವಾಗತಾರ್ಹ ಬೆಳವಣಿಗೆ. ಇವುಗಳ ಜೊತೆ ಶಿವಕುಮಾರಸ್ವಾಮಿ ಹಾಗೂ ಬಸವಣ್ಣನವರ ವೃತ್ತ ಮಾಡಬೇಕು. ಅಲ್ಲದೆ ಈ ಎಲ್ಲಾ ಮಹಾಪುರುಷರು ಜಾತಿಧರ್ಮಕ್ಕೆ ಸೀಮಿತರಾದವರಲ್ಲವಾದ್ದರಿಂದ ಪ್ರತ್ಯೇಕವಾಗಿ ಒಬ್ಬೊಬ್ಬರ ಜಯಂತಿ ಮಾಡದೆ ಒಂದು ದಿ ಎಲ್ಲರ ಜಯಂತಿಯನ್ನು ಎಲ್ಲಾ ಜನಾಂಗದ ಜನರು ಸೇರಿ ಮಾಡುವ ಮೂಲಕ ಹುಳಿಯಾರು ಸರ್ವ ಜನಾಂಗದ ಶಾಂತಿಯ ತೋಟ ಎಂದು ಜಗತ್ತಿಗೆ ತೋರಿಸಬೇಕಿದೆ ಎಂದರು. ಶಿಡ್ಲಕೋಣದ ವಾಲ್ಮೀಕಿ ಗುರುಪೀಠದ ಶ್ರೀ ಸಂಜಯ್ ಕುಮಾರ್ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು. ದುರ್ಗಮ್ಮನ ದೇವಸ್ಥಾನದ ಧರ್ಮದರ್ಶಿ ಎಸ್.ಆರ್.ದಯಾನಂದ್, ಪಪಂ ಸದಸ್ಯ ರಾಜುಬಡಗಿ, ಹುಳಿಯಾರು ಹೋಬಳಿ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಎಚ್.ಡಿ.ದುರ್ಗರಾಜು, ಹುಳಿಯಾರು ವಾಲ್ಮಿಕಿ ನಾಯಕ ಸಂಘದ ಅಧ್ಯಕ್ಷ ದುರ್ಗಯ್ಯ, ಲೇಖಕ ಹುಳಿಯಾರು ತಮ್ಮಯ್ಯ ಸೇರಿದಂತೆ ಅನೇಕರು ವೇದಿಕೆಯಲ್ಲಿದ್ದರು.

> "ವಾಲ್ಮೀಕಿ ವೃತ್ತ ಮತ್ತು ಪುತ್ಥಳಿ ನಿರ್ಮಾಣ ಮಾಡುವ ಜೊತೆಗೆ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯಲ್ಲಿ ರಾಮಾಯಣ ಗ್ರಂಥ ಇಟ್ಟುಕೊಂಡು ನಿತ್ಯ ಒಂದೊಂದು ಅಧ್ಯಾಯ ಓದಿ ಅರ್ಥ ಮಾಡಿಕೊಂಡು ಅದರಂತೆ ನಡೆಯಬೇಕು. ಕೇಂದ್ರ ಸರ್ಕಾರ ತಕ್ಷಣ ವಾಲ್ಮೀಕಿ ಸಮುದಾಯಕ್ಕೆ 7.5 ಮೀಸಲಾತಿ ನೀಡಬೇಕು. ರಾಜ್ಯ ಸರ್ಕಾರ ವಾಲ್ಮೀಕಿ ನಿಗಮಕ್ಕೆ ಹಣ ಬಿಡುಗಡೆ ಮಾಡಿ ಸಾಲಸೌಲಭ್ಯ ವದಗಿಸಬೇಕು. ಮುಖ್ಯವಾಗಿ ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಅರ್ಹ ವಾಲ್ಮೀಕಿ ಜನಾಂಗದವರಿಗೆ ಸಿಗಬೇಕಾದ ಸವಲತ್ತುಗಳನ್ನು ಕಸಿಯುತ್ತಿರುವವ ವಿರುದ್ಧ ಕ್ರಮ ಕೈಗೊಳ್ಳಬೇಕು.
>
> । ಶ್ರೀಸಂಜಯ್ ಕುಮಾರ್ ಸ್ವಾಮೀಜಿ

### ಸಾಹಿತಿ ಬನ್ನೂರು ರಾಜು ಸಲಹೆ

# ವಿಶ್ವ ಮೆಚ್ಚಿದ ಧೀರ ಸೇನಾನಿ ಫೀಲ್ಡ್ ಮಾರ್ಷಲ್ ಕಾರ್ಯಪ್ಪ

**ಮೈಸೂರು:** ಸ್ವತಂತ್ರ ಭಾರತದ ಭಾರತೀಯ ಸೇನೆಯ ಮೊದಲ ಮಹಾ ದಂಡನಾಯಕರಾಗಿ ವಿಶ್ವವೇ ನಿಬ್ಬೆರಗಾಗುವಂತೆ ಭಾರತದ ಸೇನೆಯನ್ನು ಬಲಿಷ್ಠವಾಗಿ ಕಟ್ಟಿ ಬೆಳೆಸಿದ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಭಾರತ ಸೇನೆಯ ಮಹತ್ಸಾಧಕರಾಗಿ ಇಡೀ ವಿಶ್ವವೇ ಮೆಚ್ಚಿದ್ದ ಧೀರ ಸೇನಾನಿಯಾಗಿದ್ದರೆಂದು ಸಾಹಿತಿ ಬನ್ನೂರು ಕೆ.ರಾಜು ಗುಣಗಾನ ಮಾಡಿದರು.

ನಗರದ ಪ್ರತಿಷ್ಠಿತ ಸೇವಾ ಸಂಸ್ಥೆಗಳಾದ ಕಾವೇರಿ ಬಳಗ ಮತ್ತು ಹಿರಣ್ಮಯಿ ಪ್ರತಿಷ್ಠಾನ ಹಾಗೂ ಯಾದವಗಿರಿಯ ಭಾರತೀ ಸ್ತ್ರೀ ಸಮಾಜ ಸಂಯುಕ್ತವಾಗಿ ಸ್ತ್ರೀ ಸಮಾಜದ ಶಿಶುವಿಹಾರ ಮತ್ತು ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಇಂದು ಸೋಮವಾರ ಆಯೋಜಿಸಿದ್ದ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪನವರ 125ನೇ ಜನ್ಮದಿನೋತ್ಸವವನ್ನು ಕಾರ್ಯಪ್ಪನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ನವರು ಮಹಾನ್ ದೇಶ ಭಕ್ತರಾಗಿ, ದೇಶ ಪ್ರೇಮಿಯಾಗಿ, ಸೇನಾ ಪ್ರಪಂಚದ ವೀರಾಗ್ರಣಿಯಾಗಿ ಮೂರೂವರೆ ದಶಕಗಳ ಸುಧೀರ್ಘ ಕಾಲ ಸೇನೆಯಲ್ಲಿ ಸೇವೆ ಸಲ್ಲಿಸಿ ದೇಶಕ್ಕಾಗಿ ಸಂಪೂರ್ಣವಾಗಿ ತಮ್ಮನ್ನು ಸಮರ್ಪಿಸಿ ಕೊಂಡಿದ್ದರೆಂದರು.

ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ನವರು ಭಾರತೀಯ ಸೇನೆಗೆ ಸೇರಿದ ಕ್ಷಣದಿಂದಲೂ ಇಡೀ ದೇಶವನ್ನು ಆವಾಹನೆ ಮಾಡಿಕೊಂಡು ತಮ್ಮ ದೇಹದ ನರನಾಡಿಗಳಲ್ಲೂ, ರಕ್ತದ ಕಣ ಕಣದಲ್ಲೂ ದೇಶವನ್ನೇ ತುಂಬಿ ಕೊಂಡಿದ್ದ ಮಹಾನ್ ದೇಶ ಪ್ರೇಮಿ. ಇಂಥಾ ವೀರ ಸೇನಾನಿ, ಅಪ್ರತಿಮ ದೇಶ ಭಕ್ತ ಕಾರ್ಯಪ್ಪನಂತಹ ದೇಶೋದ್ಧಾರಕ ಸುಪುತ್ರನನ್ನು ಪಡೆದ ಭಾರತ ಮಾತೆ ನಿಜಕ್ಕೂ ಧನ್ಯಳು. ಹಾಗೆಯೇ ಇವರು ಕರ್ನಾಟಕದ ಕಲಿಯೆಂಬುದು ಮತ್ತು ಯೋಧರ ನಾಡು ಕೊಡಗಿನ ವೀರ ಕುವರ ಕನ್ನಡಿಗರೆಂಬುದೇ ನಮಗೆ ಹೆಚ್ಚು ಹೆಮ್ಮೆಯ ವಿಷಯ. ಕೊಡಗಿನ ಜೀವನದಿ ಕಾವೇರಿಯಷ್ಟೇ ನಿರ್ಮಲವಾದ ಪರಿಶುದ್ಧ ವ್ಯಕ್ತಿತ್ವದ ಶಿಸ್ತಿನ ಸಿಪಾಯಿ, ನಿಸ್ವಾರ್ಥಿ ಕಾರ್ಯಪ್ಪ ಭಾರತೀಯ ಸೇನೆಯಲ್ಲಿ ತಮ್ಮ ಜೀವವನ್ನೇ ಇಟ್ಟಿದ್ದರು. ಜೀವನವನ್ನೂ ಕೂಡ ಅಲ್ಲಿಂದಲೇ ಕಾಣುತ್ತಿದ್ದರು. ಕುಂತಲ್ಲಿ, ನಿಂತಲ್ಲಿ, ನಡೆದಲ್ಲಿ, ನುಡಿದಲ್ಲಿ, ಕನಸಲ್ಲಿ, ಮನಸಲ್ಲಿ, ಎಲ್ಲೆಲ್ಲೂ ಅವರಿಗೆ ದೇಶ ಮತ್ತು ದೇಶ ಸೇವೆ ಹಾಗೂ ದೇಶದ ಸೇನೆಯೇ ಸರ್ವಸ್ವವಾಗಿತ್ತು. ಇಂಥ ಭಾರತೀಯ ಸೇನೆಯ ಮಹಾದಂಡನಾಯಕನ ಸೇವೆಯ ಕಾರ್ಯ ವೈಖರಿ, ಸಮಯ ಪ್ರಜ್ಞೆ, ಶಿಸ್ತು ಪಾಲನೆ ಮತ್ತು ಅವರ ಆದರ್ಶ ಬದುಕು ಯಾವತ್ತೂ ದೇಶಕ್ಕೆ ಮಾದರಿ ಆಗುವಂತದ್ದು. ವಿಶೇಷವಾಗಿ ಯುವಜನರು ಇವರು ಹಾಕಿ ಹೋಗಿರುವ ಹೆಜ್ಜೆಗಳನ್ನು ಅನುಸರಿಸಬೇಕು ಹಾಗೂ ಅನುಕರಿಸಬೇಕು ಎಂದರು.



ಭೂಸೇನೆ, ವಾಯುಸೇನೆ, ನೌಕಾಸೇನೆ, ಹೀಗೆ ಸ್ವತಂತ್ರ ಭಾರತದ ಮೂರೂ ಸೇನೆಗಳ ಮೊಟ್ಟ ಮೊದಲ ಮಹಾ ದಂಡನಾಯಕರಾಗಿ ಕಾರ್ಯಪ್ಪ ಭಾರತೀಯ ಸೇನೆಗೆ ತಮ್ಮದೇ ಆದ ಮಹತ್ತರ ಕೊಡುಗೆ ನೀಡಿದ್ದಾರೆ. ದೇಶದ ಸೇನೆಯಲ್ಲಿನ ಮಹತ್ವಪೂರ್ಣ ಕ್ರಾಂತಿಕಾರಿ ಕೆಲಸಗಳನ್ನು ಇಡೀ ಜಗತ್ತಿಗೆ ಮಾದರಿಯಾಗುವಂತೆ ಮಾಡಿ ಜಗತ್ತಿನ ಉದ್ದಗಲಕ್ಕೂ ಸೇನಾ ಸಾರ್ವಭೌಮರಾಗಿ ಮಿಂಚಿದ್ದಾರೆ. ಇದಿಷ್ಟೇ ಅಲ್ಲದೆ ಇವತ್ತಿಗೂ ಭಾರತೀಯ ಸೇನೆ ಜಗತ್ತಿಗೆ ಸವಾಲೊಡ್ಡುವಂತೆ ಸಶಕ್ತವಾಗಿ ಬಲಿಷ್ಠವಾಗಿದೆ ಎಂದರೆ ಇದಕ್ಕೆ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಹಾಕಿ ಕೊಟ್ಟಿರುವ ಸುಭದ್ರ ತಳಪಾಯವೇ ಆಗಿದೆ ಎಂದ ಬನ್ನೂರು ರಾಜು ಅವರು, ಪ್ರತಿಯೊಬ್ಬರೂ ಸದಾ ಸ್ಮರಿಸಿ ಅನುಸರಿಸುವಂತಹ ದೇಶಭಕ್ತಿಯ ಸೇನಾ ಚೈತನ್ಯ ವಾಗಿದ್ದ ಕಾರ್ಯಪ್ಪನವರು ಭಾರತದ ವೀರಪುತ್ರರಾಗಿ, ವಿಶ್ವಚೇತನರಾಗಿ ದಾಖಲೆ ಬರೆದವರೆಂದು ಕಾರ್ಯಪ್ಪ ಅವರ ಸೇನಾ ಕಾರ್ಯಗಳ ಸಾಧನೆಯನ್ನು ಶ್ಲಾಘಿಸಿದರಲ್ಲದೆ, ಕೊಡವರು ಯಾವತ್ತೂ ಕೊಡುವವರು. ಅದರಲ್ಲೂ ಯೋಧರನ್ನು ಕೊಡುವುದರಲ್ಲಿ ನಿಸ್ಸೀಮರು. ಅದರಂತೆ ಅವರು ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಮತ್ತು ಜನರಲ್ ತಿಮ್ಮಯ್ಯ ಸೇರಿದಂತೆ ಭಾರತೀಯ ಸೇನೆಗೆ ಬಹಳಷ್ಟು ಯೋಧರನ್ನು ಕೊಟ್ಟು ಯೋಧರ ನಾಡು ಕೊಡಗು ಎಂಬ ಮಹತ್ವಪೂರ್ಣ ಗೌರವಕ್ಕೆ ಪಾತ್ರರಾಗಿದ್ದಾರೆಂದು ಅಭಿಮಾನ ಪೂರ್ವಕವಾಗಿ ಹೇಳಿದರು.

ವೀರ ಯೋಧ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ನೆನಪಿನಲ್ಲಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಗಾಯಕಿ ಹಾಗೂ ಶಿಕ್ಷಕಿಯೂ ಆದ ಕಾವೇರಿ ಬಳಗದ ಅಧ್ಯಕ್ಷೆ ಎನ್ .ಕೆ. ಕಾವೇರಿಯಮ್ಮ ಅವರು ಬಹುಮಾನ ವಿತರಿಸಿ ಗೌರವಿಸಿದರು. ನಂತರ ಹಲವು ಹಾಡುಗಳನ್ನು ಅವರು ಹಾಡಿ ಗಮನ ಸೆಳೆದರಲ್ಲದೆ ಎಲ್ಲರೂ ಕಾರ್ಯಪ್ಪನವರಂತೆ ದೇಶ ಪ್ರೇಮಿ ಮತ್ತು ದೇಶ ಭಕ್ತರಾಗ ಬೇಕೆಂದು ಕಿವಿಮಾತು ಹೇಳಿದರು. ಖ್ಯಾತ ಸಂಖ್ಯಾ ಶಾಸ್ತ್ರಜ್ಞ ಎಸ್.ಜೆ.ಸೀತಾರಾಂ, ಹಿರಣ್ಮಯಿ ಪ್ರತಿಷ್ಠಾನದ ಅಧ್ಯಕ್ಷ ಎ.ಸಂಗಪ್ಪ ಅವರು ಕಾರ್ಯಪ್ಪ ಅವರ ದೇಶ ಪ್ರೇಮದ ಸಾಹಸದ ನಿಸ್ವಾರ್ಥ ಬದುಕನ್ನು ಕುರಿತು ಸವಿವರವಾಗಿ ತಿಳಿಸಿ ಕೊಟ್ಟರು. ಮುಖ್ಯ ಶಿಕ್ಷಕಿ ರಾಣಿ ಅವರು ಅಧ್ಯಕ್ಷತೆ ವಹಿಸಿ ಮಾತಾಡಿದರು. ಶಿಕ್ಷಕಿಯರಾದ ಭಾಗ್ಯಲಕ್ಷ್ಮಿ, ವನಿತಾ, ಸುಜಾತ, ರೂಪ ಹಾಗೂ ದೈಹಿಕ ಶಿಕ್ಷಣ ಶಿಕ್ಷಕ ಶ್ರೀಕಂಠ ಮೂರ್ತಿ ಉಪಸ್ಥಿತರಿದ್ದರು.

# ಚುನಾವಣಾ ವೆಚ್ಚಗಳನ್ನು ನಿಯಮಾವಳಿ ರೀತ್ಯಾ ಪರಿಶೀಲಿಸಿ

**ಚಿಕ್ಕಬಳ್ಳಾಪುರ:** ಅಭ್ಯರ್ಥಿಗಳು ಚುನಾವಣೆ ಸಂಬಂಧ ಮಾಡುವ ಪ್ರತಿ ವೆಚ್ಚಗಳನ್ನು ಸಮರ್ಪಕವಾಗಿ, ಕರಾರುವಕ್ಕಾಗಿ ನಿಯಾವಳಿ ರೀತ್ಯ ಪರಿಶೀಲಿಸಿ ಮೇಲಿನ ಅಧಿಕಾರಿಗಳಿಗೆ ವರದಿ ಮಾಡಬೇಕೆಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಅವರು ಚುನಾವಣೆ ವೆಚ್ಚದ ತಂಡಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಚುನಾವಣಾ ವೆಚ್ಚ ಪರಿಶೀಲನಾ ತಂಡದ ಅಧಿಕಾರಿಗಳೊಂದಿಗೆ ನಡೆದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಈ ಬಾರಿಯ ಬಜೆಟ್ ನಂತರ ಯಾವುದೇ ಕ್ಷಣದಲ್ಲಿ ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಘೋಷಣೆ ಆಗಬಹುದು. ಚುನಾವಣಾ ನೀತಿ ಸಂಹಿತೆ ಅವಧಿಯಲ್ಲಿ, ಚುನಾವಣೆ ಸಂದರ್ಭದಲ್ಲಿ ಚುನಾವಣಾ ಅಭ್ಯರ್ಥಿಗಳು ಕೈಗೊಳ್ಳುವ ಚುನಾವಣೆಗೆ ಸಂಬಂಧಪಟ್ಟ ವೆಚ್ಚಗಳನ್ನು ನಿರಂತರವಾಗಿ ನಿಗಾ ಇಡಬೇಕು, ಯಾವ ವೆಚ್ಚ ನಿಯಮವಳಿ ರೀತ್ಯ ಇದೆ,ಅಕ್ರಮ ವೆಚ್ಚವಾಗಿದೆ. ಎನ್ನುವುದನ್ನು ಚುನವಣಾ ಆಯೋಗದ ನಿರ್ದೇಶನಗಳಂತೆ ಲೆಕ್ಕಹಾಕಿ ಮೇಲಿನ ಅಧಿಕಾರಿಗಳಿಗೆ ಕಾಲ ಕಾಲಕ್ಕೆ ಸಮರ್ಪವಾಗಿ ವರದಿ ಮಾಡಬೇಕು ತಮ್ಮ ನಿಯೋಜಿತ ಕೆಲಸಗಳನ್ನು ಸರಿಯಾಗಿ ನಿರ್ವಹಿಸಬೇಕು,ಆ ದಿಸೆಯಲ್ಲಿ ಇಂದಿನ ಕಾರ್ಯಾಗಾರ ಬಹು ಉಪಯೋಗಕಾರಿಯಾಗಿದ್ದು, ತರಬೇತಿ ನೀಡುವುದನ್ನು ಸರಿಯಾಗಿ ಗ್ರಹಿಸಿ ಮಾಹಿತಿ ಪಡೆಯಿರಿ.ಯಾವುದೇ ಗೊಂದಲಗಳಿದ್ದರೆ ತರಬೇತುದಾರರನ್ನು ಸಂಪರ್ಕಿಸಿ ಇಲ್ಲಿ ತಿಳಿದುಕೊಳ್ಳಿ ಎಂದು ಸೂಚನೆಗಳನ್ನು ನೀಡಿದರು.

ಅಪರ ಜಿಲ್ಲಾಧಿಕಾರಿ ಡಾ|| ತಿಪ್ಪೇಸ್ವಾಮಿ ಅವರು ಮಾತನಾಡಿ, ಅಭ್ಯರ್ಥಿಗಳ ಚುನಾವಣಾ ವೆಚ್ಚಗಳಿಗೂ ಮಿತಿ ಇರುತ್ತದೆ. ಅವರು ಮಾಡಿರುವ ವೆಚ್ಚಗಳು ಮಿತಿಯ ಒಳಗೆ ಇವೆಯೇ, ಇಲ್ಲವೇ ಎಂಬುದನ್ನು ತಿಳಿಯಬೇಕಾದರೆ ಚುನಾವಣಾ ವೆಚ್ಚದ ಮೇಲೆ ನೀಗಾ ಇಡುವ ಒಅಒಅ, ಗಿಜಜಠ ಗಿಜಠಿಟಡಿ ಖಿಜಚಿಟ (ಗಿಗಿಖಿ), ಗಿಜಜಠ ಖಣಡಿತಜಟಟಚಿಟಿಛಿಜ ಖಿಜಚಿಟ (ಗಿಖಖಿ), ಖಣಚಿಣಛಿ ಖಣಡಿತಜಟಟಚಿಟಿಛಿಜ ಖಿಜಚಿಟ (ಖಖಖಿ), ಈಟಥಿಟಿಡ ಖಡತಚಿಜ ಖಿಜಚಿಟ (ಈಖಖಿ), ಂಛಿಛಿಔಣಟಿಣಟಿಡ ಖಿಜಚಿಟ (ಂಖಿ) ತಂಡಗಳ ಅಧಿಕಾರಿಗಳು ಮತ್ತು ಸಹಾಯಕ ಚುನಾವಣಾ ವೆಚ್ಚದ ಅಧಿಕಾರಿಗಳು ನಿಯಮಾವಳಿ ರೀತ್ಯಾ ಕೆಲಸ ಮಾಡಬೇಕು. ಇಲ್ಲವಾದಲ್ಲಿ ಚುನಾವಣಾ ಕರ್ತವ್ಯಗಳಲ್ಲಿ ಲೋಪವಾಗುತ್ತದೆ. ಯಾವುದೇ ಕಾರಣಕ್ಕೆ ಇಂತಹ ಲೋಪಗಳನ್ನು ಚುನಾವಣಾ ಆಯೋಗ ಸಹಿಸುವುದಿಲ್ಲ. ನಿರ್ದಾಕ್ಷಿಣ್ಯವಾಗಿ ಶಿಸ್ತು ಕ್ರಮ ತೆಗೆದುಕೊಳ್ಳುತ್ತದೆ.ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಜಿಲ್ಲೆಯ ಎಲ್ಲ ಅಧಿಕಾರಿಗಳು, ಸಿಬ್ಬಂದಿ ಸಣ್ಣ ಕರ್ತವ್ಯ ಲೋಪವಿಲ್ಲದೆ ಅಚ್ಚುಕಟ್ಟಾಗಿ ಕರ್ತವ್ಯವನ್ನು ನಿರ್ವಹಿಸಿದ್ದೀರಿ. ಅದೇ ರೀತಿ ಈ ಚುನಾವಣಾ ಕರ್ತವ್ಯಗಳನ್ನು ನಿರ್ವಹಿಸಲು ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಹಾಗೂ ಜಿಲ್ಲಾ ಚುನವಣಾ ವೆಚ್ಚ ಅಧಿಕಾರಿ ಎನ್.ಹರೀಶ್, ಜಿಲ್ಲಾ ಉದ್ಯೋಗಾಧಿಕಾರಿ ಎಂ.ಪ್ರಸಾದ್ ಮತ್ತಿತರರು ಇದ್ದರು.



# ಹೆಣ್ಣು ಭ್ರೂಣ ಹತ್ಯೆ ಹೆಚ್ಚಾಗುತ್ತಿರುವುದರಿಂದ ಹೆಣ್ಣು ಮಕ್ಕಳ ಸಂಖ್ಯೆ ಕ್ಷೀಣ

**ವಿಜಯಪುರ:** ದೇಶದಾದ್ಯಂತ ಹೆಣ್ಣು ಭ್ರೂಣ ಹತ್ಯೆ ಹೆಚ್ಚಾಗುತ್ತಿರುವುದರಿಂದ ಹೆಣ್ಣು ಮಕ್ಕಳ ಸಂಖ್ಯೆ ಕ್ಷೀಣಿಸುತ್ತಿದ್ದು, ಹೆಣ್ಣು ಸಮಾಜದ ಕಣ್ಣಾಗಿದ್ದು ಮುಂದೆ ಇದು ಸಮಾಜದ ಮೇಲೆ ಕೆಟ್ಟ ಪರಿಣಾಮ ಬೀರಲಿದೆ ಎಂದು ಅ.ಶಿ.ವೈ ಮಹಿಳಾ ಸಂಘದ ಅಧ್ಯಕ್ಷೆ ಲೀಲಾ ರುದ್ರಮೂರ್ತಿ ತಿಳಿಸಿದರು.

ಇಲ್ಲಿನ ಶ್ರೀ ನಗರೇಶ್ವರಸ್ವಾಮಿ ದೇವಾಲಯದಲ್ಲಿ, ಅ.ಶಿ.ವೈ ನಗರ್ತ ಮಹಿಳಾ ಸಂಘ ಮತ್ತು ಅಕ್ಕನ ಬಳಗದ ಆಶ್ರಯದಲ್ಲಿ ಏರ್ಪಡಿಸಿದ್ದ ಅಟ್ಟಗುಣಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಮಾತನಾಡಿದರು. ಬಹು ಹಿಂದಿನಿಂದಲೂ ನಗರ್ತ ಜನಾಂಗವು ಹೆಣ್ಣು ಮಕ್ಕಳ ಒಳಿತಿಗಾಗಿ ಅಟ್ಟಗುಣಿ ಕಾರ್ಯಕ್ರಮವನ್ನು ಮಹಿಳಾ ಸಂಘದ ವತಿಯಿಂದ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಅಟ್ಟಗುಣಿ ವಿಶೇಷ;- ಬಹಳ ವಿಶೇಷವಾದ ದಿನ ಬನಹುಣ್ಣಿಮೆಯ ಪ್ರಯುಕ್ತ ನಗರ್ತ ಜನಾಂಗದ .2 ವರ್ಷದಿಂದ 12 ವರ್ಷದ ಒಳಗಿನ ಹೆಣ್ಣು ಮಕ್ಕಳಿಂದ ಅಟ್ಟಗುಣಿ ಕಾರ್ಯಕ್ರಮವನ್ನು ಅ. ಶಿ. ವೈ. ನಗರ್ತ ಮಹಿಳಾ ಸಂಘ, ಅಕ್ಕನ ಬಳಗ ಹಾಗೂ ಅ. ಶಿ. ವೈ. ನಗರ್ತ ಮಹಂತಿನ ಮಠ ಧರ್ಮಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಲಾಗಿತ್ತು.

ಸಾಂಪ್ರದಾಯಿಕವಾಗಿ ಪ್ರತಿ ವರ್ಷವೂ ನಗರ್ತ ಮಹಿಳಾ ಸಂಘವು ಆಚರಿಸಿಕೊಂಡು ಬರುತ್ತಿದ್ದು, ಮಕ್ಕಳು ನೂತನ ವಸ್ತ್ರಗಳನ್ನು ಧರಿಸಿ, ದೇವಾಲಯಕ್ಕೆ ಆಗಮಿಸಿ, ಆಚಾರರ ಮನೆಗೆ ತೆರಳಿ,ಆಚಾರರ ಮನೆಯಿಂದ ಹರಿಶಿನದಿಂದ ಸಿಂಗರಿಸಿದ ಗೌರಮ್ಮನವರನ್ನು ತಂದು ಪೂಜಿಸಿ, ಮಕ್ಕಳ ಕಡೆಯಿಂದ ಮೂರು, ಐದು, ಒಂಬತ್ತು ಅಕ್ಕಿಯ ಹಿಟ್ಟಿನಿಂದ ದೀಪಾರತಿ ಮಾಡಿ,ಊರಿನ ಬಾಗಿಲು, ತಿಪ್ಪಮ್ಮ, ಗಾಣದಮ್ಮನಿಗೆ ಮಕ್ಕಳಿಂದ ಪೂಜೆ ಮಾಡಿಸಿ ದೀಪಾರತಿ ಬೆಳಗಿ ಹುಗ್ಗಿಯ ಅನ್ನ ಮೂರು ಹಿಡಿಚೆ ಎಡೆಯಿಟ್ಟು, ಮಾಳಮ್ಮ ದೇವತೆಯನ್ನು ಉಡಿ ತುಂಬಿ, ತಂದು, ಕುದುರು(ಒರಳಿನಲ್ಲಿ ಧಾನ್ಯಗಳನ್ನು ಥಳಿಸುವಾಗ ಹೊರಗೆ ಕಾಳು ಸಿಡಿದು ಹೋಗದಂತೆ ಇಡುವ ಸಾಧನ) ಹಾಗೂ ಓನಕೆಯನ್ನಿಟ್ಟು ಪೂಜೆ ಸಲ್ಲಿಸಿ, ಆರತಿ ತಟ್ಟೆಗಳೊಂದಿಗೆ ಹುಗ್ಗಿಯ ಅನ್ನ ಹಾಗೂ ದೀಪಗಳನ್ನು ಬೆಳಗಿಸಿಕೊಂಡು ಊರಲ್ಲಿ ಮೆರವಣಿಗೆ ಹೊರಟು ಗಾಣಮ್ಮ ಹಾಗೂ ತಿಪ್ಪಮ್ಮನನ್ನು ಊಟಕ್ಕೆ ಆಹ್ವಾನಿಸಿ, ಬಂದು. ವಯಸ್ಸಾದ ವಿಧವೆಯೊಬ್ಬರನ್ನು ಕುಳ್ಳಿರಿಸಿ, ಅವರ ಬೆನ್ನಿಗೆ ಮಕ್ಕಳು ಒಂದೊಂದು ಏಟು ಹೊಡೆದು, ಕಾಣಿಕೆ ನೀಡಿ, ಊಟವಿಟ್ಟು ಗೌರಮ್ಮನಿಗೆ ಅಕ್ಕಿ ಬೆಲ್ಲವನ್ನು ಮಡಿಲು ಕಟ್ಟಿ ಕಳುಹಿಸಲಾಗುವುದು.

ಒಳಿತಿನ ನಂಬಿಕೆ;- ಈ ಆಚರಣೆಯಿಂದ ಮಕ್ಕಳಿಗೆ ಒಳಿತಾಗುತ್ತದೆ ಎಂಬ ನಂಬಿಕೆ ಬಹಳ ಹಿಂದಿನಿಂದಲೂ ಬೇರೂರಿದ್ದು, ಅದಕ್ಕಾಗಿ ಸಾಕ್ಷಿ ಎಂಬಂತೆ ವಿಜಯಪುರ ಹಾಗೂ ಸುತ್ತಮುತ್ತಲ ಊರುಗಳ ಮಹಿಳೆಯರು ತಮ್ಮ ಮಕ್ಕಳನ್ನು ಕರೆದುಕೊಂಡು ಬಂದು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಹಿಳಾ ಸಂಘದ ಮಾಜಿ ಅಧ್ಯಕ್ಷರುಗಳಾದ ಕಲಾ ರುದ್ರಮೂರ್ತಿ, ಮಹದೇವಮ್ಮ ಬಸವರಾಜು, ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದು, ನೂರಾರು ಮಹಿಳೆಯರು ತಮ್ಮ ಮಕ್ಕಳನ್ನು ಕರೆತಂದು, ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



### ನುಡಿ ಜಾತ್ರೆಗೆ ಮದುವಣಗಿತ್ತಿಯಂತೆ ಸಿಂಗಾರಗೊಂಡ ಹುಳಿಯಾರು | ಇಂದು, ನಾಳೆ ಕನ್ನಡ ಜಾತ್ರೆ

# ಹುಳಿಯಾರಿನಲ್ಲಿ ಜಿಲ್ಲೆಯ ಪ್ರಥಮ ಮಹಿಳಾಧ್ಯಕ್ಷರ ಸಾಹಿತ್ಯ ಸಮ್ಮೇಳನ

● ಹುಳಿಯಾರ್ ಕಿರಣ್ ಹುಳಿಯಾರು

ಕನ್ನಡ ಸಾಹಿತ್ಯ ಪರಿಷತ್ತಿಗೆ ರಾಜ್ಯದಲ್ಲೇ ಅತೀ ಹೆಚ್ಚು ಸದಸ್ಯತ್ವ ಪಡೆದ ಮೊದಲ ಹೋಬಳಿ ಕೇಂದ್ರ ಹುಳಿಯಾರು. ರಾಜ್ಯದಲ್ಲೇ ಪಾಕ್ಷಿಕ ಕನ್ನಡ ಕವಿಕಾವ್ಯ ಗೋಷ್ಠಿ ಆರಂಭಿಸಿ 5 ವರ್ಷಗಳ ಕಾಲ ನಿರಂತರವಾಗಿ ನಡೆಸಿದ ಮೊದಲ ಕಸಾಪ ಘಟಕ ಹುಳಿಯಾರು. ಹೋಬಳಿ ಕೇಂದ್ರಕ್ಕೆ ಕಸಾಪ ಮತದಾನ ಕೇಂದ್ರ ಆರಂಭಕ್ಕೆ ಮುನ್ನುಡಿ ಬರೆದಿದ್ದು ಹುಳಿಯಾರು. ಹೀಗೆ ಕನ್ನಡ ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳಲ್ಲಿ ಮೊದಲ ಪಂಕ್ತಿ ಹಾಕಿ ರಾಜ್ಯದ ಸಾಹಿತ್ಯ ವಲಯದಲ್ಲಿ ಹುಳಿಯಾರು ಛಾಪು ಮೂಡಿಸಿದೆ. ಈಗ ಸಾಹಿತ್ಯ ಸಮ್ಮೇಳನದಲ್ಲೂ ಹುಳಿಯಾರು ಕೀತಿಯ ಮುಕುಟಕ್ಕೆ ಮತ್ತೊಂದು ಗರಿ ಲಭಿಸಿದೆ. ಹುಳಿಯಾರಿನಲ್ಲಿ ಜನವರಿ 30 ಮತ್ತು 31 ರಂದು ನಡೆಯುತ್ತಿರುವ ಕನ್ನಡ ಸಾಹಿತ್ಯ ಸಮ್ಮೇಳನ ಜಿಲ್ಲೆಯ ಮೊದಲ ಮಹಿಳಾ ಸಮ್ಮೇಳನಾಧ್ಯಕ್ಷತೆಯ ಸಾಹಿತ್ಯ ಸಮೇಳನ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಹೌದು ತುಮಕೂರು ಜಿಲ್ಲೆಯಲ್ಲಿ ಇಲ್ಲಿಯವರೆವಿಗೆ 15 ಸಾಹಿತ್ಯ ಸಮ್ಮೇಳನಗಳು ಜರುಗಿದ್ದು ಇವೆಲ್ಲವೂ ಪುರುಷ ಸಮ್ಮೇಳನಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಜರುಗಿದೆ. ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ನಡೆದ 10 ಸಾಹಿತ್ಯ ಸಮ್ಮೇಳನಗಳ ಅಧ್ಯಕ್ಷತೆಯನ್ನೂ ಪುರುಷರು ವಹಿಸಿಕೊಂಡಿದ್ದಾರೆ. ಆದರೆ ಇದೇ ಮೊದಲ ಬಾರಿಗೆ ಮಹಿಳೆಯ ಸಮ್ಮೇಳನಾಧ್ಯಕ್ಷತೆಯಲ್ಲಿ ಹುಳಿಯಾರು ಸಾಹಿತ್ಯ ಸಮ್ಮೇಳನ ರೂಪುಗೊಂಡಿದೆ. ಚಿಕ್ಕನಾಯಕನಹಳ್ಳಿಯಲ್ಲಿ ಹುಟ್ಟಿ ಜಿಲ್ಲೆಯ ಸಾಹಿತ್ಯ ವಲಯದಲ್ಲಿ ಖ್ಯಾತರೆನಿಸಿರುವ ಪ್ರೊ.ಕೃಷ್ಣಬಾಯಿ ಹಾಗಲವಾಡಿ ಈ ಕೀರ್ತಿಗೆ ಭಾಜನರಾಗಿದ್ದಾರೆ. ಇದೇ ಮೊದಲಿಗೆ ನಡೆಯುತ್ತಿರುವ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಹುಳಿಯಾರು ಸಂಪೂರ್ಣ ಸಜ್ಜಾಗಿದೆ. ಎಲ್ಲ ದಿಕ್ಕುಗಳಲ್ಲೂ ತಾಲೂಕು ಸಾಹಿತ್ಯ ಸಮ್ಮೇಳನಕ್ಕೆ ಕನ್ನಾಡಾಭಿಮಾನಿಗಳನ್ನು ಬರಮಾಡಿಕೊಳ್ಳಲು ಸ್ವಾಗತ ಕಮಾನು ಅಳವಡಿಸಲಾಗಿದೆ. ತಳಿರು ತೋರಣ ಕಟ್ಟಲಾಗಿದೆ. ಎಂಪಿಎಸ್ ಮೈದಾನದಲ್ಲಿ ನಡೆಯುವ ಸಮ್ಮೇಳನಕ್ಕಾಗಿ ಈಗಾಗಲೇ ವೇದಿಕೆ, ಶಾಮಿಯಾನ ಸಿದ್ಧಗೊಳಿಸಲಾಗಿದೆ. ಎಲ್ಲೆಡೆ ಕಟೌಟ್, ಸ್ವಾಗತ ಕಮಾನು, ಬ್ಯಾನರ್, ಕನ್ನಡ ಬಾವುಟಗಳು ಹಾರಾಡುತ್ತಿದ್ದು, ಸಾಹಿತ್ಯ ಪ್ರಿಯರನ್ನು ಕೈಬೀಸಿ ಕರೆಯುತ್ತಿದೆ. ಮಂಗಳವಾರ ಮತ್ತು ಬುಧವಾರ ಎರಡು ದಿನಗಳ ಕಾಲ ನಡೆಯುವ ಸಮ್ಮೇಳನ ಕಣ್ತುಂಬಿಕೊಳ್ಳಲು ಜನರು ತುದಿಗಾಲು ಮೇಲೆ ನಿಂತಿದ್ದಾರೆ. ಶಿಕ್ಷಕರು, ಕನ್ನಡ ಪರ ಸಂಘಟನೆಗಳು, ಯುವಕರು, ವಿದ್ಯಾರ್ಥಿಗಳು ಬೈಕ್‌ಗಳಿಗೆ ಕನ್ನಡ ಬಾವುಟ ಹಾಕಿಕೊಂಡು ಸಂಭ್ರಮಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಸಮ್ಮೇಳನದ ಮಹಾಮಂಟಪಕ್ಕೆ ಹುಳಿಯಾರು ಹೋಬಳಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಕಟ್ಟಿ ಬೆಳಸಿದ ದಿವಂಗತ ತ.ಶಿ.ಬಸವಮೂರ್ತಿ ಅವರ ಹೆಸರಿಡಲಾಗಿದೆ. ವೇದಿಕೆಗೆ ಶ್ರೇಷ್ಠದಾನಿ ಟಿ.ಆರ್.ಶ್ರೀನಿವಾಸಶೆಟ್ಟಿ, ಮಹಾದ್ವಾರಗಳಿಗೆ ಕರವೇಯ ಕೋಳಿಶ್ರೀನಿವಾಸ್, ದಾನಿ ಕೆಂಕೆರೆ ಬಸಪ್ಪ, ಲಕ್ಷ್ಮೀಕಾಂತಶೆಟ್ಟು, ಕೆಂಕೆರೆ ಮರುಳಯ್ಯ, ಪುಸ್ತಕ ಮಳಿಗೆಗೆ ಮಿತ್ರ ಮಂಡಲಿ ಟುಟ್ಯೋರಿಯಲ್‌ನ ಬಿ.ಮರುಗಳಯ್ಯ, ಗುಡಿ ಕೈಗಾರಿಕೆ ಮಳಿಗೆಗೆ ಕನ್ನಡ ಸಂಘದ ಅನಂತರಾಮಯ್ಯ, ಜನಪದ ಪ್ರದರ್ಶನಕ್ಕೆ ನುಲೇನೂರು ಕದರಮ್ಮ, ಚಿತ್ರಕಲಾ ಪ್ರದರ್ಶನಕ್ಕೆ ಎ.ಡಿ.ಸುದರ್ಶನಾಚಾರ್ ಹೆಸರಿಡಲಾಗಿದೆ.

### 11 ನೇ ಸಮ್ಮೇಳನದಲ್ಲಿ ಸಮ್ಮಾನಿತರಾಗುವವರು

ಸಿ.ಎಚ್.ದೇವರಾಜು (ಮೂಡಲಪಾಳ್ಯ), ಮೋಹನ್ ಕುಮಾರ್ ಜಿ.ಎಸ್. (ಸೋಮನಕುಣಿತ), ಕುಮಾಸ್ವಾಮಿ ಸಿ.ಎ. (ಮೂಡಲಪಾಯ), ಎಂ.ಶರತ್ (ರಂಗಭೂಮಿ), ಸಿ.ಸುರೇಶ್ (ರಂಗಭೂಮಿ), ದಿಬ್ಬದಹಳ್ಳಿ ವೆಂಕಟೇಶ್ (ರಂಗಭೂಮಿ), ಪದ್ಮವರದರಾಜ್ (ಸಂಗೀತ), ಸುದರ್ಶನ ಚೌಡಿಕೆ (ಶಿಕ್ಷಣ), ಸಿ.ಟಿ.ವಿಜಯಲಕ್ಷ್ಮಿ (ಶಿಕ್ಷಣ), ಕೆ.ಮಾರುತಿ (ಕಲೆ), ತಿಮ್ಮಯ್ಯ (ಕಲೆ), ಹೆಸರಹಳ್ಳಿ ರಾಜಕುಮಾರ್ (ರಂಗಭೂಮಿ), ಗೋಪಾಲರಾವ್ (ಸಾಂಸ್ಕೃತಿಕ), ಚನ್ನಬಸವಯ್ಯ (ಜನಪದ), ಕಾಂತರಾಜು (ರಂಗಭೂಮಿ), ವಿ.ರಮೇಶ್ (ನೀರುಗಂಟಿ), ಡಾ.ಕೆ.ಪಿ.ರಾಜಶೇಖರ್ (ವೈದ್ಯಕೀಯ), ಗೌರಮ್ಮ (ರಂಗಭೂಮಿ), ಅನಂತವೇಣಿ (ರಂಗಭೂಮಿ), ಸಣ್ಣರಾಜಪ್ಪ (ಡೋಲುವಾದಕ), ಕೆ.ಎಸ್.ಕೃಷ್ಣಮೂರ್ತಿ (ಗೃಹ ರಕ್ಷಕ ದಳ), ಎ.ಸೋಮಶೇಖರ್ (ಕಲೆ), ರಂಗನಾಥ್ (ಸಿರಿಧಾನ್ಯ), ಪ್ರೇಮಾಗೋಪಾಲ್ (ಕಲೆ), ತಿಮ್ಮಯ್ಯ ಕೆ.ಟಿ.ಕಲ್ಲೇನಹಳ್ಳಿ (ಕೃಷಿ), ಸಿದ್ದನಕಟ್ಟೆ ಶ್ರೀನಿವಾಸ್ (ಧಾರ್ಮಿಕ), ಸಿದ್ದೇಶ್ (ಸಮಾಜಸೇವೆ), ಟಿ.ವಿ.ಕಾಂತರಾಜು (ಜನಪದ), ಡಾ.ಜಿ.ಲಕ್ಷ್ಮೀಕಾಂತ್ (ಜನಪದ), ತಿಪ್ಪೇಸ್ವಾಮಿ (ಕೃಷಿ), ಡಾ.ಸಿದ್ಧರಾಮಯ್ಯ (ವೈದ್ಯಕೀಯ), ಡಾ.ಚನ್ನಮಲ್ಲಯ್ಯ (ವೈದ್ಯಕೀಯ), ಜಬೀಉಲ್ಲಾ (ಸಮಾಜಸೇವೆ), ಎಲ್.ಧನಂಜಯ (ಶಿಕ್ಷಣ), ವೆಂಕಟಚಲಪತಿ ಶೆಟ್ಟಿ (ಸ್ವಾತಂತ್ರ್ಯ ಹೋರಾಟ), ವರದರಾಜು (ಮಾಜಿ ಯೋಧ), ಡಿ.ಸಿದ್ಧಪ್ಪ (ಶಿಕ್ಷಣ), ಡಾ.ಜಿ.ಪುರುಷೋತ್ತಮ (ವೈದ್ಯ ಸಾಹಿತ್ಯ), ಸಿ.ಎಲ್.ಸುನಂದಮ್ಮ (ಸಾಹಿತ್ಯ), ಸುಗುಣಾದೇವಿ (ಸಾಹಿತ್ಯ), ಎಚ್.ಎ.ರಮೇಶ್ (ಪತ್ರಿಕೋದ್ಯಮ), ಕೆ.ಜಿ.ಕೃಷ್ಣೇಗೌಡ (ಕನ್ನಡಸೇವೆ), ಕೆ.ಪಿ.ಗೌರಮ್ಮ (ರಂಗಭೂಮಿ), ಮಲ್ಲಿಕಾರ್ಜುನ ಸ್ವಾಮಿ (ಪತ್ರಿಕೋದ್ಯಮ), ಕಂಟಲಗೆರೆ ನಾಗೇಂದ್ರಪ್ಪ (ಪತ್ರಿಕೋದ್ಯಮ), ವಾಹೇದ್ ಖಾನ್ (ಪಾರಂಪರಿಕ ವೈದ್ಯ)

### ಪ್ರೊ.ಕೃಷ್ಣಾಬಾಯಿ ಹಾಗಲವಾಡಿ ಪರಿಚಯ

1954 ಅಕ್ಟೋಬರ್ 6 ರಂದು ಚಿಕ್ಕನಾಯಕನಹಳ್ಳಿಯಲ್ಲಿ ಹುಟ್ಟಿದ ಇವರು ಎಂಎ ಕನ್ನಡ, ಎಂಎ ಇತಿಹಾಸ, ಬಿಇಡಿ ಪದವಿ ಪಡೆದು ಉಪನ್ಯಾಸಕಿಯಾಗಿ ಪ್ರಾಂಶುಪಾಲೆಯಾಗಿ ಸೇವೆ ಸಲ್ಲಿಸಿ ನಿವೃತ್ತಿಯಾಗಿದ್ದಾರೆ.

ವೀರಮಾತೆ ಅಹಿಲ್ಯಾಬಾಯಿ ಹೋಳ್ಕರ್, ದಾನ ಚಿಂತಾಮಣಿ ಅತ್ತಿಮಬ್ಬೆ ನಾಟಕಗಳು, 'ಧರ್ಮ ಸಂಸ್ಥಾನ' (ಹಗಲವಾಡಿ ಸಂಸ್ಥಾನ ಕುರಿತು), ಸ್ತ್ರೀರತ್ನ ರಾಣಿ ಅಹಲ್ಯಾಬಾಯಿ ಹೋಳ್ಕರ್ ಐತಿಹಾಸಿಕ ಕಾದಂಬರಿ ಬರೆಯುವ ಜೊತೆಗೆ ಕಥಾಸಂಕಲನ. ಕಾವ್ಯ ಸಂಕಲನ. ಭಾವಗೀತೆ ಸಂಕಲನಗಳನ್ನು ರಚಿಸಿದ್ದಾರೆ. ಅಲ್ಲದೆ ಅನೇಕ ಪತ್ರಿಕೆಗಳಲ್ಲಿ ಲೇಖನಗಳು, ಯೂಟ್ಯೂಬ್ ಚಾನಲ್ನಲ್ಲಿ ಸಂಸ್ಕೃತಿ, ಇತಿಹಾಸ, ಜಾನಪದದ ಬಗ್ಗೆ ಮಾಹಿತಿ ನೀಡುತ್ತಿದ್ದಾರೆ. ವೀರ ಮಾತೆ ಅಹಿಲ್ಯಾಬಾಯಿ ಹೋಳ್ಕರ್ ನಾಟಕಕ್ಕೆ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಕಾಕೋಡು ಸರೋಜಮ್ಮ ದತ್ತಿ ಪ್ರಶಸ್ತಿ. ದಾನ ಚಿಂತಾಮಣಿ ಅತ್ತಿಮಬ್ಬೆ ನಾಟಕಕ್ಕೆ ಕರ್ನಾಟಕ ಲೇಖಕಿಯರ ಸಂಘದಿಂದ ಇಂದಿರಾವಾಣಿ ಪ್ರಶಸ್ತಿ, ಬಿ.ಬಿ.ಎಂ.ಪಿ ಯಿಂದ ಉತ್ತಮ ಶಿಕ್ಷಕಿ ಪ್ರಶಸ್ತಿ, ಅಲ್ಲದೆ ಕೆಂಪೇಗೌಡ ಪ್ರಶಸ್ತಿ, ಕೈಲಾಸಂ ದತ್ತಿ ಪ್ರಶಸ್ತಿ, ಕನ್ನಡ ಸೇವಾ ರತ್ನ ಪ್ರಶಸ್ತಿ, ಕನ್ನಡ ರತ್ನ ಪ್ರಶಸ್ತಿ ಜೊತೆಗೆ ಗುಬ್ಬಿ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸನ್ಮಾನಿತರಾಗಿದ್ದಾರೆ. 'ರಾಮಾಮೃತ ಮಾಸಿಕ ಪತ್ರಿಕೆಯ ಸ್ಥಾಪಕ ಸಂಪಾದಕಿ, ಇತಿಹಾಸ ಅಕಾಡೆಮಿ ಸದಸ್ಯೆ. ಕರ್ನಾಟಕ ರಾಜ್ಯ ಲೇಖಕಿಯರ ಸಂಘ, ವಾತ್ಸಲ್ಯ ಮಹಿಳಾ ಸಂಘ, ಆದರ್ಶ ಮಹಿಳಾ ಸಂಘ, ಕರ್ನಾಟಕ ಅಹಿಲ್ಯಾಬಾಯಿ ಹೋಳ್ಕರ್ ಮಹಿಳಾ ಸಂಘ, ಕನಕವನ ಸಂಘ, ಅಕ್ಕಮಹಾದೇವಿ ಸಂಘ, ವಿಜಯನಗರ ಹಿರಿಯ ನಾಗರೀಕರ ಸಂಘ, ವಿಜಯನಗರ ಮಾರುತಿ ನಗೆಯೋಗ ಸಂಘಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

## ಸಂಜೆ ಟಿಪ್ಸ್



## ಭಾರತದ ಸಾಫ್ಟೆಸ್ಟ್ ಡ್ರೈಪರ್ ಎನಿಸಿಕೊಂಡ ಪ್ಯಾಂಪರ್ಸ್ ಪ್ರೀಮಿಯಂ ಕೇರ್

ಭಾರತದ ತಂತ್ರಜ್ಞಾನ ಕಂಪನಿ ಡೇಟಾ ಎಕ್ಸ್ ಜೆನ್ ಟೆಕ್ನಾಲಜೀಸ್ ಇಂದು ರಾಮ ಮಂದಿರ ಪುನರ್ ನಿರ್ಮಾಣಕ್ಕೆ ವಿಶೇಷವಾಗಿ ಭಗವಾನ್ ರಾಮನ ಪ್ರತಿಷ್ಠಾಪನೆಯ ಸಂಭ್ರಮಾಚರಣೆಗೆಂದೇ ಹೊಸ ಇಮೇಲ್ ಸೇವೆಯನ್ನು ಪ್ರಾರಂಭಿಸಿದೆ. ಈ ಸೇವೆಯು ಪ್ರಾರಂಭದಲ್ಲಿ ಹಿಂದಿಯಲ್ಲಿ ಪ್ರಾರಂಭಿಸಲಾಗಿದ್ದು ಈ ಬಿಡುಗಡೆಯ ಕಾರ್ಯಕ್ರಮವು ಅತ್ಯಂತ ನಿರೀಕ್ಷೆಯ ರಾಮ ಲಲ್ಲಾನ ಪ್ರಾಣ ಪ್ರತಿಷ್ಠಾಪನೆಯ ಜನವರಿ 22ರಂದೇ ಪ್ರಾರಂಭಿಸಲಾಗುತ್ತದೆ. ಡೇಟಾ ಎಕ್ಸ್ ಜೆನ್ ಟೆಕ್ನಾಲಜೀಸ್ ಜೈ ಶ್ರೀರಾಮ್.ಭಾರತ್ ಡೊಮೈನ್ ಹೆಸರಿನಲ್ಲಿ ಇಮೇಲ್ ಸೇವೆಯನ್ನು ಪ್ರಾರಂಭಿಸಿದ್ದು ಈ ಸೇವೆಯನ್ನು ಪಡೆಯಲು ವ್ಯಕ್ತಿಗಳು ಆಂಡ್ರಾಯಿಡ್ ಮತ್ತು ಆಪಲ್ ಆಪ್ ಮಳಿಗೆಗಳಿಂದ ಡೇಟಾಮೈಲ್ (ಆಂಖಿಂಒಂಖಐ) ಅನ್ನು ಡೌನ್ ಲೋಡ್ ಮಾಡಿಕೊಳ್ಳಬಹುದು ಮತ್ತು ಉಚಿತವಾಗಿ ಈ ಅನುಕೂಲಗಳನ್ನು ಬಳಸಿಕೊಳ್ಳಬಹುದು. ಈ ಸೇವೆಯು ಮೊಬೈಲ್ ಇಮೇಲ್ ಅಪ್ಲಿಕೇಷನ್ ಗಳು ಮತ್ತು ವೆಬ್ ಮೂಲಕ ಯಾವುದೇ ಡಿವೈಸ್ ನಲ್ಲಿ ಲಭ್ಯವಿರುತ್ತದೆ. ಈ ಉಪಕ್ರಮಕ್ಕೆ ತಮ್ಮ ಉತ್ಸಾಹ ವ್ಯಕ್ತಪಡಿಸಿದ ಡೇಟಾ ಎಕ್ಸ್ ಜೆನ್ ಸಂಸ್ಥಾಪಕ ಮತ್ತು ಸಿಇಒ ಶ್ರೀ ಅಜಯ್ ಡೇಟಾ, ''ರಾಮ ಮಂದಿರದ ಪುನರ್ ನಿರ್ಮಾಣ ಗಮನಾರ್ಹ ಮೈಲಿಗಲ್ಲಾಗಿದೆ ಮತ್ತು ಈ ಹೊಸ ಅಧ್ಯಾಯಕ್ಕೆ ಕೊಡುಗೆ ನೀಡಲು ಬಹಳ ಹೆಮ್ಮೆ ಪಡುತ್ತೇವೆ. ಡೇಟಾ ಎಕ್ಸ್ ಜೆನ್ ನ ಗುರಿ ಸದಾ ತಾಂತ್ರಿಕ ಸುಧಾರಣೆಗಳೊಂದಿಗೆ ಸಮಾಜದ ಅನುಕೂಲಕ್ಕೆ ಶ್ರಮಿಸುವುದು ಮತ್ತು ಈ ಇಮೇಲ್ ಸೇವೆಯಿಂದ ನಾವು ಜನರಿಗೆ ಇಮೇಲ್ ಅನುಕೂಲಗಳನ್ನು ಬಳಸಲು ಸುರಕ್ಷಿತ ಮತ್ತು ಸುಲಭವಾದ ಮಾರ್ಗವನ್ನು ಒದಗಿಸುತ್ತಿದ್ದೇವೆ ಮತ್ತು ಅದು ಆಧ್ಯಾತ್ಮಕ್ಕೂ ಪೂರಕವಾಗಿರುತ್ತದೆ ಎಂದರು. ಶೇ.88ರಷ್ಟು ಭಾರತದ ನಾಗರಿಕರು ಸ್ಥಳೀಯ ಭಾಷೆಗಳಲ್ಲಿ ಪ್ರಾಥಮಿಕವಾಗಿ ಸಂವಹನ ನಡೆಸುವುದರಿಂದ ನಮ್ಮ ಇಮೇಲ್ ಸೇವೆ ಅವರ ಭಾಷೆಯಲ್ಲಿ ದೊರೆಯುವಂತೆ ಮಾಡುವುದು ಬಹಳ ಮುಖ್ಯ. ಹಿಂದಿ ಪ್ರಮುಖ ಭಾಷೆಯಾಗಿ ನಾವು ಜೈ ಶ್ರೀರಾಮ್.ಭಾರತ್ ಅನ್ನು ಪ್ರಾರಂಭಿಸಿದ್ದು ನಂತರದಲ್ಲಿ ಇತರೆ ಭಾಷೆಗಳಲ್ಲೂ ಲಭ್ಯವಾಗಲಿದೆ ಎಂದು ಅಜಯ್ ಡೇಟಾ ಹೇಳಿದರು.

## ನಿಪ್ಪಟ್ಟು ಮಸಾಲಾ

### ಪಾಕ ಶಾಲೆ



### ಮಾಡುವ ವಿಧಾನ

ಮೊದಲು ಒಂದು ನಿಪ್ಪಟ್ಟು ತೆಗೆದುಕೊಂಡು ಚೆನ್ನಾಗಿ ಅದಕ್ಕೆ ಟೊಮೆಟೋ ಸಾಸ್ ಹಚ್ಚಿ, ನಂತರ ಪುದೀನಾ ಮತ್ತು ಹಸಿ ಮೆಣಸಿನಕಾಯಿ ಪೇಸ್ಟ್, ಉಪ್ಪು, ಗರಂ ಮಸಾಲಾ, ಟೊಮೆಟೋ, ಈರುಳ್ಳಿ, ಕ್ಯಾರೆಟ್, ಕೊತ್ತಂಬರಿ ಸೊಪ್ಪು, ಹುಣಸೆ ಮತ್ತು ಬೆಲ್ಲದ ಪೇಸ್ಟ್ ಹಾಕಿ ಅದರ ಮೇಲೆ ಓಂ ಪುಡಿ ಹಾಕಿದರೆ ನಿಪ್ಪಟ್ ಮಸಾಲಾ ಸವಿಯಲು ಸಿದ್ಧ.

### ಬೇಕಾಗಿರುವ ಪದಾರ್ಥ

ನಿಪ್ಪಟ್ಟು, ಓಂ ಪುಡಿ, ಹಸಿ ಮೆಣಸಿನಕಾಯಿ, ಟೊಮೆಟೋ ಸಾಸ್, ಉಪ್ಪು, ಪುದೀನಾ, ಗರಂ ಮಸಾಲಾ, ಕೊತ್ತಂಬರಿ ಸೊಪ್ಪು, ಟೊಮೆಟೋ, ಈರುಳ್ಳಿ, ಕ್ಯಾರೆಟ್, ಬೆಲ್ಲ ಮತ್ತು ಹುಣಸೆ ಹಣ್ಣಿನ ಪೇಸ್ಟ್.

# ಮಗಳ ಪರ ಸೂಪರ್ ಸ್ಟಾರ್ ರಜನಿಕಾಂತ್ ಬ್ಯಾಟಿಂಗ್



ನನ್ನ ಮಗಳು ಸಂಘಿ ಎನ್ನುವುದು ಕೆಟ್ಟ ಶಬ್ದ ಎಂದು ಎಂದಿಗೂ ಹೇಳಿಲ್ಲ. ನನ್ನ ತಂದೆಯನ್ನು ಏಕೆ ಬ್ರ್ಯಾಂಡ್ ಮಾಡುತ್ತೀರಿ ಎಂದಷ್ಟೇ ಕೇಳಿದ್ದಾರೆ ಎಂದು ಸೂಪರ್ ಸ್ಟಾರ್ ರಜನಿಕಾಂತ್ ಸ್ಪಷ್ಟನೆ ನೀಡಿದ್ದಾರೆ. ರಜನಿಕಾಂತ್ ಅವರು ತಮ್ಮ ಮುಂಬರುವ ಚಿತ್ರ ಲಾಲ್ ಸಲಾಮ್ ಸಿನಿಮಾ ಆಡಿಯೋ ಬಿಡುಗಡೆ ಸಮಾರಂಭದಲ್ಲಿ ಮಗಳು ಐಶ್ವರ್ಯಾ ರಜನಿಕಾಂತ್ ಅವರ ಇತ್ತೀಚಿನ ಹೇಳಿಕೆಯ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ.

ಇಂದು, ಚೆನ್ನೈ ವಿಮಾನ ನಿಲ್ದಾಣದ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ರಜನಿಕಾಂತ್ ಅವರು, ಆಡಿಯೋ ಲಾಂಚ್ ವೇಳೆ ಮಾತನಾಡಿದ ಐಶ್ವರ್ಯಾ ಅವರ ಹೇಳಿಕೆಯನ್ನು ರಜನಿಕಾಂತ್ ಸಮರ್ಥಿಸಿಕೊಂಡಿದ್ದಾರೆ. 'ನನ್ನ ಮಗಳು ಸಂಘಿ ಎನ್ನುವುದು ಕೆಟ್ಟ ಶಬ್ದ ಎಂದು ಎಂದಿಗೂ ಹೇಳಿಲ್ಲ. ನನ್ನ ತಂದೆಯನ್ನು ಏಕೆ ಬ್ರ್ಯಾಂಡ್ ಮಾಡುತ್ತೀರಿ ಎಂದಷ್ಟೇ ಕೇಳಿದ್ದಾರೆ ಎಂದಿದ್ದಾರೆ. ಆಡಿಯೋ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಐಶ್ವರ್ಯ, ನಾನು ಸಾಮಾನ್ಯವಾಗಿ ಸೋಷಿಯಲ್ ಮೀಡಿಯಾದಿಂದ ದೂರ ಇರುತ್ತೇನೆ. ಆದರೆ ನನ್ನ ತಂಡ ಹೊರಗಡೆ ಏನಾಗುತ್ತಿದೆ ಎಂದು ಅಪ್ಡೇಟ್ ಮಾಡುತ್ತಲೇ ಇರುತ್ತಾರೆ. ಕೆಲವು ಪೋಸ್ಟ್‌ಗಳನ್ನು ತೋರಿಸುತ್ತಲೇ ಇರುತ್ತಾರೆ. ಅವುಗಳನ್ನು ನೋಡಿ ನನಗೆ ಕೋಪ ಬರುತ್ತಿತ್ತು. ನಾವೂ ಮನುಷ್ಯರು. ಇತ್ತೀಚಿನ ದಿನಗಳಲ್ಲಿ, ಅನೇಕ ಜನರು ನನ್ನ ತಂದೆ ಸಂಘಿ ಎಂದು ಕರೆದಿದ್ದಾರೆ. ಇನ್ನು ಅದರ ಅರ್ಥವೇನೆಂದು ನನಗೆ ತಿಳಿದಿರಲಿಲ್ಲ, ನಂತರ ನಾನು ಸಂಘಿ ಪದದ ಅರ್ಥ ತಿಳಿದಾಗ, ನಿರ್ದಿಷ್ಟ ರಾಜಕೀಯ ಪಕ್ಷವನ್ನು ಬೆಂಬಲಿಸುವ ಜನರನ್ನು ಸಂಘಿ ಎಂದು ಕರೆಯುತ್ತಾರೆ ಎಂದು ಹೇಳಿದರು. ಅಷ್ಟೇ ಅಲ್ಲದೇ ಸಂಘಿ ಆಗಿದ್ದರೆ ಲಾಲ್ ಸಲಾಂ ಅಂಥ ಸಿನಿಮಾ ಮಾಡುತ್ತಿರಲಿಲ್ಲ' ಎಂದಿದ್ದರು. ಮಗಳ ಹೇಳಿಕೆ ಕೇಳಿ ರಜನಿಕಾಂತ್ ಅವರು ಕಣ್ಣೀರು ಹಾಕಿದ್ದರು. ಈ ವಿಡಿಯೋ ವೈರಲ್ ಆಗಿತ್ತು.



# ತೂಕ ಹೆಚ್ಚಳ ಇರಲಿ ಜಾಗ್ರತೆ

### ಹೆಲ್ತ್ ಟಿಪ್ಸ್



ಇತ್ತೀಚಿನ ದಿನಗಳಲ್ಲಿ ತೂಕದ ಸಮಸ್ಯೆ ಹೆಚ್ಚಿನ ಜನರನ್ನು ಕಾಡುತ್ತಿದೆ. ಕೆಲವರು ತೂಕ ಹೆಚ್ಚಳ ಸಮಸ್ಯೆಯಿಂದ ಬಳಲುತ್ತಿದ್ದರೆ, ಇನ್ನೂ ಕೆಲವರು ತೂಕ ನಷ್ಟದ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಆದರೆ ಕೆಲವರ ತೂಕ ವೇಗವಾಗಿ ಹೆಚ್ಚುತ್ತಿದೆ. ಆದರೆ ಇದನ್ನು ನಿರ್ಲಕ್ಷಿಸಬೇಡಿ, ಯಾಕೆಂದರೆ ಇದರಿಂದ ಗಂಭೀರ ಕಾಯಿಲೆಗಳು ಉಂಟಾಗುಬಹುದು.

ತೂಕ ನಿಯಂತ್ರಣದಲ್ಲಿಡಲು ಸಮತೋಲಿತ ಆಹಾರ, ವ್ಯಾಯಾಮ, ಸಾಕಷ್ಟು ನಿದ್ರೆಯ ಅವಶ್ಯಕತೆ ಇರುತ್ತದೆ. ಹಾಗಾಗಿ ನೀವು ತೂಕ ಹೆಚ್ಚಾಗಲು ಅತಿಯಾಗಿ ಆಹಾರ ಸೇವಿಸಿದರೆ ಇದರಿಂದ ರಕ್ತದಲ್ಲಿ ಸಕ್ಕರೆ ಪ್ರಮಾಣ ಹೆಚ್ಚಾಗಿ ಮಧುಮೇಹ ಸಮಸ್ಯೆ ಕಾಡಬಹುದು. ಅತಿಯಾದ ತೂಕ ಹೆಚ್ಚಳ ಪಿತ್ತಕೋಶ ಮತ್ತು ಕಿಡ್ನಿ ಸ್ಟೋನ್ ಸಮಸ್ಯೆಗ ಕಾರಣವಾಗಬಹುದು. ಅತಿಯಾದ ದೇಹವನ್ನು ಹೊಂದಿರುವುದರಿಂದ ದೇಹದಲ್ಲಿ ನಿರ್ಜಲೀಕರಣ ಸಮಸ್ಯೆಗೆ ಕಾರಣವಾಗಿ ಪಿತ್ತಕೋಶ ಮತ್ತು ಕಿಡ್ನಿಯಲ್ಲಿ ಸ್ಟೋನ್ ಆಗಬಹುದು. ದೇಹದ ತೂಕ ಹೆಚ್ಚಾದಾಗ ಕೀಲುಗಳ ಮೇಲೆ ಹೆಚ್ಚಿನ ಒತ್ತಡ ಬೀಳುತ್ತದೆ. ಇದರಿಂದ ಮೊಣಕಾಲು, ಸೊಂಟ, ಬೆನ್ನಿನ ಮೇಲೆ ಪರಿಣಾಮ ಬಿದ್ದು ಕೀಲು ನೋವಿನ ಸಮಸ್ಯೆ ಉಂಟಾಗುತ್ತದೆ. ತೂಕ ಹೆಚ್ಚಳದಿಂದ ನಿದ್ರೆಯಲ್ಲಿ ಉಸಿರುಗಟ್ಟಿದಂತಾಗುತ್ತದೆ. ಸರಿಯಾಗಿ ಉಸಿರಾಡಲು ಸಾಧ್ಯವಾಗುವುದಿಲ್ಲ. ಇದರಿಂದ ಹೃದಯದ ಕಾಯಿಲೆ ಮತ್ತು ಪಾರ್ಶ್ವವಾಯು ಅಪಾಯ ಹೆಚ್ಚಾಗಬಹುದು. ತೂಕ ಹೆಚ್ಚಳದಿಂದ ಲಿವರ್ ಸಮಸ್ಯೆ ಹೆಚ್ಚಾಗುತ್ತದೆ. ಇದರಿಂದ ಕ್ಯಾನ್ಸರ್ ನಂತಹ ಗಂಭೀರ ಕಾಯಿಲೆಯ ಅಪಾಯವಿರುತ್ತದೆ ಮತ್ತು ಫಲವತ್ತತೆಯ ಮೇಲೂ ಪರಿಣಾಮ ಬೀರುತ್ತದೆ.

# ರಂಗ ಶಂಕರ ಕನ್ನಡ ನಾಟಕೋತ್ಸವ



ರಂಗ ಶಂಕರ ತನ್ನ ಹಿಂದಿನ ಎರಡು ಕಾರ್ಯಕ್ರಮಗಳನ್ನು ?ಲೋಕ ಸಂಚಾರ ಮತ್ತು ಮೇಕಿಂಗ್ ಥಿಯೇಟರ್ ?ಒಂದು ಮಾಡಿ ಈ ಹೊಸ ಪ್ರಯೋಗಕ್ಕೆ ಮುಂದಾಗಿದೆ.

ಈ ಹಿಂದೆಯೂ ಕೂಡಾ ಒಂದು ಕನ್ನಡ ನಾಟಕೋತ್ಸವವನ್ನು ಬೆಳಗಾವಿಯಲ್ಲಿ ಏರ್ಪಡಿಸಲಾಗಿತ್ತು. ಅದಾದ ನಂತರ ಬಂದೆರಗಿದ ಕೋವಿಡ್ ಮಹಾಮಾರಿಯಿಂದಾಗಿ ಈ ಉತ್ಸವವನ್ನು ಮುಂದುವರೆಸಲಾಗಲಿಲ್ಲ.

ಈಗ ಅದೇ ಕನ್ನಡ ನಾಟಕೋತ್ಸವವನ್ನು ಹೊಸ ರೂಪದಲ್ಲಿ, ಯುವ ನಿರ್ದೇಶಕರಿಗಾಗಿ ರಂಗ ಶಂಕರ ಪ್ರಸ್ತುತ ಪಡಿಸುತ್ತಿದೆ. ಕನ್ನಡದ ಯುವ ನಿರ್ದೇಶಕರನ್ನು, ರಂಗಕರ್ಮಿಗಳನ್ನು ಪ್ರೋತ್ಸಾಹಿಸುವುದೇ ಈ ಉತ್ಸವದ ಮುಖ್ಯ ಉದ್ದೇಶ. ಈ ಕನ್ನಡ ನಾಟಕೋತ್ಸವವು ರಂಗಭೂಮಿ ಕಲಾವಿದರಿಗೆ, ಉತ್ಸಾಹಿಗಳಿಗೆ ಮತ್ತು ಪ್ರೇಕ್ಷಕರಿಗೆ ಸೃಜನಶೀಲತೆ ಮತ್ತು ಸಹಯೋಗ ಬೆಳೆಸುವ ಗುರಿಯನ್ನು ಹೊಂದಿದೆ.2023 ಡಿಸೆಂಬರ್ ತಿಂಗಳಿನಲ್ಲಿ ಶೇಷಗಿರಿಯ ಸಿ. ಎಂ. ಉದಾಸಿ ಕಲಾಕ್ಷೇತ್ರದಲ್ಲಿ ಆರು ಆಕರ್ಷಕ ನಾಟಕಗಳ ಯಶಸ್ವಿ ಪ್ರದರ್ಶನದನಂತರ, ಇದೀಗ ಕನ್ನಡ ನಾಟಕೋತ್ಸವದ ನಾಟಕಗಳು ರಂಗ ಶಂಕರದಲ್ಲಿ ಪ್ರದರ್ಶನಗೊಳ್ಳುತ್ತಿದೆ.

ಕಾರ್ಯಕ್ರಮದ ವಿವರಗಳು: ದಿನಾಂಕ: ಜನವರಿ 30 ರಿಂದ ಫೆಬ್ರವರಿ 04, 2024 ಸಮಯ: ಸಂಜೆ 7.30ಕ್ಕೆಸ್ಥಳ: ರಂಗ ಶಂಕರ, ಬೆಂಗಳೂರು ಟಿಕೆಟ್ಗಳಿಗಾಗಿ: ರಂಗ ಶಂಕರ ಬಾಕ್ಸ್ ಆಫೀಸ್ ಮತ್ತು ಬುಕ್ ಮೈ ಶೋ

# ಕೂದಲು ಕಸಿ ಬಗ್ಗೆ ತಿಳಿದಿರಲಿ

### ಬ್ಯೂಟಿ ಟಿಪ್ಸ್



ಕೂದಲು ಉದುರುವ ಸಮಸ್ಯೆ ಹೆಚ್ಚಿದಾಗ ಪುರುಷರು ಹೆಚ್ಚಾಗಿ ಕೂದಲ ಕಸಿ ಅಥವಾ ಹೇರ್ ಟ್ರಾನ್ಸಪ್ಲಾಂಟ್ ಮಾಡಿಕೊಳ್ಳುವುದನ್ನು ನೀವು ಕಂಡಿರಬಹುದು. ಈ ಚಿಕಿತ್ಸೆಯನ್ನು ಎಲ್ಲರೂ ಮಾಡಿಸಿಕೊಳ್ಳಲು ಏಕೆ ಸಾಧ್ಯವಿಲ್ಲ ಎಂಬುದು ನಿಮಗೆ ಗೊತ್ತೇ? ಕೂದಲ ಕಸಿ ಮಾಡುವ ಮುನ್ನ ನಿಮ್ಮ ತಲೆಯ ಉಳಿದ ಕೂದಲಿನ ಬಗ್ಗೆ ಸಂಪೂರ್ಣ ಅಧ್ಯಯನ ಮಾಡಬೇಕಾಗುತ್ತದೆ. ಅದರೊಂದಿಗ ನಿಮ್ಮ ಕೂದಲಿಗೆ ಹೊಂದಿಕೊಳ್ಳುವ ಪ್ರಕಾರದ ಕೂದಲನ್ನೇ ಕಸಿ ಮಾಡಬೇಕಾಗುತ್ತದೆ. ಇದಕ್ಕೆಲ್ಲಾ ಸುದೀರ್ಘ ಸಮಯ ಬೇಕಾಗುತ್ತದೆ. ಹಾಗಾಗಿ ಸಹಜವಾಗಿಯೇ ಈ ಪ್ರಕ್ರಿಯೆ ದುಬಾರಿ. ಕೂದಲ ಕಸಿ ನಡೆಸುವಾಗಲೂ ಹಲವು ವೈದ್ಯರು ನಿಗಾ ವಹಿಸಬೇಕಾಗುತ್ತದೆ. ಸುದೀರ್ಘ ಅವಧಿಯವರೆಗೆ ನಡೆಯುವ ಈ ಕ್ರಿಯೆ ಹಣವಿಲ್ಲದವರಿಗೆ ಹೇಳಿಮಾಡಿಸಿದ್ದಂತೂ ಅಲ್ಲವೇ ಅಲ್ಲ. ಅಲ್ಲದೆ ಈ ಪ್ರಕ್ರಿಯೆ ಪೂರ್ಣಗೊಳ್ಳಲು ಮೂರರಿಂದ ಆರು ತಿಂಗಳು ಬೇಕಾಗುತ್ತದೆ. ಈ ಪ್ರಕ್ರಿಯೆಯಿಂದ ನಿಮ್ಮ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮಗಳೂ ಬೀರಬಹುದು. ವೈದ್ಯರ ಸಲಹೆ ಪಡೆಯದೆ ನೀವು ಯಾವುದೇ ಶ್ಯಾಂಪೂ ಅಥವಾ ಎಣ್ಣೆ ಬಳಸುವಂತಿಲ್ಲ ಹಾಗೂ ತಲೆ ಸ್ನಾನವನ್ನೂ ಮಾಡುವಂತಿಲ್ಲ. ಈ ಚಿಕಿತ್ಸೆ ನಿಮ್ಮ ತ್ವಚೆಯ ಬಣ್ಣದ ಮೇಲೂ ಕೆಲವೊಮ್ಮೆ ಪರಿಣಾಮ ಬೀರುವುದುಂಟು. ಹಾಗಾಗಿ ಕೂದಲ ಕಸಿ ಮಾಡುವ ಮುನ್ನ ಆಲೋಚಿಸಿ ನಿರ್ಧರಿಸಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಂತಸದ ವಾತಾವರಣ, ಭೂ ವ್ಯವಹಾರಗಳಲ್ಲಿ ಲಾಭ, ಕಾರ್ಯ ಸಾಧನೆಗಾಗಿ ತಿರುಗಾಟ, ಶತ್ರು ಬಾಧೆ, ನಿಂದನೆ.

**ವೃಷಭ:** ಹೊಸ ಅವಕಾಶ, ಅದೃಷ್ಟದ ಬಾಗಿಲು ತೆರೆಯಲಿದೆ, ಮಕ್ಕಳಿಂದ ಸಂತಸ, ಕಾರ್ಯ ಸಾಧನೆಗಾಗಿ ತಿರುಗಾಟ.

**ಮಿಥುನ:** ವಯುಕ್ತಿಕ ಕೆಲಸಗಳಲ್ಲಿ ನಿಗಾ ವಹಿಸಿ, ವಿದೇಶ ವ್ಯಾಪಾರದಿಂದ ಅಧಿಕ ಲಾಭ, ಬಂಧು ಮಿತ್ರರಿಂದ ಅಪನಿಂದನೆ.

**ಕಟಕ:** ವಿದ್ಯಾರ್ಥಿಗಳಲ್ಲಿ ಪ್ರತಿಭೆ, ವಿಷಯ ಬೇಗ ಗ್ರಹಿಸುವಿರಿ, ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶ.

**ಸಿಂಹ:** ಮಗಳಿಗೆ ವರ ನಿಶ್ಚಯ, ಆಕಸ್ಮಿಕ ದನ ಲಾಭ, ಪರಿಶ್ರಮಕ್ಕೆ ತಕ್ಕ ಫಲ, ಉತ್ತಮ ಲಾಭ.

**ಕನ್ಯಾ:** ಸಂತಸದ ವಾತಾವರಣ, ಭೂ ಲಾಭ, ವಿವಾದಗಳಿಲ್ಲದಂತೆ ವ್ಯವಹರಿಸುವುದು ಉತ್ತಮ.

**ತುಲಾ:** ಕುಟುಂಬ ಸೌಖ್ಯ, ಸಾಲಬಾಧೆ, ಕಾರ್ಯಭಂಗ, ಬಂಧುಗಳಿಂದ ಹಿಂಸೆ, ಕೋರ್ಟ್ ವ್ಯವಹಾರಗಳಲ್ಲಿ ಜಯ.

**ವೃಶ್ಚಿಕ:** ಮಾನಸಿಕ ಒತ್ತಡ, ವಿದ್ಯೆಯಲ್ಲಿ ಆಸಕ್ತಿ ಇಲ್ಲ, ದೃಷ್ಟಿ ದೋಷ, ಅತಿಯಾದ ನೋವು, ಆರೋಗ್ಯದಲ್ಲಿ ವ್ಯತ್ಯಾಸ.

**ಧನಸ್ಸು:** ಇಷ್ಟ ವಸ್ತುಗಳ ಖರೀದಿ, ಹಿರಿಯರ ಬೆಂಬಲ, ವ್ಯರ್ಥ ಧನ ಹಾನಿ, ಸಕಾಲಕ್ಕೆ ಭೋಜನ ಇಲ್ಲದಿರುವಿಕೆ.

**ಮಕರ:** ನಂಬಿಕೆ ದ್ರೋಹಕ್ಕೆ ಒಳಗಾಗುವಿರಿ, ಸಲ್ಲದ ಅಪವಾದ ನಿಂದನೆ, ಶೀತ ಸಂಬಂಧ ರೋಗ, ಆಧ್ಯಾತ್ಮದಲ್ಲಿ ಒಲವು.

**ಕುಂಭ:** ನಿಮ್ಮ ಮಾತುಗಳಿಂದ ಕಲಹ, ತಾಳ್ಮೆ ಅಗತ್ಯ, ಕಾರ್ಯ ಸಾಧನೆಗಾಗಿ ತಿರುಗಾಟ, ಆಕಸ್ಮಿಕ ಧನ ಲಾಭ.

**ಮೀನ:** ಇತರರಿಗೆ ಸಹಾಯ ಮಾಡುವಿರಿ, ರಿಯಲ್ ಎಸ್ಟೇಟ್‌ನವರಿಗೆ ಲಾಭ, ನೂತನ ಪ್ರಯತ್ನಗಳಿಂದ ಯಶಸ್ಸು.

# ಹುತಾತ್ಮರ ದಿನ




ಇಂದು ಹುತಾತ್ಮರ ದಿನ ದೇಶಕ್ಕಾಗಿ ಹೋರಾಡಿ ಮಡಿದ ಸ್ವಾತಂತ್ರ ಹೋರಾಟಗಾರು ಹಾಗೂ ಯೋಧರ ಸ್ಮರಣೆ ಮಾಡುವ ದಿನ. 'ಶಹೀದ್ ದಿವಸ್' ಎಂದೂ ಕರೆಯಲ್ಪಡುವ ಹುತಾತ್ಮರ ದಿನವನ್ನು ಪ್ರತಿ ವರ್ಷ ಜನವರಿ 30 ರಂದು ಮಹಾತ್ಮ ಗಾಂಧಿಯವರ ಪುಣ್ಯತಿಥಿಯಂದು ಆಚರಿಸಲಾಗುತ್ತದೆ. ಮಾತೃಭೂಮಿಗಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ಸಲ್ಲಿಸಲು ಭಾರತದಲ್ಲಿ ಜನವರಿ 30 ಮತ್ತು ಮಾರ್ಚ್ 23 ರಂದು 'ಶಹೀದ್ ದಿವಸ್' ಅನ್ನು ಆಚರಿಸಲಾಗುತ್ತಿದೆ.

ಜನವರಿ 30 ರಂದು, ಬಿರ್ಲಾ ಹೌಸ್ನಲ್ಲಿರುವ ಗಾಂಧಿ ಸ್ಮೃತಿಯಲ್ಲಿ ಮಹಾತ್ಮ ಗಾಂಧಿಯನ್ನು ಹತ್ಯೆ ಮಾಡಲಾಯಿತು. ಹುತಾತ್ಮರ ದಿನದ ಈ ಸಂದರ್ಭದಲ್ಲಿ, ರಾಷ್ಟ್ರಪತಿ, ಉಪ ರಾಷ್ಟ್ರಪತಿ, ಪ್ರಧಾನ ಮಂತ್ರಿ, ರಕ್ಷಣಾ ಸಚಿವರು, ಭಾರತೀಯ ಸಶಸ್ತ್ರ ಪಡೆಗಳ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಮತ್ತು ಮೂವರು ಸೇನಾ ಮುಖ್ಯಸ್ಥರು ರಾಜ್ ಘಾಟ್ ಸ್ಮಾರಕದ ಸಮಾಧಿಯಲ್ಲಿ ಸೇರುತ್ತಾರೆ. ಇನ್ನು ಮಾರ್ಚ್ 23 ರಂದು, ಕ್ರಾಂತಿಕಾರಿ ಸ್ವಾತಂತ್ರ ಹೋರಾಟಗಾರರಾಗಿರುವ ಭಗತ್ ಸಿಂಗ್, ಶಿವರಾಮ ರಾಜಗುರು ಮತ್ತು ಸುಖದೇವ್ ಥಾಪರ್ ಅವರನ್ನು ಬ್ರಿಟಿಷರು ಗಲ್ಲಿಗೇರಿಸಿದ್ದರು. ಈ ಹಿನ್ನೆಲೆಯಲ್ಲಿ ಸ್ವಾತಂತ್ರಕ್ಕಾಗಿ ಪ್ರಾಣತೆತ್ತ ವೀರ ಪುತ್ರಿಗೆ ಜನರು ಗೌರವ ಸಲ್ಲಿಸಲು ಮಾರ್ಚ್ 23 ರಂದು ಕೂಡ ಹುತಾತ್ಮ ದಿನ ಅಥವಾ ಶಹೀದ್ ದಿವಸವನ್ನು ಆಚರಿಸಲಾಗುತ್ತಿದೆ.

ರಾಷ್ಟ್ರಪಿತ ಎಂದು ಕರೆಯಲ್ಪಡುವ ಮಹಾತ್ಮಾ ಗಾಂಧಿಯವರು ಜನವರಿ 30, 1948 ರಂದು ನಾಥುರಾಮ್ ಗೋಡ್ಸೆ ಯಿಂದ ಹತ್ಯೆಗೀಡಾದರು. ಗಾಂಧಿ ವಸಾಹತುಶಾಹಿಯನ್ನು ವಿರೋಧಿಸುತ್ತಿದ್ದ ರಾಷ್ಟ್ರೀಯತಾವಾದಿಯಾಗಿದ್ದು, ಅವರು ಬ್ರಿಟಿಷ್ ಆಳ್ವಿಕೆಯಿಂದ ಭಾರತವನ್ನು ಮುಕ್ತಗೊಳಿಸಲು ಅಹಿಂಸಾತ್ಮಕ ಮಾರ್ಗಗಳನ್ನು ಅನುಸರಿಸಿದರು. ಅಲ್ಲದೇ ಪ್ರಪಂಚದಾದ್ಯಂತ ನಾಗರಿಕ ಹಕ್ಕುಗಳು ಮತ್ತು ಸ್ವಾತಂತ್ರ್ಯಕ್ಕಾಗಿ ವಿವಿಧ ಚಳುವಳಿಗಳಗೆ ಪ್ರೇರಕ ಶಕ್ತಿಯಾಗಿದ್ದರು. ಇಂತಹ ಮಹಾತ್ಮನನ್ನು ನೆನೆಯುವ ಸಲುವಾಗಿ ದೇಶದ ಸ್ವಾತಂತ್ರ್ಯಕ್ಕಾಗಿ ಅವರು ನೀಡಿದ ಕೊಡುಗೆಯನ್ನು ಗುರುತಿಸಲು ಭಾರತವು ಜನವರಿ 30 ರಂದು ಹುತಾತ್ಮ ದಿನವನ್ನು ಆಚರಿಸುತ್ತದೆ. ಕೇಂದ್ರ ಸರ್ಕಾರದ ನಿರ್ದೇಶನದ ಪ್ರಕಾರ, ಜನವರಿ 30 ರಂದು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಎರಡು ನಿಮಿಷಗಳ ಮೌನವನ್ನು ಆಚರಿಸಲಾಗುತ್ತದೆ. ಇವೆರಡು ದಿನಗಳಲ್ಲದೇ ಹುತಾತ್ಮರ ದಿನವನ್ನು ದೇಶದಾದ್ಯಂತ ಏಳು ವಿವಿಧ ದಿನಗಳಲ್ಲಿ ಆಚರಿಸಲಾಗುತ್ತದೆ. ಅವುಗಳೆಂದರೆ ಜನವರಿ 30, ಮಾರ್ಚ್ 23, ಮೇ 19, ಅಕ್ಟೋಬರ್ 21, ನವೆಂಬರ್ 17, ನವೆಂಬರ್ 19 ಮತ್ತು ನವೆಂಬರ್ 24 ರಂದು ಕೂಡ ಆಯಾ ಪ್ರದೇಶದಲ್ಲಿ ಹುತಾತ್ಮರಾದ ಸ್ವಾತಂತ್ರ ಹೋರಾಟಗಾರರನ್ನು ನೆನೆದು ಅವರನ್ನು ಸ್ಮರಿಸಲು ಹುತಾತ್ಮ ದಿನವನ್ನು ಆಚರಿಸಲಾಗುತ್ತಿದೆ.

# ಸರ್ವಪಕ್ಷ ಸಭೆ ಕರೆದ ಕೇಂದ್ರ ಸರ್ಕಾರ



**ನವದೆಹಲಿ:** ಬಜೆಟ್ ಅಧಿವೇಶನಕ್ಕೂ ಮುನ್ನ ಸಂಸತ್ತಿನಲ್ಲಿ ವಿವಿಧ ಪಕ್ಷಗಳ ನಾಯಕರ ಸಭೆಯನ್ನು ಮಂಗಳವಾರ ಕೇಂದ್ರ ಸರ್ಕಾರ ಕರೆದಿದೆ.

ವಿವಿಧ ಪಕ್ಷಗಳ ನಾಯಕರು ಸಂಸತ್ತಿನಲ್ಲಿ ಪ್ರಸ್ತಾಪಿಸಲು ಬಯಸುವ ವಿಷಯಗಳನ್ನು ಹೈಲೈಟ್ ಮಾಡುವುದರಿಂದ ಮತ್ತು ಸರ್ಕಾರವು ತನ್ನ ಕಾರ್ಯಸೂಚಿಯ ಬಗ್ಗೆ ಅವರಿಗೆ ಒಂದು ನೋಟವನ್ನು ನೀಡುತ್ತದೆ ಮತ್ತು ಅವರ ಸಹಕಾರವನ್ನು ಪಡೆಯುವುದರಿಂದ ಇದು ಪ್ರತಿ ಅಧಿವೇಶನಕ್ಕೂ ಮುಂಚಿತವಾಗಿ ಒಂದು ವಾಡಿಕೆಯಾಗಿದೆ.

ಅಧ್ಯಕ್ಷ ದ್ರೌಪದಿ ಮುರ್ಮು ಅವರ ಭಾಷಣದೊಂದಿಗೆ ಅಧಿವೇಶನ ಆರಂಭವಾಗಲಿದೆ. ಜನವರಿ 31 ಮತ್ತು ಫೆಬ್ರವರಿ 9 ರ ನಡುವೆ ಒಂದು ಸಣ್ಣ ಅಧಿವೇಶನವಾಗಿದೆ. ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಅವರು ಮಧ್ಯಂತರ ಬಜೆಟ್ ಅನ್ನು ಮಂಡಿಸಲಿದ್ದಾರೆ.

# ಪ್ರಾಣ ಪ್ರತಿಷ್ಠೆ :ಮೌಲ್ವಿ ವಿರುದ್ಧ ಫತ್ವಾ

**ಅಯೋಧ್ಯೆ:** ಜನವರಿ 22 ರಂದು ಅಯೋಧ್ಯೆಯ ರಾಮ ಮಂದಿರ 'ಪ್ರಾಣ ಪ್ರತಿಷ್ಠಾ' ಸಮಾರಂಭದಲ್ಲಿ ಪಾಲ್ಗೊಂಡಿದ್ದ ಪ್ರಮುಖ ಮುಸ್ಲಿಂ ಧರ್ಮಗುರುವೊಬ್ಬರ ವಿರುದ್ಧ 'ಫತ್ವಾ' ಹೊರಡಿಸಲಾಗಿದೆ.

ಆಲ್ ಇಂಡಿಯಾ ಇಮಾಮ್ ಆರ್ಗನೈಸೇಶನ್ನ ಮುಖ್ಯ ಇಮಾಮ್ ಡಾ.

ಇಮಾಮ್ ಉಮರ್ ಅಹ್ಮದ್ ಇಲ್ಯಾಸಿ ಅವರು ತನ್ನ ವಿರುದ್ಧ 'ಫತ್ವಾ' ಹೊರಡಿಸಿರುವುದನ್ನು ಖಚಿತಪಡಿಸಿದ್ದಾರೆ. ಮುಖ್ಯ ಇಮಾಮ್ ಆಗಿ, ನಾನು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರದಿಂದ ಆಹ್ವಾನವನ್ನು ಸ್ವೀಕರಿಸಿದ್ದೇನೆ. ನಾನು ಎರಡು ದಿನ ಆಲೋಚಿಸಿ ನಂತರ ದೇಶಕ್ಕಾಗಿ ಸೌಹಾರ್ದತೆಗಾಗಿ ಅಯೋಧ್ಯೆಗೆ ಹೋಗಲು ನಿರ್ಧರಿಸಿದೆ ಎಂದು ಎಎನ್ಐಗೆ ಪ್ರತಿಕ್ರಿಯಿಸಿದ್ದಾರೆ.

"ನಿನ್ನೆ ಫತ್ವಾ ಹೊರಡಿಸಲಾಗಿದೆ, ಆದರೆ ಜನವರಿ 22 ರ ಸಂಜೆಯಿಂದ ನನಗೆ ಬೆದರಿಕೆ ಕರೆಗಳು ಬರುತ್ತಿವೆ ನಾನು ಕೆಲವು ಕರೆಗಳನ್ನು ರೆಕಾರ್ಡ್ ಮಾಡಿದ್ದೇನೆ, ಅದರಲ್ಲಿ ಕರೆ ಮಾಡಿದವರು ನನಗೆ ಜೀವ ಬೆದರಿಕೆ ಹಾಕಿದ್ದಾರೆ. ನನ್ನನ್ನು ಪ್ರೀತಿಸುವವರು, ರಾಷ್ಟ್ರವನ್ನು ಪ್ರೀತಿಸುವವರು ನನ್ನನ್ನು ಬೆಂಬಲಿಸುತ್ತಾರೆ. ಸಮಾರಂಭದಲ್ಲಿ ಭಾಗವಹಿಸಿದ್ದಕ್ಕಾಗಿ ನನ್ನನ್ನು ದ್ವೇಷಿಸುವವರು ಬಹುಶಃ ಪಾಕಿಸ್ಥಾನಕ್ಕೆ ಹೋಗಬೇಕು. ನಾನು ಪ್ರೀತಿಯ ಸಂದೇಶವನ್ನು ನೀಡಿದ್ದೇನೆ, ನಾನು ಯಾವುದೇ ಅಪರಾಧ ಮಾಡಿಲ್ಲ. ನಾನು ಕ್ಷಮೆಯಾಚಿಸುವುದಿಲ್ಲ ಅಥವಾ ರಾಜೀನಾಮೆ ನೀಡುವುದಿಲ್ಲ, ಅವರು ಏನು ಬೇಕಾದರೂ ಮಾಡಬಹುದುಎಂದು ಇಲ್ಯಾಸಿ ಹೇಳಿದ್ದಾರೆ.



# ಮೋದಿ ಮತ್ತೆ ಪ್ರಧಾನಿಯಾದರೆ ಮುಂದೆಂದೂ ಚುನಾವಣೆ ನಡೆಯುವುದಿಲ್ಲ: ಖರ್ಗೆ



**ಭುವನೇಶ್ವರ್:** ದೇಶದಲ್ಲಿ ಪ್ರಜಾಪ್ರಭುತ್ವವನ್ನು ಉಳಿಸಲು 2024 ಲೋಕಸಭಾ ಚುನಾವಣೆ ಜನರಿಗಿರುವ ಕೊನೆಯ ಅವಕಾಶ. ಮೋದಿ ಮತ್ತೊಮ್ಮೆ ಗೆದ್ದು ಗದ್ದುಗೆ ಏರಿದರೆ ದೇಶದಲ್ಲಿ ಸರ್ವಾಧಿಕಾರ ಜಾರಿಗೆ ಬರಲಿದೆ ಹಾಗು ಮುಂದೆಂದೂ ಚುನಾವಣೆ ನಡೆಯುವುದಿಲ್ಲ ಎಂದು ಕಾಂಗ್ರೆಸ್ಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ನೀಡಿದ್ದಾರೆ. ಭುವನೇಶ್ವರದಲ್ಲಿ ನಡೆದ ಒಡಿಶಾ ಬಚಾವೋ ಸಮಾವೇಶದ ರಾಲಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಮತ್ತು ಅದರ ಸಿದ್ಧಾಂತವಾದಿಯಾಗಿರುವ ಆರ್.ಎಸ್.ಎಸ್ ವಿಷವಿದ್ದಂತೆ ಎಂದಿದ್ದಾರೆ. ಬಿಹಾರ್ ಸಿಎಂ ನಿತೀಶ್ ಕುಮಾರ್ ಒಕ್ಕೂಟ ಬಿಟ್ಟು ಹೊರನಡೆದ ಬೆನ್ನಲ್ಲಿ ಮಾತನಾಡಿದ ಖರ್ಗೆ, ಒಬ್ಬ ವ್ಯಕ್ತಿಯ ನಿರ್ಗಮನದಿಂದ ಮಾಹಾಘಟಬಂಧನ್ ಗೆ ಯಾವುದೇ ನಷ್ಟವಿಲ್ಲ. ಅದರಿಂದ ಲೋಕಸಭೆಯ ಚುನಾವಣೆಯ ಮೇಲೆ ಏನೂ ಪರಿಣಾಮ ಬೀರುವುದಿಲ್ಲ ಎಂದಿದ್ದಾರೆ.

# ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆಗೆ ಸರ್ಬಾನಂದ ಸೋನೋವಾಲ್ ಶಂಕುಸ್ಥಾಪನೆ



**ದೆಹಲಿ:** ಕೇಂದ್ರ, ಬಂದರು, ಹಡಗು ಮತ್ತು ಜಲಮಾರ್ಗ ಹಾಗೂ ಆಯುಷ್ ಸಚಿವ ಸರ್ಬಾನಂದ ಸೋನೋವಾಲ್ ಅವರು, ಅಸ್ಸಾಂ ಮುಖ್ಯಮಂತ್ರಿ ಡಾ.ಹಿಮಂತ ಬಿಸ್ವಾ ಶರ್ಮಾ ಅವರೊಂದಿಗೆ ಕೇಂದ್ರೀಯ ಸಂಶೋಧನಾ ಸಂಸ್ಥೆ ಯೋಗ ಮತ್ತು ಪ್ರಕೃತಿ ಚಿಕಿತ್ಸೆಗಾಗಿ ದಿಬ್ರುಗಢ್ನ ದಿಹಿಂಗ್ ಖಮ್ತಿಘಾಟ್ನಲ್ಲಿ 100 ಹಾಸಿಗೆಗಳ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಸರ್ಬಾನಂದ ಸೋನೊವಾಲ್, ಪ್ರಧಾನಿ ನರೇಂದ್ರ ಮೋದಿಜಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ, ಆಯುಷ್ ಆಂದೋಲನವು ಜಾಗತಿಕ ಸ್ವಾಸ್ಥ್ಯ ಆಂದೋಲನದ ಪ್ರವರ್ತಕ ಶಕ್ತಿಯಾಗಿ ಮಾರ್ಪಟ್ಟಿರುವ ಕಾರಣಕ್ಕೆ ಅಗಾಧವಾದ ಉತ್ತೇಜನವನ್ನು ಪಡೆದುಕೊಂಡಿದೆ ಎಂದರು.ನಾವು ದಿಬ್ರುಗಢದಲ್ಲಿ 100 ಹಾಸಿಗೆಗಳ ಆಸ್ಪತ್ರೆಯೊಂದಿಗೆ ಯೋಗ ಮತ್ತು ಪ್ರಕೃತಿಚಿಕಿತ್ಸೆಯ ಮೊದಲ ರೀತಿಯ ಕೇಂದ್ರೀಯ ಸಂಶೋಧನಾ ಸಂಸ್ಥೆಗೆ ಅಡಿಪಾಯ ಹಾಕಿದ್ದೇವೆ. ಪ್ರಕೃತಿ ತಾಯಿ ತನ್ನ ಅಗಾಧವಾದ ಸೌಂದರ್ಯದಿಂದ ನಮ್ಮನ್ನು ಆಶೀರ್ವದಿಸಿದ್ದಾಳೆ. ಇದು ಯೋಗ, ಪ್ರಕೃತಿ ಚಿಕಿತ್ಸೆ, ಆಯುರ್ವೇದದ ಮೂಲಕ ಪುನರುಜ್ಜೀವನಗೊಂಡ, ವೈಜ್ಞಾನಿಕವಾಗಿ ಮೌಲ್ಯೀಕರಿಸಿದ ಚಿಕಿತ್ಸಾ ಪದ್ಧತಿಯೊಂದಿಗೆ ದಕ್ಷಿಣ ಏಷ್ಯಾದಲ್ಲೇ ರೋಗ ಗುಣಪಡಿಸುವಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಮತ್ತು ಔಷಧದ ಇತರ ಸಾಂಪ್ರದಾಯಿಕ ರೂಪಗಳು ಎಂದು ಅವರು ಹೇಳಿದರು. ಯೋಗ ಮತ್ತು ಪ್ರಕೃತಿ ಚಿಕಿತ್ಸೆಯ ಸಾಂಪ್ರದಾಯಿಕ ಜ್ಞಾನ ಮತ್ತು ತಂತ್ರಜ್ಞಾನದ ಆಧುನಿಕ ಪರಿಕರಗಳ ನಡುವೆ ವೈಜ್ಞಾನಿಕ ಮತ್ತು ಉಪಯುಕ್ತವಾದ ಸೇವೆ ತರುವ ಗುರಿಯೊಂದಿಗೆ ಅಂದಾಜು 100 ಕೋಟಿ ರೂ. ಹೂಡಿಕೆಯಲ್ಲಿ ಸಂಸ್ಥೆಯು ಸುಮಾರು 15 ಎಕರೆಗಳ ವಿಸ್ತೀರ್ಣದ ಜಮೀನಿನಲ್ಲಿ ಆಸ್ಪತ್ರೆ ಅಭಿವೃದ್ಧಿಪಡಿಸಲಾಗುವುದು. ಇದು ಈಶಾನ್ಯ ರಾಜ್ಯಗಳಲ್ಲೇ ಮೊದಲೆಯನದ್ದಾಗಿದೆ. ಇದು ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕ್ಷೇತ್ರದಲ್ಲಿ ಶಿಕ್ಷಣ, ತಡೆಗಟ್ಟುವ ಆರೋಗ್ಯ ಮತ್ತು ಸಂಶೋಧನೆಯಲ್ಲಿ ಹೊಸ ಮಾದರಿ ಆಗಲಿದೆ. ಈ ಅತ್ಯಾಧುನಿಕ ಸಂಸ್ಥೆಯು ಯೋಗ ಮತ್ತು ಪ್ರಕೃತಿ ಚಿಕಿತ್ಸೆಯಲ್ಲಿ ಜಾಗತಿಕ ಪ್ರಚಾರ ಮತ್ತು ಸಂಶೋಧನೆಗಾಗಿ ಅಂತಾರಾಷ್ಟ್ರೀಯ ಸಹಯೋಗ ಕೇಂದ್ರವಾಗಿ ಕಾರ್ಯನಿರ್ವಹಿಸುವುದರ ಹೊರತಾಗಿ, ಸಾಕ್ಷ್ಯ ಆಧಾರಿತ ಸಂಶೋಧನೆಯ ಮೂಲಕ ಸಾಂಪ್ರದಾಯಿಕ ಔಷಧ ಮತ್ತು ಅಭ್ಯಾಸಗಳ ಮೂಲಭೂತ ಅಂಶಗಳು ಮತ್ತು ವೈಜ್ಞಾನಿಕ ಮೌಲ್ಯೀಕರಣದ ಮೇಲೆ ಕೇಂದ್ರೀಕರಿಸುತ್ತದೆ. ಸಂಸ್ಥೆಯು ಯೋಗ ಮತ್ತು ಕ್ಷೇಮ ಕ್ಷೇತ್ರದಲ್ಲಿ ಸ್ಟಾರ್ಟ್ ಅಪ್ಗಳಿಗೆ ಉತ್ತೇಜನ ಕೇಂದ್ರವಾಗಿಯೂ ಕಾರ್ಯನಿರ್ವಹಿಸಲಿದೆ. ಹೃದಯ ಮತ್ತು ಮಧುಮೇಹ ಪುನರ್ವಸತಿಗಳು, ಸ್ವಯಂ ನಿರೋಧಕ ಕಾಯಿಲೆಗಳು ಮತ್ತು ಎನ್ಸಿಡಿ ಅಪಾಯ ಕಡಿತದ ಕ್ಷೇತ್ರಗಳಲ್ಲಿ ಸಾಮರ್ಥ್ಯ–ವರ್ಧನೆಯ ಕಾರ್ಯಕ್ರಮಗಳಿಗಾಗಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ತಜ್ಞರಿಗೆ ತರಬೇತಿ ನೀಡಲು ಸಂಸ್ಥೆ ಕ್ಲಿನಿಕಲ್ ತರಬೇತಿ ಸೌಲಭ್ಯ ನೀಡುತ್ತದೆ.

# ಜಾರ್ಖಂಡ ಸಿಎಂ ನಾಪತ್ತೆ!

**ನವದೆಹಲಿ:** ಜಾರಿ ನಿರ್ದೇಶನಾಲಯದ ತನಿಖೆಗೆ ಗೈರಾಗಿರುವ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಪತ್ತೆಗಾಗಿ ಅವರ ದೆಹಲಿ ನಿವಾಸದ ಎದುರು ಅಧಿಕಾರಿಗಳು ಕಾದು ಕುಳಿತಿದ್ದಾರೆ.

ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ಗೆ ಇಡಿ ನೋಟಿಸ್ ಜಾರಿ ಮಾಡಿತ್ತು.

ಆದರೆ ಸೊರೇನ್ ಜ. 27ರಂದು ರಾಂಚಿಯಿಂದ ದೆಹಲಿಗೆ ಪ್ರಯಾಣಿಸಿದ್ದರು. ಈ ಹಿನ್ನೆಲೆಯಲ್ಲಿ ದಕ್ಷಿಣ ದೆಹಲಿಯ ಶಾಂತಿನಿಕೇತನ ಕಟ್ಟಡದಲ್ಲಿರುವ ಸೊರೇನ್ ಮನೆಯ ಎದುರು ಪೊಲೀಸರೊಂದಿಗೆ ಇಡಿ ಅಧಿಕಾರಿಗಳು ಸೋಮವಾರ ಬೆಳಿಗ್ಗೆ 9ಕ್ಕೆ ಭೇಟಿ ನೀಡಿದರು. ಸಂಜೆಯವರೆಗೂ ಅವರು ಅಲ್ಲಿಯೇ ಬೀಡು ಬಿಟ್ಟಿದ್ದಾರೆ.



ಮುಖ್ಯಮಂತ್ರಿ ಅವರ ಮನೆಗೆ ವಿಚಾರಣೆಗಾಗಿ ಬಂದಿದ್ದೇವೆ. ಆದರೆ ಅವರು ಇಲ್ಲಿಲ್ಲ. ಜಾರ್ಖಂಡ್ ಭವನ ಸೇರಿದಂತೆ ಇನ್ನೂ ಹಲವೆಡೆ ಇಡಿ ತಂಡ ತೆರಳಿದೆ. ಆದರೆ ಮುಖ್ಯಮಂತ್ರಿ ಅವರ ಸುಳಿವಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.

ದೆಹಲಿಗೂ ಹೊರಡುವ ಮೊದಲು ಸಿಎಂ ಇಡಿಗೆ ಇಮೇಲ್ ಕಳುಹಿಸಿದ್ದು, ಜ. 31ರಂದು ಮಧ್ಯಾಹ್ನ 1ಕ್ಕೆ ರಾಂಚಿಯಲ್ಲಿರುವ ತಮ್ಮ ನಿವಾಸದಲ್ಲಿ ವಿಚಾರಣೆ ಒಳಪಡಲು ಒಪ್ಪಿಗೆ ಸೂಚಿಸಿದ್ದರು ಎನ್ನಲಾಗಿದೆ.

ಈ ಎಲ್ಲಾ ಬೆಳವಣಿಗೆಗಳ ಕುರಿತು ಮುಖ್ಯಮಂತ್ರಿ ಕಚೇರಿ ಮೌನಕ್ಕೆ ಜಾರಿದೆ. ಈ ಬಗ್ಗೆ ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಮಾತನಾಡಿ, ಘಟನೆಯನ್ನು ಸೂಕ್ಷ್ಮವಾಗಿ ಅವಲೋಕಿಸಲಾಗುತ್ತಿದೆ ಎಂದು ಹೇಳಿದ್ದಾರೆ.

# ಮಾಲ್ಡೀವ್ಸ್‌ಗೆ ಮತ್ತೊಂದು ಶಾಕ್

**ಮಾಲ್ಡೀವ್ಸ್:** ಮಾಲ್ಡೀವ್ಸ್ ಅಧ್ಯಕ್ಷ ಮುಯಿಝುಯ ಭಾರತ ವಿರೋಧಿ ನಡೆಯಿಂದ ಸರಕಾರ ಪತನದ ಹಂತ ತಲುಪಿದ್ದು, ಇದರ ನಡುವೆ ಮಾಲ್ಡೀವ್ಸ್ ಪ್ರವಾಸೋದ್ಯಮದಲ್ಲಿ ಭಾರಿ ಇಳಿಕೆಯಾಗಿದೆ. ಇದುವರೆಗೆ ಮಾಲ್ಡೀವ್ಸ್ಗೆ ಭೇಟಿ ನೀಡುವ ಗರಿಷ್ಠ ಪ್ರವಾಸಿಗರ ಪಟ್ಟಿಯಲ್ಲಿ ಭಾರತ 3ನೇ ಸ್ಥಾನದಲ್ಲಿತ್ತು. ಯರನ್ನು ನಿಂದಿಸಿದ ಬಳಿಕ ಪ್ರವಾಸಿಗರ ಸಂಖ್ಯೆ ಇಳಿಕೆಯಾಗುತ್ತಲೇ ಹೋಗಿದೆ. ಕಳೆದ 3 ವಾರಗಳ ಅಂಕಿ ಅಂಶವನ್ನು ಮಾಲ್ಡೀವ್ಸ್ ಪ್ರವಾಸೋದ್ಯಮ ಇಲಾಖೆ ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ಮಾಲ್ಡೀವ್ಸ್ಗೆ ಗರಿಷ್ಠ ಪ್ರವಾಸಿಗರು ಭೇಟಿ ನೀಡುವ ರಾಷ್ಟ್ರಗಳಲ್ಲಿ ಭಾರತ 3ರಿಂದ 5ನೇ ಸ್ಥಾನಕ್ಕೆ ಕುಸಿದಿದೆ. ಜನವರಿ ತಿಂಗಳಲ್ಲಿ ಮಾಲ್ಡೀವ್ಸ್ ಪ್ರವಾಸ ಮಾಡಿದವರ ಒಟ್ಟು ಸಂಖ್ಯೆ 174,400. ಈ ಪೈಕಿ ಭಾರತೀಯರ ಸಂಖ್ಯೆ 13,989. ಶೇಕಡಾ 8 ರಷ್ಟು ಭಾರತೀಯ ಪ್ರವಾಸಿಗರ ಸಂಖ್ಯೆಯಲ್ಲಿ ಕುಸಿತವಾಗಿದೆ. ರಷ್ಯಾ, ಇಟಲಿ, ಚೀನಾ ಹಾಗೂ ಲಂಡನ್ ಆರಂಭಿಕ ಸ್ಥಾನಗಳನ್ನು ಪಡೆದಿದೆ. ಜನವರಿ ಮೂರು ವಾರಗಳಲ್ಲಿ 18,561 ರಷ್ಯಾ ಪ್ರವಾಸಿಗರು ಮಾಲ್ಡೀವ್ಸ್ ಭೇಟಿ ನೀಡಿದ್ದಾರೆ. ಇನ್ನು ಇಟಲಿಯ 18,111, ಚೀನಾದ 16,529 ಹಾಗೂ ಯುಕೆಯಿಂದ 14,588 ಪ್ರವಾಸಿಗರು ಮಾಲ್ಡೀವ್ಸ್ ಭೇಟಿ ನೀಡಿದ್ದಾರೆ. 2023ರಲ್ಲಿ ಭಾರತದ 209,193 ಪ್ರವಾಸಿಗರು ಮಾಲ್ಡೀವ್ಸ್ ಪ್ರವಾಸ ಮಾಡಿದ್ದರು. ಇನ್ನು 2022ರಲ್ಲಿ 2.41 ಲಕ್ಷ ಹಾಗೂ 2021ರಲ್ಲಿ 2.91 ಲಕ್ಷ ಭಾರತೀಯ ಪ್ರವಾಸಿಗರು ಮಾಲ್ಡೀವ್ಸ್ ಪ್ರವಾಸ ಮಾಡಿದ್ದರು. ಈ ಮೂಲಕ ಗರಿಷ್ಠ ಪ್ರವಾಸಿಗರ ಸಂಖ್ಯೆಯಲ್ಲಿ ಮುಂಚೂಣಿ ಸ್ಥಾನ ಪಡೆದಿತ್ತು.



# ಕಮಲದ ಕೈ ಹಿಡಿದ ನಿತೀಶ್



**ನವದೆಹಲಿ:** ಹತ್ತು ವರ್ಷದ ಅವಧಿಯಲ್ಲಿ ಐದನೆ ಬಾರಿ ಪಕ್ಷ ಬದಲಿಸಿರುವ ನಿತೀಶ್ ಕುಮಾರ್, ತಾವು 2022ರಲ್ಲಿ ತೊರೆದು ಬಂದಿದ್ದ ಬಿಜೆಪಿಯೊಂದಿಗೆ ಸೇರಿ ಸರ್ಕಾರ ರಚಿಸಿ ಸಿಎಂ ಗದ್ದುಗೇರಿದ್ದಾರೆ. ತಮ್ಮ ಪಕ್ಷ ಬದಲಾವಣಾ ಸ್ವಭಾವದಿಂದ ರಾಜಕೀಯ ವಲಯದಲ್ಲಿ ಪಲ್ಟು ಕುಮಾರ್ ಎಂದು ಹೆಸರು ಪಡೆದಿರುವ ನಿತೀಶ್ ಬಿಹಾರದ ಮುಖ್ಯಮಂತ್ರಿಯಾಗಿ ಭಾನುವಾರ ಪ್ರಮಾಣ ವಚನ ಸ್ವೀಕರಿಸಿದ್ದು, ಬಿಜೆಪಿಯ ಇಬ್ಬರನ್ನು ಉಪಮುಖ್ಯಮಂತ್ರಿಗಳಾಗಿ ನೇಮಿಸಲಾಗಿದೆ. ಮುಂಬರುವ ದಿನಗಳಲ್ಲಿ ಸೀಟು ಹಂಚಿಕೆಯ ವಿಷಯವಾಗಿ ಚರ್ಚೆ ನಡೆಯಲಿದ್ದು, HAM ಪಕ್ಷವನ್ನೂ ಸೇರಿಸಿಕೊಂಡು ಈ ಪ್ರಕ್ರಿಯೆ ನಡೆಯಲಿದೆ. ಮೂಲಗಳ ಪ್ರಕಾರ, ಜ.13ರಂದು ನಡೆದ ವರ್ಚುವಲ್ ಮೀಟಿಂಗ್ ನ ನಂತರ ಕೋಪದಲ್ಲಿದ್ದ ನಿತೀಶ್, ಮೈತ್ರಿಕೂಟ ಬಿಡುವ ಯೋಚನೆ ಮಾಡಿದ್ದರೆಂದು ತಿಳಿದುಬಂದಿದೆ. INDIAಮೈತ್ರಿಕೂಟದಿಂದ ಪ್ರಧಾನಮಂತ್ರಿ ಅಭ್ಯರ್ಥಿಯಾಗಿ ಮಲ್ಲಿಕಾರ್ಜುನ ಖರ್ಗೆಯವರನ್ನು ನೇಮಿಸುವಂತೆ ಮಮತಾ ಬ್ಯಾನರ್ಜಿ ಮತ್ತು ಅರವಿಂದ್ ಕೇಜ್ರಿವಾಲ್ ಪ್ರಸ್ತಾಪಿಸಿದ್ದರು.

# ಅಮೆರಿಕ ಸೇನಾನೆಲೆಯ ಮೇಲೆ ಡ್ರೋನ್ ದಾಳಿ



**ಅಮ್ಮಾನ್:** ಪಶ್ಚಿಮ ಏಷ್ಯಾದ ಜೋರ್ಡಾನ್ ದೇಶದಲ್ಲಿರುವ ಅಮೆರಿಕದ ಸೇನಾನೆಲೆಯ ಮೇಲೆ ರವಿವಾರ ತಡರಾತ್ರಿ ನಡೆದ ಡ್ರೋನ್ ದಾಳಿಯಲ್ಲಿ ಅಮೆರಿಕದ ಮೂವರು ಯೋಧರು ಹತರಾಗಿದ್ದು ಕನಿಷ್ಟ 34 ಮಂದಿ ಗಾಯಗೊಂಡಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ಸಿಎನ್ಎನ್ ವರದಿ ಮಾಡಿದೆ. ಇದರೊಂದಿಗೆ ಗಾಝಾ ಯುದ್ಧ ಆರಂಭಗೊಂಡ ಬಳಿಕ ಮೊದಲ ಬಾರಿಗೆ ಶತ್ರುಗಳ ದಾಳಿಯಲ್ಲಿ ಅಮೆರಿಕ ಯೋಧರು ಸಾವನ್ನಪ್ಪಿದ್ದಾರೆ. 'ಸಿರಿಯಾ ಮತ್ತು ಇರಾಕ್ನಲ್ಲಿ ಸಕ್ರಿಯವಾಗಿರುವ ಇರಾನ್ ಬೆಂಬಲಿತ ಸಶಸ್ತ್ರ ಹೋರಾಟಗಾರರ ಗುಂಪು ನಡೆಸಿರುವ ಈ ದಾಳಿಗೆ ನಾವು ಸೂಕ್ತ ರೀತಿಯಲ್ಲಿ ಪ್ರತಿಕ್ರಿಯಿಸುವ ಆಯ್ಕೆಯನ್ನು ಹೊಂದಿದ್ದೇವೆ' ಎಂದು ಅಮೆರಿಕ ಅಧ್ಯಕ್ಷ ಜೋ ಬೈಡನ್ ಘೋಷಿಸಿದ್ದಾರೆ. ಜೋರ್ಡಾನ್ನ ಈಶಾನ್ಯದಲ್ಲಿ ಇರಾಕ್ ಮತ್ತು ಸಿರಿಯಾದ ಗಡಿಗಳು ಸಂಧಿಸುವ ಆಯಕಟ್ಟಿನ ಸ್ಥಳವಾಗಿರುವ 'ಟವರ್ 22' ಪ್ರದೇಶದಲ್ಲಿರುವ ಅಮೆರಿಕದ ಸೇನಾನೆಲೆಯನ್ನು ಗುರಿಯಾಗಿಸಿ ಡ್ರೋನ್ ದಾಳಿ ನಡೆದಿದೆ. ಇರಾನ್ ಬೆಂಬಲಿತ ಸಶಸ್ತ್ರ ಹೋರಾಟಗಾರರ ಗುಂಪಿನ ಕೃತ್ಯ ಇದಾಗಿದ್ದು ಸಿರಿಯಾ ಕಡೆಯಿಂದ ಡ್ರೋನ್ ದಾಳಿ ನಡೆದಿದ್ದು ಯಾವ ಗುಂಪು ಇದಕ್ಕೆ ಹೊಣೆಯೆಂಬುದು ಇನ್ನೂ ಸ್ಪಷ್ಟವಾಗಿಲ್ಲ ಎಂದು ಅಮೆರಿಕದ ಅಧಿಕಾರಿಗಳು ಹೇಳಿದ್ದಾರೆ. ದಾಳಿಯಲ್ಲಿ ಮೂವರು ಯೋಧರು ಸಾವನ್ನಪ್ಪಿ 34ಕ್ಕೂ ಅಧಿಕ ಯೋಧರು ಗಾಯಗೊಂಡಿದ್ದಾರೆ. ಗಂಭೀರ ಗಾಯಗೊಂಡ 8 ಯೋಧರನ್ನು ಹೆಚ್ಚಿನ ಚಿಕಿತ್ಸೆಗಾಗಿ ಅಲ್ಲಿಂದ ಸ್ಥಳಾಂತರಿಸಲಾಗಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ಹೇಳಿದೆ.

# ಎಸ್ಐಎಮ್ಐ ಸಂಘಟನೆಗೆ ಬಿಗ್ ಶಾಕ್

**ನವದೆಹಲಿ :** 'ಎಸ್ಐಎಮ್ಐ' ಸಂಘಟನೆಗೆ ಕೇಂದ್ರ ಸರ್ಕಾರ ಬಿಗ್ ಶಾಕ್ ನೀಡಿದ್ದು, ಮತ್ತೆ 5 ವರ್ಷ ನಿಷೇಧ ವಿಸ್ತರಣೆ ಮಾಡಿದೆ. ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ (ಸಿಮಿ) ಮೇಲಿನ ನಿಷೇಧವನ್ನು ಮೋದಿ ಸರ್ಕಾರ ಸೋಮವಾರ ಯುಎಪಿಎ ಅಡಿಯಲ್ಲಿ ಐದು ವರ್ಷಗಳವರೆಗೆ ವಿಸ್ತರಿಸಿದೆ.

ದೇಶದಲ್ಲಿ ಸರಣಿ ಭಯೋತ್ಪಾದಕ ಕೃತ್ಯಗಳಲ್ಲಿ ಭಾಗಿಯಾಗಿದೆ ಎಂದು ಹೇಳಲಾದ ಸಿಮಿಯನ್ನು 2019 ರಲ್ಲಿ ಸರ್ಕಾರ ಇನ್ನೂ ಐದು ವರ್ಷಗಳ ಕಾಲ ನಿಷೇಧಿಸಿತ್ತು.

ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಪ್ರಧಾನಿ ಟಿಚಿಡಿಜಟಿಜಡಿಚಿಟಠಜ ಜಿ ಅವರ ದೃಷ್ಟಿಕೋನವನ್ನು ಬಲಪಡಿಸಲು 'ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ (ಸಿಮಿ)' ಅನ್ನು ಯುಎಪಿಎ ಅಡಿಯಲ್ಲಿ ಇನ್ನೂ ಐದು ವರ್ಷಗಳ ಅವಧಿಗೆ 'ಕಾನೂನುಬಾಹಿರ ಸಂಘಟನೆ' ಎಂದು ಘೋಷಿಸಲಾಗಿದೆ.



ಭಾರತದ ಸಾರ್ವಭೌಮತ್ವ, ಭದ್ರತೆ ಮತ್ತು ಸಮಗ್ರತೆಗೆ ಬೆದರಿಕೆಯೊಡ್ಡಲು ಭಯೋತ್ಪಾದನೆಯನ್ನು ಪ್ರಚೋದಿಸುವಲ್ಲಿ, ಶಾಂತಿ ಮತ್ತು ಕೋಮು ಸೌಹಾರ್ದತೆಯನ್ನು ಭಂಗಗೊಳಿಸುವಲ್ಲಿ ಸಿಮಿ ಭಾಗಿಯಾಗಿದೆ ಎಂದು ಗೃಹ ಸಚಿವಾಲಯದ ಪೋಸ್ಟ್ ನಲ್ಲಿ ತಿಳಿಸಲಾಗಿದೆ.

# ಹಿಂದೂ ದೇವರನ್ನು ನಂಬಬೇಡಿ, ಬೌದ್ಧ ಧರ್ಮ ಅಳವಡಿಸಿಕೊಳ್ಳಿ ಎಂದಿದ್ದ ಮುಖ್ಯ ಶಿಕ್ಷಕ ಅರೆಸ್ಟ್

**ರಾಯ್ಪುರ್:** ಹಿಂದೂ ದೇವರನ್ನು ನಂಬಬೇಡಿ, ಬೌದ್ಧ ಧರ್ಮ ಅಳವಡಿಸಿಕೊಳ್ಳಿ ಅಂತ ಶಿಕ್ಷಕರೊಬ್ಬರು ಮಕ್ಕಳಿಗೆ ಪ್ರಮಾಣ ವಚನ ಬೋಧಿಸಿದ ಘಟನೆ ಛತ್ತೀಸ್‌ಘಡದ ಬಿಲಾಸ್ ಪುರದಲ್ಲಿರುವ ಸರ್ಕಾರಿ ಶಾಲೆಯಲ್ಲಿ ನಡೆದಿದೆ.

ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದ ಆರೋಪದಡಿ ಶಿಕ್ಷಕ ರತನ್‌ಲಾಲ್ ಸರೋವರ್ ರನ್ನು ಬಂಧಿಸಲಾಗಿದೆ. ಮುಖ್ಯ ಶಿಕ್ಷಕನ ಸ್ಥಾನದಿಂದಲೂ ಅಮಾನತುಗೊಳಿಸಲಾಗಿದೆ.



ಜನವರಿ 22ರಂದು ಅಯೋಧ್ಯೆಯಲ್ಲಿ ರಾಮಲಲ್ಲಾನ ಪ್ರಾಣಪ್ರತಿಷ್ಠಾಪನೆ ಸಂದರ್ಭದಲ್ಲಿ ಆರೋಪಿ ಮುಖ್ಯಸ್ಥರು ಮೊಹ್ತರಾಯ್ ಗ್ರಾಮದಲ್ಲಿ ಮಕ್ಕಳು ಮತ್ತು ಜನರ ಗುಂಪನ್ನು ಒಟ್ಟುಗೂಡಿಸಿದ್ದಾರೆ. ಬಳಿಕ ಅವರಿಗೆ ಹಿಂದೂ ದೇವರುಗಳನ್ನು ನಾವು ಪೂಜಿಸುವುದಿಲ್ಲ. ಬೌದ್ಧ ಧರ್ಮವನ್ನು ಅನುಸರಿಸುತ್ತೇವೆ ಎಂದು ಪ್ರತಿಜ್ಞೆ ಮಾಡಲಾಯಿತು. ಈ ಸಂಬಂಧ ಹಿಂದೂ ಸಂಘಟನೆಯೊಂದರ ಪದಾಧಿಕಾರಿ ರೂಪೇಶ್ ಶುಕ್ಲಾ ಎಂಬವರು ಹೆಡ್ ಮಾಸ್ಟರ್ ವಿರುದ್ಧ ದೂರು ದಾಖಲಿಸಿದ್ದಾರೆ. ದೂರಿನಲ್ಲಿ ಶಿವ, ರಾಮ, ಕೃಷ್ಣಸೇರಿದಂತೆ ಹಿಂದೂ ದೇವತೆಗಳನ್ನು ಪೂಜಿಸುವುದಿಲ್ಲ ಮತ್ತು ಬೌದ್ಧ ಧರ್ಮವನ್ನು ಅನುಸರಿಸುವುದಾಗಿ ಪ್ರಮಾಣ ಮಾಡಿದ್ದಾರೆ ಎಂದು ಉಲ್ಲೇಖಿಸಲಾಗಿದೆ. ಅವರ ಈ ಕ್ರಮ ಸನಾತನ ಧರ್ಮದಲ್ಲಿ ನಂಬಿಕೆ ಇರುವ ಜನರ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಈ ವಿಚಾರ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗತೊಡಗಿತು. ಸದ್ಯ ದೂರಿನ ಆಧಾರದ ಮೇಲೆ ಹೆಡ್ ಮಾಸ್ಟರ್ ವಿರುದ್ಧ ಐಪಿಸಿ ಸೆಕ್ಷನ್ 1530 (ಧರ್ಮ, ಜಾತಿ ಆಧಾರದ ಮೇಲೆ ವಿವಿಧ ಗುಂಪುಗಳ ನಡುವೆ ದ್ವೇಷವನ್ನು ಉತ್ತೇಜಿಸುವುದು) ಮತ್ತು 2950 (ಧಾರ್ಮಿಕ ಭಾವನೆಗಳಿಗೆ ಧಕ್ಕೆ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಇಸ್ತಾಂಬುಲ್ ನ ಕ್ಯಾಥೊಲಿಕ್ ಚರ್ಚ್ ಮೇಲೆ ಮುಸುಕುಧಾರಿ ವ್ಯಕ್ತಿಗಳು ದಾಳಿ

**ಇಸ್ತಾಂಬುಲ್:** ಇಸ್ತಾಂಬುಲ್ ನ ರೋಮನ್ ಕ್ಯಾಥೊಲಿಕ್ ಚರ್ಚ್ ಮೇಲೆ ಭಾನುವಾರ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಇಬ್ಬರು ಮುಸುಕುಧಾರಿಗಳು ದಾಳಿ ನಡೆಸಿದ್ದು, ಓರ್ವ ವ್ಯಕ್ತಿ ಸಾವನ್ನಪ್ಪಿದ್ದಾರೆ. ಶಸ್ತ್ರಸಜ್ಜಿತ ದಾಳಿಕೋರರು ಬೆಳಿಗ್ಗೆ 11: 40 ಕ್ಕೆ ಸರಿಯರ್ ಜಿಲ್ಲೆಯ ಸಾಂಟಾ ಮಾರಿಯಾ ಚರ್ಚ್ ಮೇಲೆ ದಾಳಿ ನಡೆಸಿದ್ದಾರೆ ಎಂದು ಆಂತರಿಕ ಸಚಿವ ಅಲಿ ಯೆರ್ಲಿಕಾಯಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಹತ್ಯೆಗೀಡಾದ ವ್ಯಕ್ತಿಯು ಸಿಟಿ ಎಂಬ ಮೊದಲಕ್ಷರವನ್ನು ಹೊಂದಿದ್ದನು ಮತ್ತು ಅವನಿಗೆ 52 ವರ್ಷ ವಯಸ್ಸಾಗಿತ್ತು ಎಂದು ಸ್ಥಳೀಯ ಮಾಧ್ಯಮಗಳು ತಿಳಿಸಿವೆ. ಕೆಲವು ಗಂಟೆಗಳ ನಂತರ, ಇಸ್ಲಾಮಿಕ್ ಸ್ಟೇಟ್ ಉಗ್ರಗಾಮಿ ಚಳವಳಿಯ ಸದಸ್ಯರು ಎಂದು ಬಣ್ಣಿಸಿದ ಇಬ್ಬರು ವ್ಯಕ್ತಿಗಳನ್ನು ಶಂಕಿತ ದಾಳಿಕೋರರು ಎಂದು ಬಂಧಿಸಲಾಗಿದೆ ಎಂದು ಯೆರ್ಲಿಕಾಯಾ ಘೋಷಿಸಿದರು ಎಂದು ಅಸೋಸಿಯೇಟೆಡ್ ಪ್ರೆಸ್ ವರದಿ ಮಾಡಿದೆ. ಶಂಕಿತರಲ್ಲಿ ಒಬ್ಬರು ತಜಕಿಸ್ತಾನದವರು ಮತ್ತು ಇನ್ನೊಬ್ಬರು ರಷ್ಯಾದವರು ಎಂದು ಅವರು ಮಧ್ಯರಾತ್ರಿಯ ನಂತರ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.



# ಮಹಿಳಾ ಟೆಕ್ಕಿಯನ್ನು ಗುಂಡಿಕ್ಕಿ ಕೊಂದ ಬಾಯ್ ಫ್ರೆಂಡ್!



**ನವದೆಹಲಿ:** ಪುಣೆಯ ಲಾಡ್ಜ್‌ವೊಂದರಲ್ಲಿ ಆಘಾತಕಾರಿ ಘಟನೆ ನಡೆದಿದೆ. ಮಹಿಳಾ ಟೆಕ್ಕಿಯನ್ನು ಪ್ರಿಯಕರ ಗುಂಡಿಕ್ಕಿ ಕೊಂದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಪಿಂಪ್ರಿ ಚಿಂಚ್ವಾಡ್ನ ಹಿಂಜಾವಾಡಿ ಪ್ರದೇಶದ ಓಯೋ ಟೌನ್ಹೌಸ್ ಹೋಟೆಲ್ನಲ್ಲೇ ಈ ಆಘಾತಕಾರಿ ಘಟನೆ ನಡೆದಿದೆ. ಆರೋಪಿ ರಿಷಬ್ ನಿಗಮ್ನನ್ನು ಮುಂಬೈನಲ್ಲಿ ಪೊಲೀಸರು ಬಂಧಿಸಲಾಗಿದೆ ಎಂದು ವರದಿಯಾಗಿದೆ. ವಂದನಾ ದ್ವಿವೇದಿ ಪ್ರಿಯಕರನಿಂದ ಹತ್ಯೆಯಾದ ಟೆಕ್ಕಿಯಾಗಿದ್ದಾರೆ. ಹಿಂಜಾವಾಡಿಯ ಪ್ರತಿಷ್ಠಿತ ಐಟಿ ಸಂಸ್ಥೆಯಲ್ಲಿ ವಂದನಾ ಕೆಲಸ ಮಾಡುತ್ತಿದ್ದಳು. ಕೊಲೆ ಮಾಡಿರುವ ರಿಷಬ್ ನಿಗಮ್ ಉತ್ತರ ಪ್ರದೇಶದ ಲಕ್ನೋ ನಿವಾಸಿ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ 10 ವರ್ಷಗಳಿಂದ ವಂದನಾ ಮತ್ತು ರಿಷಬ್ ಪರಸ್ಪರ ಪರಿಚಿತರಾಗಿದ್ದರು. ವಂದನಾಳನ್ನು ಭೇಟಿಯಾಗಲು ರಿಷಬ್ ಪುಣೆಗೆ ಬಂದಿದ್ದ. ಇಬ್ಬರೂ ಜ.25ರಿಂದ ಹಿಂಜಾವಾಡಿಯಲ್ಲಿ ಹೋಟೆಲ್ನಲ್ಲಿಯೇ ತಂಗಿದ್ದರು. ವಂದನಾಳ ಮೇಲೆ ಅನುಮಾನ ಪಡುತ್ತಿದ್ದ ರಿಷಬ್ ಆಕೆಯನ್ನು ಕೊಲ್ಲುವ ಸಂಚಿನಿಂದಲೇ ಪುಣೆಗೆ ಬಂದಿದ್ದನೆಂದು ಪೊಲೀಸ್ ಮೂಲಗಳು ತಿಳಿಸಿವೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ರಣಬೀರ್ ಅತ್ಯುತ್ತಮ ನಟ, ಆಲಿಯಾ ಅತ್ಯುತ್ತಮ ನಟಿ



2024ನೇ ಸಾಲಿನ ಫಿಲ್ಮ್ ಫೇರ್ ಅವಾರ್ಡ್ ಕಾರ್ಯಕ್ರಮ ಜನವರಿ 28ರಂದು ಗುಜರಾತ್ ನ ಗಾಂಧಿನಗರದಲ್ಲಿ ನಡೆದಿದೆ. ಇದು 69ನೇ ಸಾಲಿನ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಗಿದ್ದು, ಕರಣ್ ಜೋಹರ್ ಅವರು ಕಾರ್ಯಕ್ರಮ ನಡೆಸಿಕೊಟ್ಟರು. ಕರೀನಾ ಕಪೂರ್, ಕರಿಷ್ಮಾ ಕಪೂರ್, ವರುಣ್ ಧವನ್, ಕಾರ್ತಿಕ್ ಆರ್ಯನ್ ಸೇರಿ ಅನೇಕ ಸೆಲೆಬ್ರಿಟಿಗಳು ಕಾರ್ಯಕ್ರಮದಲ್ಲಿ ಭಾಗಿ ಆಗಿದ್ದರು. '12ಣು ಫೇಲ್' ಸಿನಿಮಾ ಹಲವು ಅವಾರ್ಡ್ ಗಳ ಬಾಚಿಕೊಂಡಿದೆ. ಆ ಬಗ್ಗೆ ಇಲ್ಲಿದೆ ವಿವರ.

ಫಿಲ್ಮ್ ಫೇರ್ ಅವಾರ್ಡ್ ಕಾರ್ಯಕ್ರಮ ಸಾಕಷ್ಟು ಅದ್ದೂರಿಯಾಗಿ ನೆರವೇರಿತು. ಹಲವು ಸೆಲೆಬ್ರಿಟಿಗಳು ಕಾರ್ಯಕ್ರಮದಲ್ಲಿ ಭಾಗಿ ಆಗಿದ್ದರು. 'ಜವಾನ್', 'ಪಠಾಣ್' ಹಾಗೂ ಡಂಕಿ ಸಿನಿಮಾಗಳು ಹಲವು ವಿಭಾಗಗಳಲ್ಲಿ ಆಯ್ಕೆ ಆಗಿತ್ತು. ಆದರೆ, ಗೆಲುವು ಸಿಕ್ಕಿದ್ದು ಕಡಿಮೆ. 'ಅನಿಮಲ್' ಸಿನಿಮಾ ಬರೋಬ್ಬರಿ 19 ವಿಭಾಗಗಳಲ್ಲಿ ನಾಮಿನೇಟ್ ಆಗಿತ್ತು. ಯಾವ ಸಿನಿಮಾ ಯಾವ ವಿಭಾಗದಲ್ಲಿ ಗೆದ್ದಿದೆ ಎನ್ನುವ ಬಗ್ಗೆ ಇಲ್ಲಿದೆ ವಿವರ.

- **ಅತ್ಯುತ್ತಮ ಸಿನಿಮಾ (ಪಾಪ್ಯುಲರ್):'12th ಫೇಲ್'**
- **ಅತ್ಯುತ್ತಮ ಸಿನಿಮಾ (ಕ್ರಿಟಿಕ್ಸ್): ಜೋರಮ್**
- **ಅತ್ಯುತ್ತಮ ನಿರ್ದೇಶಕ: ವಿಧು ವಿನೋದ್ ಚೋಪ್ರಾ (12th ಫೇಲ್)**
- **ಅತ್ಯುತ್ತಮ ನಟ: ರಣಬೀರ್ ಕಪೂರ್ (ಅನಿಮಲ್)**



- **ಅತ್ಯುತ್ತಮ ನಟ (ಕ್ರಿಟಿಕ್ಸ್): ವಿಕ್ರಾಂತ್ ಮಾಸ್ಸಿ (12th ಫೇಲ್)**
- **ಅತ್ಯುತ್ತಮ ನಟಿ: ಆಲಿಯಾ ಭಟ್ (ರಾಕಿ ಔರ್ ರಾಣಿ ಕಿ ಪ್ರೇಮ್ ಕಹಾನಿ)**
- **ಅತ್ಯುತ್ತಮ ನಟಿ (ಕ್ರಿಟಿಕ್ಸ್): ರಾಣಿ ಮುಖರ್ಜಿ (ಮಿಸಸ್ ಚಟರ್ಜಿ ಗಿ ನಾರ್ ವೇ)**
- **ಅತ್ಯುತ್ತಮ ಪೋಷಕ ನಟ: ವಿಕ್ಕಿ ಕೌಶಲ್ (ಡಂಕಿ)**
- **ಅತ್ಯುತ್ತಮ ಪೋಷಕ ನಟಿ: ಶಬಾನ್ ಆಜ್ಮಿ (ರಾಕಿ ಔರ್ ರಾಣಿ ಕಿ ಪ್ರೇಮ್ ಕಹಾನಿ)**
- **ಅತ್ಯುತ್ತಮ ಸಾಹಿತ್ಯ: ಅಮಿತಾಭ್ ಭಟ್ಟಾಚಾರ್ಯ (ತೆರೆ ವಾಸ್ತೆ-ಜರ ಹಟ್ಕೆ ಜರ ಬಚ್ಕೆ)**
- **ಅತ್ಯುತ್ತಮ ಕಥೆ: ಅಮಿತ್ ರೈ (ಒಎಂಜಿ 2)**

# ಟ್ರೋಫಿ ಗೆದ್ದ ಬಳಿಕ ಸಲ್ಮಾನ್ ಖಾನ್ ಬಗ್ಗೆ ಮುನಾವರ್ ಪ್ರತಿಕ್ರಿಯೆ

'ಬಿಗ್ ಬಾಸ್ ಹಿಂದಿ ಸೀಸನ್ 17' ಭಾನುವಾರ ಪೂರ್ಣಗೊಂಡಿದೆ. ಬಾಲಿವುಡ್ ಸೂಪರ್ ಸ್ಟಾರ್ ಸಲ್ಮಾನ್ ಖಾನ್ ಅವರ ಶೋನ ನಡೆಸಿಕೊಟ್ಟಿದ್ದಾರೆ. ಪ್ರತಿ ಬಾರಿಯಂತೆ ಈ ಬಾರಿಯೂ ವೀಕ್ಷಕರನ್ನು ಕಾರ್ಯಕ್ರಮ ರಂಜಿಸಿದೆ. ಈ ಬಾರಿ ಯಾರು ಟ್ರೋಫಿ ಎತ್ತಿ ಹಿಡಿಯುತ್ತಾರೆ ಎಂಬ ಕುತೂಹಲ ಮೂಡಿತ್ತು. 107 ದಿನಗಳ ಬಳಿಕ ಈ ಪ್ರಶ್ನೆಗೆ ಉತ್ತರ ಸಿಕ್ಕಿದೆ. ಸ್ಟ್ಯಾಂಡಪ್ ಕಾಮಿಡಿಯನ್ ಮುನಾವರ್ ಫಾರುಕಿ ಅವರು ಕಪ್ ಎತ್ತಿ ಹಿಡಿದಿದ್ದಾರೆ. ಇದೀಗ ಕಾರ್ಯಕ್ರಮದಿಂದ ಹೊರಬಂದ ನಂತರ ಬಿಗ್ ಬಾಸ್ ವಿನ್ನರ್ ಮುನಾವರ್ ಫಾರುಕಿ ತಮ್ಮ ಮೊದಲ ಪೋಸ್ಟ್ ಹಾಕಿದ್ದಾರೆ. ಅವರು ತುಂಬಾ ಸಂತೋಷದಿಂದ ನಿರೂಪಕ ಸಲ್ಮಾನ್ ಖಾನ್ ಬಗ್ಗೆಯೂ ಮಾತನಾಡಿದ್ದಾರೆ.

ಈ ಮೊದಲು ಸ್ಟ್ಯಾಂಡ್ ಅಪ್ ಕಾಮಿಡಿ ಮಾಡುವಾಗ ಸಲ್ಮಾನ್ ಖಾನ್ ಬಗ್ಗೆ ಹಾಸ್ಯ ಮಾಡಿದ್ದರು ಮುನಾವರ್. ಇದನ್ನು ಸಲ್ಮಾನ್ ಖಾನ್ ಮನಸ್ಸಿನಲ್ಲಿ ಇಟ್ಟುಕೊಂಡಿದ್ದರು. ಬಿಗ್ ಬಾಸ್ ಮನೆಯಲ್ಲಿ ಕ್ಲಾಸ್ ತೆಗೆದುಕೊಳ್ಳುವಾಗ ಮುನಾವರ್ ಗೆ ಸಲ್ಮಾನ್ ಖಾನ್ ಸರಿಯಾಗಿ ಹೇಳಿದ್ದರು. ಇದನ್ನು ಮುನಾವರ್ ಮರೆತು ಮುಂದೆ ಸಾಗಿದ್ದಾರೆ. ಹೀಗಾಗಿ, ಸಲ್ಮಾನ್ ಬಗ್ಗೆ ಮುನಾವರ್ ಅವರು ಮೆಚ್ಚುಗೆಯ ಮಾತನ್ನು ಆಡಿದ್ದಾರೆ.

ಬಿಗ್ ಬಾಸ್ ಶೋ ಮುಗಿದ ನಂತರ ಮುನಾವರ್ ಫಾರುಕಿ ಅವರು ಇನ್ ಸ್ಟಾಗ್ರಾಮ್ ನಲ್ಲಿ ಫೋಟೋವನ್ನು






ಹಂಚಿಕೊಂಡಿದ್ದಾರೆ. ಅವರಿಗೆ ಸಲ್ಮಾನ್ ಖಾನ್ ಟ್ರೋಫಿ ನೀಡುತ್ತಿರುವುದು ಕಂಡುಬಂದಿದೆ. ಈ ವೇಳೆ ಇಬ್ಬರ ಮುಖದಲ್ಲೂ ಸಂತಸ ಎದ್ದು ಕಾಣುತ್ತಿದೆ. ಮುನಾವರ್ ಟ್ರೋಫಿಯನ್ನು ಸ್ವೀಕರಿಸಿದ ನಂತರ ಖುಷಿಯಾಗಿದ್ದಾರೆ. ಸಲ್ಮಾನ್ ಖಾನ್ ಅವರ ಅಭಿಮಾನಿ ಮುನಾವರ್. ಸಲ್ಲು ಕೈಯಿಂದ ಈ ಟ್ರೋಫಿಯನ್ನು ಸ್ವೀಕರಿಸಿ ಮುನಾವರ್ ಖುಷಿಪಟ್ಟಿದ್ದಾರೆ.

'ಜನರೇ, ನಿಮ್ಮ ಬೆಂಬಲಕ್ಕಾಗಿ ತುಂಬಾ ಧನ್ಯವಾದಗಳು. ಅಂತಿಮವಾಗಿ ಟ್ರೋಫಿ ಡೋಂಗ್ರಿ ತಲುಪಿದೆ. ದೊಡ್ಡಣ್ಣ ಸಲ್ಮಾನ್ ಖಾನ್ ಅವರ ಮಾರ್ಗದರ್ಶನಕ್ಕಾಗಿ ಅವರಿಗೆ ಅಭಿನಂದನೆಗಳು. ಮುನಾವರ್ ಅಭಿಮಾನಿಗಳಿಗೆ ಹೃತ್ಪೂರ್ವಕ ಧನ್ಯವಾದಗಳು' ಎಂದು ಅವರು ಹೇಳಿದ್ದಾರೆ. ಮುನಾವರ್ ಇನ್ನೂ ಚಿತ್ರರಂಗದ ಭಾಗವಾಗಿಲ್ಲ. ಆಗಲೇ ಅವರನ್ನು ಇನ್ ಸ್ಟಾಗ್ರಾಮ್ ನಲ್ಲಿ 11 ಮಿಲಿಯನ್‌ಗಿಂತಲೂ ಹೆಚ್ಚು ಜನರು ಫಾಲೋ ಮಾಡುತ್ತಿದ್ದಾರೆ. ಬಿಗ್ ಬಾಸ್ ಗೆದ್ದ ಬಳಿಕ ಅವರ ಖ್ಯಾತಿ ಮತ್ತಷ್ಟು ಹೆಚ್ಚಿದೆ.

ಮುನಾವರ್ ಫಾರುಕಿ ಅವರು ಟ್ರೋಫಿಯೊಂದಿಗೆ 50 ಲಕ್ಷ ರೂಪಾಯಿಗಳನ್ನು ಪಡೆದರು. ಇದಲ್ಲದೇ ಹೊಸ ಹುಂಡೈ ಕ್ರೆಟಾ ಕಾರನ್ನೂ ಪಡೆದುಕೊಂಡಿದ್ದಾರೆ. ಅವರು ಶೋನ ಅತ್ಯಂತ ದುಬಾರಿ ಸ್ಪರ್ಧಿಯೂ ಆಗಿದ್ದರು. ಅವರು ಒಂದು ವಾರಕ್ಕೆ 8 ಲಕ್ಷ ರೂಪಾಯಿ ಪಡೆದುಕೊಂಡಿದ್ದಾರೆ ಎನ್ನಲಾಗಿದೆ. ಅವರು ಸುಮಾರು 15 ವಾರಗಳ ಕಾಲ ಕಾರ್ಯಕ್ರಮದ ಭಾಗವಾಗಿದ್ದರು. ಇದಕ್ಕಾಗಿ ಸುಮಾರು 1 ಕೋಟಿ 20 ಲಕ್ಷ ರೂಪಾಯಿ ಸಂಭಾವನೆ ಪಡೆದಿದ್ದಾರೆ. ಈ ಬಾರಿ ಹಿಂದಿ ಬಿಗ್ ಬಸ್ ಕಲರ್ಸ್ ಹಾಗೂ ಜಿಯೋ ಸಿನಿಮಾದಲ್ಲಿ ಪ್ರಸಾರ ಕಂಡಿದೆ.

# 'ಪುಷ್ಪ 2' ಬಗ್ಗೆ ಗಾಸಿಪ್‌ಗೆ ಈ ಒಂದು ಪೋಸ್ಟರ್ ಸಾಕು

ಅಲ್ಲು ಅರ್ಜುನ್ ಅವರ ಅಭಿಮಾನಿಗಳಿಗೆ ಇತ್ತೀಚೆಗೆ ಒಂದು ಸಣ್ಣ ಅಳುಕು ಶುರುವಾಗಿತ್ತು. ಅಂದುಕೊಂಡ ದಿನದಲ್ಲೇ 'ಪುಷ್ಪ 2' ಸಿನಿಮಾ ರಿಲೀಸ್ ಆಗುತ್ತೋ ಅಥವಾ ಇಲ್ಲವೋ ಎಂಬ ಅನುಮಾನ ಮೂಡಿತ್ತು. ಅದಕ್ಕೆ ಕಾರಣ ಆಗಿದ್ದು ಒಂದು ಗಾಸಿಪ್. 'ಪುಷ್ಪ 2' ಸಿನಿಮಾದ ಬಿಡುಗಡೆ ದಿನಾಂಕ ಮುಂದಕ್ಕೆ ಹೋಗಿದೆ ಎಂದು ಕೆಲವರು ಗಾಳಿ ಸುದ್ದಿ ಹಬ್ಬಿಸಿದ್ದರು. ಆದರೆ ಅದು ನಿಜವಲ್ಲ ಎಂಬುದನ್ನು ಚಿತ್ರತಂಡ ಸ್ಪಷ್ಟಪಡಿಸಿದೆ. ಈ ಸಿನಿಮಾದ ನಿರ್ಮಾಪಕರೇ ಸ್ವತಃ ಸ್ಪಷ್ಟನೆ ನೀಡಿದ್ದಾರೆ. ಅದನ್ನು ತಿಳಿಸುವ ಸಲುವಾಗಿ ಒಂದು ಹೊಸ ಪೋಸ್ಟರ್ ಹಂಚಿಕೊಳ್ಳಲಾಗಿದೆ. ಅದನ್ನು ನೋಡಿದ ಬಳಿಕ ಗಾಸಿಪ್ ಮಂದಿ ಗಪ್ ಚುಪ್ ಆಗಿದ್ದಾರೆ.

'ಪುಷ್ಪ 2' ಸಿನಿಮಾಗೆ ಸುಕುಮಾರ್ ಅವರು ನಿರ್ದೇಶನ ಮಾಡುತ್ತಿದ್ದಾರೆ. ಅಲ್ಲು ಅರ್ಜುನ್ ಗೆ ಜೋಡಿಯಾಗಿ ರಶ್ಮಿಕಾ ಮಂದಣ್ಣ ನಟಿಸುತ್ತಿದ್ದಾರೆ. ಡಾಲಿ ಧನಂಜಯ್ , ಫಹಾದ್ ಫಾಸಿಲ್




ಮುಂತಾದ ಕಲಾವಿದರು ಕೂಡ ಈ ಸಿನಿಮಾದಲ್ಲಿ ಬಣ್ಣ ಹಚ್ಚುತ್ತಿದ್ದಾರೆ. ಈ ವರ್ಷ ಆಗಸ್ಟ್ 15ರಂದು 'ಪುಷ್ಪ 2' ಸಿನಿಮಾ ಬಿಡುಗಡೆ ಆಗಲಿದೆ. ಅದಕ್ಕೆ ಇನ್ನು 200 ದಿನಗಳು ಬಾಕಿ ಇವೆ ಎಂಬ ಸಂದೇಶವನ್ನು ಈ ಪೋಸ್ಟರ್ ಮೂಲಕ ಸ್ಪಷ್ಟವಾಗಿ ರವಾನಿಸಲಾಗಿದೆ. ಆ ಮೂಲಕ ಎಲ್ಲ ಗಾಸಿಪ್ ಗಳಿಗೆ ತೆರೆ ಎಳೆಯಲಾಗಿದೆ.

ಸೂಕ್ತ ದಿನಾಂಕದಲ್ಲಿ ಸಿನಿಮಾ ಬಿಡುಗಡೆ ಮಾಡುವುದು ತುಂಬ ಮುಖ್ಯ. ಅದಕ್ಕಾಗಿ ದೊಡ್ಡ ಬಜೆಟ್ ನ ಸಿನಿಮಾಗಳು ಮೊದಲೇ ರಿಲೀಸ್ ಡೇಟ್ ಲಾಕ್ ಮಾಡಿಕೊಳ್ಳುತ್ತವೆ. ಸ್ವಾತಂತ್ರ್ಯೋತ್ಸವದ ಪ್ರಯುಕ್ತ ಸರ್ಕಾರಿ ರಜೆ ಇರುತ್ತದೆ. ಅದರ ಲಾಭವನ್ನು ಪಡೆಯಲು ಹಲವು ಚಿತ್ರತಂಡಗಳು ಪ್ರಯತ್ನಿಸುತ್ತವೆ. ಆ ದಿನಾಂಕವನ್ನು ಬಿಟ್ಟುಕೊಡಲು 'ಪುಷ್ಪ 2' ಚಿತ್ರತಂಡ ಕೂಡ ಸಿದ್ಧವಿಲ್ಲ. ಅಂದುಕೊಂಡಂತೆಯೇ ಆಗಸ್ಟ್ 15ರಂದು ಈ ಸಿನಿಮಾ ಬಿಡುಗಡೆ ಆಗಲಿದೆ.

ವರದಿಗಳ ಪ್ರಕಾರ, 'ಪುಷ್ಪ 2' ಚಿತ್ರಕ್ಕೆ ಇನ್ನೂ 100 ದಿನಗಳ ಶೂಟಿಂಗ್ ಬಾಕಿ ಇದೆ. ಚಿತ್ರೀಕರಣದ ಜೊತೆಜೊತೆಯಲ್ಲೇ ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ನಡೆಯಲಿವೆ. ಬಿಡುಗಡೆಗೆ ಇನ್ನೂ 200 ದಿನ ಬಾಕಿ ಇರುವುದರಿಂದ ಅಷ್ಟರೊಳಗೆ ಎಲ್ಲ ಕೆಲಸಗಳು ಪೂರ್ಣಗೊಳ್ಳಲಿವೆ ಎಂಬ ಭರವಸೆ ಈ ತಂಡಕ್ಕಿದೆ. ಈ ವರ್ಷ ಬಹುನಿರೀಕ್ಷಿತ ಸಿನಿಮಾಗಳ ಪಟ್ಟಿಯಲ್ಲಿ 'ಪುಷ್ಪ 2' ಕೂಡ ಇದೆ. 'ಪುಷ್ಪ' ಸೂಪರ್ ಹಿಟ್ ಆಗಿದ್ದರಿಂದ ಅದರ ಸೀಕ್ವೆಲ್ ಮೇಲೆ ಅಲ್ಲು ಅರ್ಜುನ್ ಅಭಿಮಾನಿಗಳು ಭಾರಿ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಈ ಸಿನಿಮಾವನ್ನು 'ಮೈತ್ರಿ ಮೂವೀ ಮೇಕರ್ಸ್ ' ಸಂಸ್ಥೆ ನಿರ್ಮಾಣ ಮಾಡುತ್ತಿದೆ.

# ವಿರಾಟ್ ಕೊಹ್ಲಿ- ರೋಹಿತ್ ಶರ್ಮಾ ಯಾರು ಉತ್ತಮ ನಾಯಕ

ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಸೋಲಿನ ಬೆನ್ನಲ್ಲೇ ಟೀಮ್ ಇಂಡಿಯಾದ ನಾಯಕತ್ವದ ಚರ್ಚೆಗಳು ಮುನ್ನಲೆ ಬಂದಿವೆ. ಈ ಬಾರಿ ಕೂಡ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ನಡುವೆ ಯಾರು ಬೆಸ್ಟ್ ಟೆಸ್ಟ್ ಕ್ಯಾಪ್ಟನ್ ಎಂಬ ಚರ್ಚೆಗಳು ನಡೆಯುತ್ತಿದೆ.

ಇಂತಹದೊಂದು ಚರ್ಚೆ ಶುರುವಾಗಲು ಮುಖ್ಯ ಕಾರಣ ಹೈದರಾಬಾದ್ ನಲ್ಲಿ ಇಂಗ್ಲೆಂಡ್ ವಿರುದ್ಧ ಟೀಮ್ ಇಂಡಿಯಾ 28 ರನ್ ಗಳಿಂದ ಸೋಲನುಭವಿಸಿರುವುದು. ಗೆಲ್ಲಬಹುದಾಗಿದ್ದ ಈ ಪಂದ್ಯದಲ್ಲಿ ರೋಹಿತ್ ಶರ್ಮಾ ಅವರ ಕಳಪೆ ನಾಯಕತ್ವವೇ ಮುಳುವಾಯಿತು ಎಂಬ ಅಭಿಪ್ರಾಯಗಳು ಕೇಳಿ ಬರುತ್ತಿವೆ.

ಇದಕ್ಕೆ ಕಾರಣ, ದ್ವಿತೀಯ ಇನಿಂಗ್ಸ್ ನಲ್ಲಿ 163 ರನ್ ಗಳಿಗೆ 5 ವಿಕೆಟ್ ಕಳೆದುಕೊಂಡಿದ್ದ ಇಂಗ್ಲೆಂಡ್ ಆ ಬಳಿಕ 420 ರನ್ ಪೇರಿಸಿರುವುದು. ಅಂದರೆ ಬೌಲರ್ ಗಳ ಜೊತೆಗೂಡಿ ಒಲೀ ಪೋಪ್ 257 ರನ್ ಗಳನ್ನು ಕಲೆಹಾಕಿದ್ದರು. ಇದು ರೋಹಿತ್ ಶರ್ಮಾ ಅವರ ನಾಯಕತ್ವದ ವೈಫಲ್ಯಕ್ಕೆ ಸಾಕ್ಷಿ ಎನ್ನಲಾಗುತ್ತಿದೆ.

ಇದರ ಬೆನ್ನಲ್ಲೇ ಟೆಸ್ಟ್ ಕ್ರಿಕೆಟ್ ನಲ್ಲಿ ಆಕ್ರಮಣಕಾರಿ ನಾಯಕತ್ವದ ಅಗತ್ಯತೆಯಿದೆ ಎಂಬ ಅಭಿಪ್ರಾಯಗಳು ಕೂಡ ಕೇಳಿ ಬರಲಾರಂಭಿಸಿದೆ. ಈ ಹಿಂದೆ ವಿರಾಟ್ ಕೊಹ್ಲಿ ನಾಯಕತ್ವದಲ್ಲಿ ಟೀಮ್ ಇಂಡಿಯಾ ಟೆಸ್ಟ್ ಕ್ರಿಕೆಟ್ ನಲ್ಲಿ ಭರ್ಜರಿ ಪ್ರದರ್ಶನ ನೀಡಿತ್ತು.

ಟೆಸ್ಟ್ ನಲ್ಲಿ ಭಾರತ ತಂಡ ಪಾರುಪತ್ಯ ಮೆರೆಯಲು ಮುಖ್ಯ ಕಾರಣ ವಿರಾಟ್ ಕೊಹ್ಲಿಯಲ್ಲಿನ ಆಕ್ರಮಣಕಾರಿ ನಾಯಕತ್ವದ ಗುಣಗಳು. ಹೀಗಾಗಿಯೇ ರೋಹಿತ್ ಶರ್ಮಾ ಬದಲಿಗೆ ಕಿಂಗ್ ಕೊಹ್ಲಿಗೆ ಕ್ಯಾಪ್ಟನ್ ಪಟ್ಟ ನೀಡಬೇಕೆಂಬ ಅಭಿಪ್ರಾಯಗಳು ಸೋಷಿಯಲ್ ಮೀಡಿಯಾದಲ್ಲಿ ಕೇಳಿ ಬರುತ್ತಿವೆ. ಇಲ್ಲಿ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ...ಇವರಿಬ್ಬರಲ್ಲಿ ಯಾರು ಉತ್ತಮ ಟೆಸ್ಟ್ ನಾಯಕ ಎಂದು ನೋಡುವುದಾದರೆ....

**ರೋಹಿತ್ ಶರ್ಮಾ:** ಟೆಸ್ಟ್ ಕ್ರಿಕೆಟ್ ನಲ್ಲಿ ಭಾರತ ತಂಡವನ್ನು ರೋಹಿತ್ ಶರ್ಮಾ 12 ಪಂದ್ಯಗಳಲ್ಲಿ ಮುನ್ನಡೆಸಿದ್ದಾರೆ. ಈ ವೇಳೆ ಟೀಮ್ ಇಂಡಿಯಾ 6 ಪಂದ್ಯಗಳಲ್ಲಿ ಜಯ ಸಾಧಿಸಿದರೆ, 4 ಮ್ಯಾಚ್ ಗಳಲ್ಲಿ ಸೋತಿದೆ. ಇನ್ನು 2 ಪಂದ್ಯಗಳು ಡ್ರಾನಲ್ಲಿ ಅಂತ್ಯ ಕಂಡಿದೆ. ಅಂದರೆ 2022 ರಿಂದ ಭಾರತ ಟೆಸ್ಟ್ ತಂಡದ ನಾಯಕರಾಗಿರುವ ಹಿಟ್ ಮ್ಯಾನ್ ನಾಯಕತ್ವದಲ್ಲಿ ಟೀಮ್ ಇಂಡಿಯಾ ನಾಲ್ಕು ಪಂದ್ಯಗಳಲ್ಲಿ ಸೋತಿದೆ.





ಹಾಗೆಯೇ ರೋಹಿತ್ ಶರ್ಮಾ ನಾಯಕತ್ವದಲ್ಲಿ ತವರಿನಲ್ಲಿ ನಡೆದ ಕೊನೆಯ ಮೂರು ಟೆಸ್ಟ್ ಪಂದ್ಯಗಳಲ್ಲಿ ಟೀಮ್ ಇಂಡಿಯಾ 2 ಪಂದ್ಯಗಳಲ್ಲಿ ಸೋತರೆ, ಒಂದು ಮ್ಯಾಚ್ ನಲ್ಲಿ ಡ್ರಾ ಮಾಡಿಕೊಂಡಿದೆ. ಅಂದರೆ ಕಳೆದ ವರ್ಷ ಆಸ್ಟ್ರೇಲಿಯಾ ವಿರುದ್ಧದ 3ನೇ ಟೆಸ್ಟ್ ಪಂದ್ಯ ಸೋತಿದ್ದ ಭಾರತ, 4ನೇ ಪಂದ್ಯವನ್ನು ಡ್ರಾ ಮಾಡಿಕೊಂಡಿತ್ತು. ಇದೀಗ ಇಂಗ್ಲೆಂಡ್ ಎದುರು ಹೀನಾಯವಾಗಿ ಸೋಲನುಭವಿಸಿದೆ. ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶ ಎಂದರೆ ತವರಿನಲ್ಲಿ ನಡೆದ ಕಳೆದ ಮೂರು ಟೆಸ್ಟ್ ಪಂದ್ಯಗಳಲ್ಲೂ ಭಾರತ ತಂಡ ಜಯ ಸಾಧಿಸಿಲ್ಲ ಎಂಬುದು. ಇದು ಹಿಟ್ ಮ್ಯಾನ್ ಅವರ ಟೆಸ್ಟ್ ನಾಯಕತ್ವಕ್ಕೆ ಹಿಡಿದ ಕೈಗನ್ನಡಿ ಎಂದರೆ ತಪ್ಪಾಗಲಾರದು.

**ವಿರಾಟ್ ಕೊಹ್ಲಿ:** 2014 ರಿಂದ 2022 ರವರೆಗೆ ವಿರಾಟ್ ಕೊಹ್ಲಿ ಭಾರತ ತಂಡವನ್ನು 68 ಪಂದ್ಯಗಳಲ್ಲಿ ಮುನ್ನಡೆಸಿದ್ದಾರೆ. ಈ ವೇಳೆ ಟೀಮ್ ಇಂಡಿಯಾ 40 ಪಂದ್ಯಗಳಲ್ಲಿ ಜಯ ಸಾಧಿಸಿದೆ. ಹಾಗೆಯೇ 17 ಪಂದ್ಯಗಳಲ್ಲಿ ಸೋತರೆ, 11 ಪಂದ್ಯಗಳನ್ನು ಡ್ರಾ ಮಾಡಿಕೊಂಡಿದೆ. ಈ ಮೂಲಕ ಟೀಮ್ ಇಂಡಿಯಾದ ಅತ್ಯಂತ ಯಶಸ್ವಿ ಟೆಸ್ಟ್ ಕ್ಯಾಪ್ಟನ್ ಎಂಬ ದಾಖಲೆಯನ್ನೂ ಕೂಡ ವಿರಾಟ್ ಕೊಹ್ಲಿ ನಿರ್ಮಿಸಿದ್ದಾರೆ.

ವಿಶೇಷ ಎಂದರೆ 8 ವರ್ಷಗಳಲ್ಲಿ ವಿರಾಟ್ ಕೊಹ್ಲಿ ನಾಯಕತ್ವದಲ್ಲಿ ಟೀಮ್ ಇಂಡಿಯಾ ತವರಿನಲ್ಲಿ ಟೆಸ್ಟ್ ಪಂದ್ಯಗಳನ್ನು ಸೋತಿರುವುದು ಕೇವಲ 2 ಬಾರಿ ಮಾತ್ರ. ಭಾರತದಲ್ಲಿ ನಡೆದ 31 ಟೆಸ್ಟ್ ಪಂದ್ಯಗಳಲ್ಲಿ ಟೀಮ್ ಇಂಡಿಯಾವನ್ನು ಮುನ್ನಡೆಸಿರುವ ವಿರಾಟ್ ಕೊಹ್ಲಿ 24 ಪಂದ್ಯಗಳಲ್ಲಿ ಗೆಲುವು ತಂದುಕೊಟ್ಟರೆ, 5 ಪಂದ್ಯಗಳಲ್ಲಿ ಡ್ರಾ ಸಾಧಿಸಿದ್ದಾರೆ.

ಆದರೆ ಮತ್ತೊಂದೆಡೆ ರೋಹಿತ್ ಶರ್ಮಾ ತವರಿನಲ್ಲಿ 7 ಪಂದ್ಯಗಳಲ್ಲಿ ಟೀಮ್ ಇಂಡಿಯಾವನ್ನು ಮುನ್ನಡೆಸಿದ್ದಾರೆ. ಈ ವೇಳೆ ಭಾರತ ತಂಡ 4 ಮ್ಯಾಚ್ ನಲ್ಲಿ ಗೆದ್ದರೆ, 1 ಪಂದ್ಯವನ್ನು ಡ್ರಾ ಮಾಡಿಕೊಂಡಿದೆ. ಇನ್ನು ಒಂದೇ ವರ್ಷದ ಅವಧಿಯಲ್ಲಿ ರೋಹಿತ್ ಶರ್ಮಾ ನಾಯಕತ್ವದಲ್ಲಿ ಭಾರತ ತಂಡ ತವರಿನಲ್ಲಿ 2 ಪಂದ್ಯಗಳಲ್ಲಿ ಸೋಲನುಭವಿಸಿದೆ. ಹೀಗಾಗಿಯೇ ಇದೀಗ ವಿರಾಟ್ ಕೊಹ್ಲಿಯನ್ನು ಮತ್ತೆ ಟೆಸ್ಟ್ ತಂಡದ ನಾಯಕರನ್ನಾಗಿ ಮಾಡಬೇಕೆಂಬ ಅಭಿಪ್ರಾಯಗಳು ಕೇಳಿ ಬರಲಾರಂಭಿಸಿದೆ.



## ರಾಷ್ಟ್ರಪತಿ ದ್ರೌಪದಿ ಮುರ್ಮು ವಿರುದ್ಧ ಏಕವಚನ ಪ್ರಯೋಗ

# ಸಿಎಂ ವಿರುದ್ಧ ಹೆಚ್‌ಡಿ ವಾಗ್ದಾಳಿ

**ಬೆಂಗಳೂರು:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏಕವಚನದಲ್ಲಿ ಮಾತನಾಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್ .ಡಿ ಕುಮಾರಸ್ವಾಮಿ ಸರಣಿ ಟ್ವೀಟ್ ಮೂಲಕ ಹರಿಯಾದ್ದಿದ್ದಾರೆ. ''ಅಂಕೆ ಮೀರಿದ ಭಂಡತನಕ್ಕೆ ಮುಖ್ಯಮಂತ್ರಿ ನೀವೇ ಅತ್ಯುತ್ತಮ ಉದಾಹರಣೆ ಸಿದ್ದರಾಮಯ್ಯನವರೇ. ಭಾವುಕನಾಗಿ ಮಾತನಾಡುವ ಭರದಲ್ಲಿ ಗೌರವಾನ್ವಿತ ರಾಷ್ಟ್ರಪತಿಗಳನ್ನು ಏಕವಚನದಲ್ಲಿ ಸಂಬೋಧಿಸಿದೆ ಎಂದು ನೀವು ಕೊಟ್ಟಿರುವ ಸಮಜಾಯಿಷಿ ಮೊಸಳೆಯನ್ನೂ ನಾಚಿಸುವಂತಿದೆ'' ಎಂದು ಹ್ಯಾಷ್ ಟ್ಯಾಗ್ ಶಿಷ್ಟಾಚಾರಗೆಟ್ಟ ಮುಖ್ಯಮಂತ್ರಿ ಎಂದು ಸಾಮಾಜಿಕ ಜಾಲತಾಣ ಎಕ್ಸ್ (ಟ್ವಿಟರ್)ನಲ್ಲಿ ಪೋಸ್ಟ್ ಹಾಕಿದ್ದಾರೆ.

''ಗ್ರಾಮೀಣ ಸೊಗಡಿನ ವ್ಯಕ್ತಿತ್ವ ನನ್ನದು. ನಾನು ಮಾತನಾಡುವುದೇ ಹಾಗೆ..'' ಎಂದು ನೀವು ಸಮರ್ಥಿಸಿಕೊಳ್ಳುತ್ತೀರಿ. ಸಮರ್ಥನೆಗೂ ಒಂದು ಅಳತೆ, ಗೌರವ ಇರುತ್ತದೆ. ಅದಾವುದನ್ನೂ ನೀವು ಲೆಕ್ಕಕ್ಕೇ ಇಟ್ಟಿಲ. ಹೌದಲ್ಲವೇ '' ಎರಡನೇ ಸಲ ಸಿಎಂ ಆಗಿ ಎಲ್ಲಾ ರೀತಿಯ ಶಿಷ್ಟಾಚಾರದ ಸುಖ ಅನುಭವಿಸುತ್ತಿದ್ದೀರಿ ಮತ್ತು ಪಾಲಿಸುತ್ತಿದ್ದೀರಿ, ಸರಿ. ಆದರೆ, ಭಾಷೆ ವಿಚಾರದಲ್ಲಿ ನೀವು ಯಾಕೆ ಶಿಷ್ಟಾಚಾರ ಕಲಿತಿಲ್ಲ, ಪಾಲಿಸುತ್ತಿಲ್ಲ. ನಿಮ್ಮ ನಾಯಕರಾದ ಶ್ರೀಮತಿ ಸೋನಿಯಾ ಗಾಂಧಿ, ಶ್ರೀ ರಾಹುಲ್ ಗಾಂಧಿ ಅವರಿಗೆ ಏಕವಚನ ಪ್ರಯೋಗಿಸುವಿರಾ '' ಎಂದು ಪ್ರಶ್ನಿಸಿದ್ದಾರೆ. ''ಈ ಸೋಗಲಾಡಿತನವನ್ನು ಅರ್ಥ ಮಾಡಿಕೊಳ್ಳದಷ್ಟು ಮುಗ್ಧರೇ ನಮ್ಮ ಜನರು. ಸಿದ್ದರಾಮಯ್ಯನವರೇ, ನಿನ್ನೆ ದಿನ ಶೋಷಿತರ ಜಾಗೃತಿ



ಸಮಾವೇಶದಲ್ಲಿ ನಿಮ್ಮ ಭಾಷಣದಲ್ಲಿ ಭಾವುಕತೆ, ಮುಗ್ಧತೆ ಇತ್ತೇ ಸುಳ್ಳು ಹೇಳುವುದಕ್ಕೂ ಸಂಕೋಚ ಬೇಡವೇ ನಿಮ್ಮ ಭಾಷಣ ದುರಾಹಂಕಾರದ ಪರಮಾವಧಿ ಮತ್ತು ಆ ಸಮಾವೇಶದ ಕರ್ತೃ,ಕರ್ಮ, ಕ್ರಿಯೆ ಎಲ್ಲವೂ ನೀವೇ. ಹೌದೋ ಅಲ್ಲವೋ ದೇಶದ ಅತ್ಯುನ್ನತ ಸ್ಥಾನದಲ್ಲಿರುವ ಗೌರವಾನ್ವಿತ ರಾಷ್ಟ್ರಪತಿಗಳ ಬಗ್ಗೆ, ಅದರಲ್ಲೂ ಮಹಿಳೆಯ ಬಗ್ಗೆ ಏಕವಚನ ಪ್ರಯೋಗಿಸುವಾಗ ಭಾವುಕತೆಯಲ್ಲಿ ನಿಮ್ಮ ವಿವೇಕ ಸತ್ತು ಹೋಗಿತ್ತಾ '' ಎಂದು ವಾಗ್ದಾಳಿ ಮಾಡಿದ್ದಾರೆ.

ಅಂಕೆ ಮೀರಿದ ಭಂಡತನಕ್ಕೆ ಮುಖ್ಯಮಂತ್ರಿ ನೀವೇ ಅತ್ಯುತ್ತಮ ಉದಾಹರಣೆ ಸಿದ್ದರಾಮಯ್ಯ ನವರೇ. ಭಾವುಕನಾಗಿ ಮಾತನಾಡುವ ಭರದಲ್ಲಿ ಗೌರವಾನ್ವಿತ ರಾಷ್ಟ್ರಪತಿಗಳನ್ನು ಏಕವಚನದಲ್ಲಿ ಸಂಬೋಧಿಸಿದೆ ಎಂದು ನೀವು ಕೊಟ್ಟಿರುವ ಸಮಜಾಯಿಷಿ ಮೊಸಳೆಯನ್ನೂ ನಾಚಿಸುವಂತಿದೆ.

''ಎರಡು ಬಾರಿ ಸಿಎಂ ಆದವರು, ಡಿಸಿಎಂ, ಹಣಕಾಸು ಸಚಿವರೂ ಆಗಿದ್ದವರು.. ವಕೀಲರೂ, ಸ್ವಯಂಘೋಷಿತ ಸಂವಿಧಾನ ತಜ್ಞರೂ ಆಗಿರುವ ನಿಮ್ಮಂತಹ ಪಂಡಿತರೇ ಭಾವುಕತೆಯಿಂದ ಬಾಯಿ ತಪ್ಪಿದರೆ ಹೇಗೆ ಇನ್ನು ಆ ನಿಮ್ಮ ಭಾಷಣ! ಅದನ್ನು ಭಾಷಣ ಎನ್ನಲು ಸಾಧ್ಯವೇ ನಿಮ್ಮ ಭಾಷಣ ನಿಮ್ಮ ಹೃದಯದಲ್ಲಿ ತುಂಬಿದ್ದ ಅಸಹನೆಯ ನಂಜು. ಅನ್ಯಜಾತಿಗಳ ಮೇಲೆ ಮಡುಗಟ್ಟಿದ ದ್ವೇಷ. ಜಾತಿ-ಧರ್ಮಗಳ ನಡುವೆ ಬೆಂಕಿ ಇಡಲು ನೀವು ಕಕ್ಕಿದ ಕಾರ್ಕೋಟಕ ವಿಷಜ್ವಾಲೆ. ಜಾತಿ ವ್ಯವಸ್ಥೆ ಇರುವರೆಗೆ ಇಂಥ ಸಮಾವೇಶಗಳು ನಡೆಯಬೇಕು ಎನ್ನುತ್ತೀರಿ! ಅಂದರೆ ಕಾರ್ಕೋಟಕ ವಿಷಜ್ವಾಲೆ ನಿರಂತರ ಎಂದಾಯಿತು! ನಿರಂತರವಾಗಿ ಅಧಿಕಾರದಲ್ಲಿ ಸುಖಿಸಿದ ನೀವು ಶೋಷಿತ ವರ್ಗಕ್ಕೆ ಮಾಡಿದ್ದೇನು '' ಎಂದು ಕಿಡಿಕಾರಿದ್ದಾರೆ.

''ಮೀಸಲಾತಿ ಬಗ್ಗೆ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಹೇಳಿದ್ದೇನು ಅವರ ನಿಲುವು ಏನಾಗಿತ್ತು ಸಂವಿಧಾನವೇ ನನ್ನ ಧರ್ಮಗ್ರಂಥ ಎನ್ನುವ ನೀವು, ಇಷ್ಟು ಬೇಗ ಸಂವಿಧಾನ ಬರೆದವರ ಮಾತನ್ನೇ ಮರೆತರೆ ಹೇಗೆ 14 ಬಜೆಟ್ ಮಂಡಿಸಿದ ಅಪರ ವಿತ್ತವಿಶಾರದರಾದ ತಮಗೆ ಮರೆವೇ ಇನ್ನೆಷ್ಟು ವರ್ಷ ಸುಳ್ಳುಗಳನ್ನೇ ಹೇಳಿ ಸತ್ಯವನ್ನು ಸಾಗ ಹಾಕುತ್ತೀರಿ ನನ್ನಂತೆಯೇ ಶೋಷಿತ ಸಮಾಜದಿಂದ ಬಂದವರು, ಅವರ ಬಗ್ಗೆ ಅಪಾರ ಗೌರವವಿದೆ. ಅವರನ್ನು ಏಕವಚನದಲ್ಲಿ ಸಂಬೋಧಿಸಬಾರದಿತ್ತು. ಅಚಾತುರ್ಯದಿಂದ ಆಗಿರುವ ಈ ಪ್ರಮಾದಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದಿದ್ದೀರಿ. ವಿಷಾದ ವ್ಯಕ್ತಪಡಿಸುವ ಸೌಜನ್ಯ ತೋರಿಸಿದ್ದೀರಿ, ಸಂತೋಷ. ಆದರೆ; ನಿಮ್ಮ ನಂಜಿನ ವಿಷ ರಾಜ್ಯವನ್ನೆಲ್ಲಾ, ದೇಶವನ್ನೆಲ್ಲಾ ವ್ಯಾಪಿಸುತ್ತಿದೆ. ಇದಕ್ಕೆ ಏನಂತೀರಿ '' ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಬಾಗಲಕೋಟೆಗೆ ಬಾಂಗ್ಲಾ ನುಸುಳುಕೋರರು ಪ್ರವೇಶ ಮಾಡ್ತಿದ್ದಾರೆ

**ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಗೆ ಬಾಂಗ್ಲಾ ನುಸುಳುಕೋರರು ಪ್ರವೇಶ ಮಾಡ್ತಿದ್ದಾರೆ. ಈಗಾಗಲೇ ಈ ನುಸುಳುಕೋರರ ಬಗ್ಗೆ ಹಲವು ಸಂಘಟನೆಗಳು ಎಸ್ಪಿ ಹಾಗೂ ಡಿಸಿ ಅವರ ಗಮನಕ್ಕೆ ತಂದಿದ್ದಾರೆ. ಆದರೆ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಬಾಗಲಕೋಟೆಯಲ್ಲಿ ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಬಾಗಲಕೋಟೆಯಲ್ಲಿ ಮಾತನಾಡಿದ ಪ್ರಮೋದ್ ಮುತಾಲಿಕ್, ಮುಂದಿನ ದಿನಗಳಲ್ಲಿ ಬಾಂಗ್ಲಾ ದೇಶಿಯರನ್ನ ಹುಡುಕಿ, ಹುಡುಕಿ ನಾವು ಪೊಲೀಸರಿಗೆ ಒಪ್ಪಿಸಬೇಕಾಗುತ್ತೆ ಎಂಬ ಎಚ್ಚರಿಕೆ ಕೊಡ್ತಿದ್ದೇನೆ. ಇದು ಬಹಳ ಡೇಂಜರಸ್. ಇದು ಕೇವಲ ಎಸ್ಪಿ ಹಾಗೂ ಡಿಸಿಗಳ ಅಥವಾ ಇನ್ಯಾವುದೋ ಎಂಎಲ್ ಎ, ಎಂಪಿಗಳ ಪ್ರಶ್ನೆ ಅಲ್ಲ. ಸಮಾಜದ ಪ್ರಶ್ನೆ ಇದೆ, ಅವ್ರು ಹೇಗೆ ಬರ್ತಾ ಇದ್ದಾರೆ, ಎಲ್ಲಿಂದ ಬರ್ತಿದ್ದಾರೆ ಅವ್ರ ಐಡಿ, ಓಟರ್ ಕಾರ್ಡ್ ಏನು ಎಲ್ಲಿ ವಸತಿ ಮಾಡ್ತಿದ್ದಾರೆ, ಅವ್ರಿಗೆ ಯಾರೂ ಆಶ್ರಯ ಕೊಡ್ತಿದ್ದಾರೆ ಎಂಬುದನ್ನ ತಪಾಸನೆ ಮಾಡಿ ಅವ್ರನ್ನ ಒದ್ದು ಹೊರಗೆ ಹಾಕಬೇಕು. ನೀವು ಹೊರಹಾಕದೇ ಇದ್ರೆ, ನಾಮಗೆ ಗೊತ್ತಿದೆ ಅವ್ರನ್ನ ಹೇಗೆ ಹೊರಹಾಕಬೇಕು ಅನ್ನೋದು.



ಬಾಂಗ್ಲಾ ಮುಸ್ಲೀಮರ ಪ್ರವೇಶ ಆಗಿದೆ. ಅವರನ್ನ ಹೊರಹಾಕಬೇಕು ಎಂದು ಆಗ್ರಹಿಸಿದ್ದಾರೆ.

ಇನ್ನು ಇದೇ ವೇಳೆ ಮಂಡ್ಯ ಜಿಲ್ಲೆಯ ಕೆರಗೋಡಿನಲ್ಲಿ ಹನುಮ ಧ್ವಜ ತೆರವು ವಿಚಾರಕ್ಕೆ ಸಂಬಂಧಿಸಿ ಪ್ರತಿಕ್ರಿಯೆ ನೀಡಿದ್ದಾರೆ. ಈ ಕಾಂಗ್ರೆಸ್ ನವರಿಗೆ ಕೇಸರಿ ಕಂಡ್ರೆ, ಆಗಲ್ಲ. ಹಿಂದೂ, ಹಿಂದುತ್ವ ಕಂಡ್ರೆ ಆಗಲ್ಲ. ಇಡೀ ದೇಶದಲ್ಲಿ ಶ್ರೀ ರಾಮನ ಅಲೆಯಲ್ಲ, ಸುನಾಮಿಯೇ ಎದ್ದಿದೆ. ಮನೆ ಮನೆ, ಹಳ್ಳಿ ಹಳ್ಳಿಗಳಲ್ಲಿ ಆ ವೈಭವ ನೋಡಲಾಗದೇ ಹೊಟ್ಟೆ ಉರಿತಾಯಿದೆ ಇವ್ರಿಗೆ. ಕೇಸರಿ ಯಾವುದೋ ವ್ಯಕ್ತಿ, ಧರ್ಮ ಪಕ್ಷದ್ದೋ ಅಲ್ಲ, ಸಾವಿರಾರು ವರ್ಷದಿಂದ ಬಂದ ಕೇಸರಿ ಪತಾಕೆ ನಿಮಗೇನು ತೊಂದರೆ ಕೊಡ್ತಿದೆ. ಮುಸ್ಲಿಂ ವ್ಯಕ್ತಿಗಳು ಅಡ್ಡಪಡಿಸಿದ್ರೆ, ಅವ್ರಿಗೆ ಹೇಳಿ. ಇದು ಪಾಕಿಸ್ತಾನ ಅಲ್ಲ, ಅಫ್ಘಾನಿಸ್ತಾನ ಅಲ್ಲ ಎಂದು. ಭಾರತ ಇದು, ಹಿಂದೂಸ್ತಾನ್ ನಲ್ಲಿ ಕೇಸರಿ ಧ್ವಜವೇ ಹಾರಾಡುತ್ತೆ. ಇದನ್ನ ಅವ್ರಿಗೆ ಹೇಳೋದು ಬಿಟ್ಟು, ಇವತ್ತು ಕೇಸರಿ ಧ್ವಜ ಇಳಿಸುವ ಧರ್ಮ ದ್ರೋಹಿಗಳು ನೀವು ಕಾಂಗ್ರೆಸ್ ನವ್ರು.

ಯಾರೂ ಕಂಪ್ಲೇಟ್ ಕೊಡದೇ, ಯಾವುದೇ ವಿವಾದ ಇಲ್ಲದೇ ಈಗ ಅದನ್ನ ಸಡನ್ ಆಗಿ ತೆಗೆಯುವ ಕಾರಣ ಏನು 108 ಅಡಿಯ ಧ್ವಜದ ಕಂಬ ಇದೆ, ಇದನ್ನ ನೋಡಿದ್ರೆ, ಅಲ್ಲಿರುವ ನಾಗರಿಕರ, ಯುವಕರ ಉತ್ಸಾಹವನ್ನ ಮೆಚ್ಚಬೇಕು. ಶ್ರೀರಾಮನ ಮೇಲಿರುವ ಕಳಕಳಿ ಇಂದ ಜನವರಿ 22ರಂದು ಆ ಕಂಬವನ್ನ ಪ್ರತಿಷ್ಠಾಪನೆ ಮಾಡಿದ್ದಾರೆ. ಜನವರಿ 26 ರಂದು, ಹನುಮ ಧ್ವಜ ಇಳಿಸಿ ಆ ಕಂಬದ ಮೇಲೆ ರಾಷ್ಟ್ರಧ್ವಜ ಹಾರಿಸಿದ್ದಾರೆ. ಮಾರನೇಯ ದಿನ ಹನುಮ ಧ್ವಜ ಹಾಕಿದ್ದಾರೆ. ಅದೇ ಸ್ಥಳದಲ್ಲಿ ಮತ್ತೆ ಹನುಮಧ್ವಜ ಪ್ರತಿಷ್ಠಾಪನೆ ಆಗಬೇಕು ಎಂದು ಮುತಾಲಿಕ್ ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com